BV
ಕನ್ನಡ ದಿನಪತ್ರಿಕೆ
25 ಫೆಬ್ರುವರಿ । ರವಿವಾರ
25 February 2024

# ಬೆಳಗಾವಿ ವರದಿ

ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ
BELAGAVI VARADI KANNADA DAILY NEWS PAPER
ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 8 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26

## ಮುಳುಗಡೆ ಸಂತ್ರಸ್ತರ ರಕ್ಷಣೆಗೆ ಬದ್ಧ: ಡಿ.ಕೆ.ಶಿವಕುಮಾರ್



ಶಿವಮೊಗ್ಗ: ‘ಅರಣ್ಯ ಭಾಗದಲ್ಲಿರುವ ಬಡವರ ಒಕ್ಕಲೆಬ್ಬಿಸಲು ಸರ್ಕಾರ ಅವಕಾಶ ಕೊಡುವುದಿಲ್ಲ. ಎಲ್ಲ ಸಾಗುವಳಿದಾರರಿಗೂ 25 ವರ್ಷದ ಮಿತಿಯೊಳಗೆ ಅರಣ್ಯ ಹಕ್ಕು ನೀಡಲು ಹಾಗೂ ಶರಾವತಿ ಮುಳುಗಡೆ ಸಂತ್ರಸ್ತರ ರಕ್ಷಣೆಗೆ ಸರ್ಕಾರ ಬದ್ಧ’ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದರು.ನಗರದಲ್ಲಿ ಶನಿವಾರ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಜಿಲ್ಲಾಮಟ್ಟದ ಸಮಾವೇಶ ಉದ್ಘಾಟಿಸಿ ಅವರು ಮಾತನಾಡಿದರು.

‘ದೇಶದಲ್ಲಿ ಜನರ ಬದುಕು ಬದಲಿಸುವ ಕಾರ್ಯಕ್ರಮಗಳನ್ನು ಕೊಟ್ಟಿರುವುದು ಕಾಂಗ್ರೆಸ್ ಮಾತ್ರ. ಈ ಐದು ಗ್ಯಾರಂಟಿಗಳೂ ಜನರಿಗೆ ಶಕ್ತಿ ತುಂಬಿವೆ. ಸರ್ಕಾರ ಬಡತನದ ವಿರುದ್ಧ ಹೋರಾಡುತ್ತಿದೆ’ ಎಂದರು.

‘ದೇವರಾಜ ಅರಸು ಉಳುವವನಿಗೆ ಭೂಮಿ ಕೊಟ್ಟರು. ಎಸ್.ಬಂಗಾರಪ್ಪ ರೈತರಿಗೆ ಪುಕ್ಕಟೆ ಕರೆಂಟ್ ಕೊಟ್ಟರು. ಮಾನವನ ಧರ್ಮ ಶ್ರೇಷ್ಠ ಧರ್ಮ ತತ್ವದ ಮೇಲೆ ಕಾಂಗ್ರೆಸ್ ಜನರಿಗೆ ಶೈಕ್ಷಣಿಕ ಹಕ್ಕು, ಆಹಾರ ಭದ್ರತೆ ಹಕ್ಕು, ಗ್ರಾಮೀಣ ಖಾತ್ರಿ ಯೋಜನೆ, ರೈತರಿಗೆ ಭೂಮಿ, ಮನೆ ನೀಡಿದೆ. ಎಲ್ಲಾ ವರ್ಗದ ಜನರ ಬದುಕಿನಲ್ಲಿ ಬದಲಾವಣೆ ತರುವ ಯೋಜನೆ ತಂದಿದ್ದರೆ ಅದು ಕಾಂಗ್ರೆಸ್ ಮಾತ್ರ’ ಎಂದು ಹೇಳಿದರು.

‘ಬಿಜೆಪಿ ಸ್ನೇಹಿತರೇ ರೈತರ ಸಾಲ ಮನ್ನಾ ಮಾಡಿ ಅವರ ಆದಾಯ ದುಪ್ಪಟ್ಟು ಮಾಡುತ್ತೇವೆ ಎಂದು ಹೇಳಿದ್ದೀರಿ. ಮಾಡಿದಿರಾ? ಯಡಿಯೂರಪ್ಪ ಮೊದಲ ಬಾರಿ ಸಿಎಂ ಆದಾಗ ಒಂದು ಸೀರೆ, ಒಂದು ಸೈಕಲ್ ನೀಡಿದ್ದರು. ಅದನ್ನು ಬಿಟ್ಟರೆ ಬಿಜೆಪಿ ಬೇರೆ ಏನೂ ನೀಡಿಲ್ಲ. ಆ ಸೈಕಲ್ ಎಲ್ಲಿ ಹೋಯ್ತು. ಅದನ್ನು ಯಾಕೆ ನಿಲ್ಲಿಸಿದಿರಿ’ ಎಂದು ಪ್ರಶ್ನಿಸಿದರು.

‘ಗ್ರಾಮೀಣ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಲು ಸರ್ಕಾರ ಪ್ರತಿ ಎರಡು ಮೂರು ಪಂಚಾಯಿತಿಗೊಂದು ಕರ್ನಾಟಕ ಪಬ್ಲಿಕ್ ಶಾಲೆ ಆರಂಭಿಸಲು ತೀರ್ಮಾನಿಸಿದೆ. ಪ್ರತಿ ಶಾಲೆಗೆ ▯ 5 ಕೋಟಿ ವೆಚ್ಚ ಮಾಡಲಾಗುತ್ತಿದೆ’ ಎಂದರು.ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಸ್ವಾಗತಿಸಿದರು. ಕಾಂಗ್ರೆಸ್ ಜಿಲ್ಲಾ ಘಟಕದ ಅಧ್ಯಕ್ಷ ಎಚ್.ಎಸ್. ಸುಂದರೇಶ, ಮಹಿಳಾ ಘಟಕದ ಅಧ್ಯಕ್ಷೆ ಅನಿತಾಕುಮಾರಿ, ಮಾಜಿ ಸಚಿವ ಕಿಮ್ಮನೆ ರತ್ನಾಕರ, ಮಾಜಿ ಶಾಸಕರಾದ ಆಯನೂರು ಮಂಜುನಾಥ, ಆರ್. ಪ್ರಸನ್ನಕುಮಾರ್, ಡಿಸಿಸಿ ಬ್ಯಾಂಕ್ ಅಧ್ಯಕ್ಷ ಮಂಜುನಾಥ ಗೌಡ, ಮುಖಂಡರಾದ ಎಚ್.ಸಿ. ಯೋಗೀಶ, ಇಕ್ಕೇರಿ ರಮೇಶ್, ಎನ್. ರಮೇಶ, ದೇವೇಂದ್ರಪ್ಪ, ಎಂ. ಶ್ರೀಕಾಂತ್, ಜಿಲ್ಲಾ ಪಂಚಾಯಿತಿ ಸಿಇಒ ಸ್ನೇಹಲ್ ಸುಧಾಕರ ಲೋಖಂಡೆ, ಎಸ್ಪಿ ಮಿಥುನ್ ಕುಮಾರ್, ಮಹಾನಗರ ಪಾಲಿಕೆ ಆಯುಕ್ತ ಕೆ. ಮಾಯಣ್ಣಗೌಡ ಪಾಲ್ಗೊಂಡಿದ್ದರು.

## ನಾಲೆಗೆ ಟ್ರಾಕ್ಟರ್ ಪಲ್ಟಿ, 24 ಮಂದಿ ದುರ್ಮರಣ



ಲಖನೌ: ನಾಲೆಗೆ ಟ್ರಾಕ್ಟರ್ ಟ್ರಾಲಿ ಪಲ್ಟಿಯಾದ ಪರಿಣಾಮ ಮಕ್ಕಳು, ಮಹಿಳೆಯರು ಸೇರಿದಂತೆ 24 ಮಂದಿ ದುರ್ಮರಣ ಹೊಂದಿರುವ ಘಟನೆ ಉತ್ತರ ಪ್ರದೇಶದ ಕಾಸ್ಗಂಜ್ ಜಿಲ್ಲೆಯಲ್ಲಿ ಶನಿವಾರ ನಡೆದಿದೆ.

ಮಾಘ ಪೂರ್ಣಿಮೆ ಅಂಗವಾಗಿ ಗಂಗಾ ನದಿಯಲ್ಲಿ ಪವಿತ್ರ ಸ್ನಾನಕ್ಕಾಗಿ ಜೈಥಾರಾ ಮತ್ತಿತರ ಎರಡ್ಮೂರು ಗ್ರಾಮಗಳಿಂದ ಸುಮಾರು 50 ಕ್ಕೂ ಹೆಚ್ಚು ಜನರು ಟ್ರಾಕ್ಟರ್ ಟ್ರಾಲಿಯಲ್ಲಿ ಹೊರಟ್ಟಿದಾಗ ಈ ಭೀಕರ ದುರಂತ ಸಂಭವಿಸಿದೆ. ನಾಲೆಗೆ ಬಿದ್ದ ಅನೇಕರನ್ನು ರಕ್ಷಿಸಲಾಗಿದೆ. ಗಾಯಾಳುಗಳನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ ಎಂದು ಪೊಲೀಸರು ಹೇಳಿದ್ದಾರೆ.

ಕಾಸ್ಗಂಜ್ ಜಿಲ್ಲೆಯ ಗಾದಾಯಿ ಬಳಿಯ ರಿಯಾಜ್ ಗಂಜ್–ಪಾಟಿಯಾಲಿ ಲಿಂಕ್ ರಸ್ತೆಯಲ್ಲಿ ಅಪಘಾತ ಸಂಭವಿಸಿದೆ. ಹೆಚ್ಚಿನ ಪ್ರಯಾಣಿಕರಿದ್ದ ತುಂಬಿದ ಟ್ರಾಕ್ಟರ್ ಚಾಲಕನ ನಿಯಂತ್ರಣ ತಪ್ಪಿ ಅಪಘಾತ ಸಂಭವಿಸಿದೆ. ಸಂಜೆಯವರೆಗೂ ರಕ್ಷಣಾ ಮತ್ತು ಪರಿಹಾರ ಕಾರ್ಯಾಚರಣೆ ಮುಂದುವರಿದಿತ್ತು ಎಂದು ಸ್ಥಳೀಯ ಮೂಲಗಳು ತಿಳಿಸಿವೆ.

ಉತ್ತರ ಪ್ರದೇಶ: ಕೊಳಕ್ಕೆ ಬಿದ್ದ ಟ್ರ್ಯಾಕ್ಟರ್ ಟ್ರಾಲಿ; ಮಾಘ ಹುಣ್ಣಿಮೆಯ ಗಂಗಾ ಸ್ನಾನಕ್ಕೆ ತೆರಳುತ್ತಿದ್ದ 15 ಮಂದಿ ಸಾವು ಚಾಲಕ ಮತ್ತೊಂದು ವಾಹನವನ್ನು ಹಿಂದಿಕ್ಕಲು ಪ್ರಯತ್ನಿಸಿದಾಗ ಟ್ರಾಕ್ಟರ್ ಪಲ್ಟಿಯಾಗಿದ್ದು, 7–8 ಆಳದ ನಾಲೆಗೆ ಬಿದ್ದಿದೆ. ಮೃತರಲ್ಲಿ ಏಳು ಮಕ್ಕಳು, ಎಂಟು ಮಹಿಳೆಯರು ಸೇರಿದ್ದಾರೆ ಎಂದು ಅಲಿಘಡ ವಲಯದ ಇನ್ಸ್ ಪೆಕ್ಟರ್ ಜನರಲ್ ಶಲಭ್ ಮಾಥುರ್ ಪಿಟಿಐ ಸುದ್ದಿಸಂಸ್ಥೆಗೆ ತಿಳಿಸಿದ್ದಾರೆ.

ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಅಪಘಾತದಲ್ಲಿ ಮೃತಪಟ್ಟವರ ಕುಟುಂಬ ಸದಸ್ಯರಿಗೆ ಸಂತಾಪ ಸೂಚಿಸಿದ್ದಾರೆ. ಮೃತರ ಕುಟುಂಬಕ್ಕೆ ತಲಾ ರೂ. 2 ಲಕ್ಷ ಹಾಗೂ ಗಾಯಾಳುಗಳಿಗೆ ರೂ. 50,000 ಪರಿಹಾರ ಘೋಷಿಸಿದ್ದಾರೆ.

## ಎಫ್ಎಸ್.ಸಿದ್ದನಗೌಡರ ರಾಜ್ಯ ಬಿಜೆಪಿ ಮಾಧ್ಯಮ ಸದಸ್ಯರಾಗಿ ಆಯ್ಕೆ

ಬೆಂಗಳೂರು: ಕಳೆದ 2 ದಶಕಗಳಿಂದ ಬಿಜೆಪಿ ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿ ಪಕ್ಷದಲ್ಲಿ ಸೇವೆಸಲ್ಲಿಸುತ್ತಾ ಅನೇಕ ಹುದ್ದೆಗಳನ್ನು ನಿಭಾಯಿಸಿದ್ದ ಎಫ್ಎಸ್.ಸಿದ್ದನಗೌಡರ ಇಂದು ರಾಜ್ಯ ಬಿಜೆಪಿ ಮಾಧ್ಯಮ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

ಕಳೆದ 4ವರ್ಷಗಳಿಂದ ಜಿಲ್ಲಾ ಮಾಧ್ಯಮ ಸಂಚಲಕರಾಗಿ ರಾಜ್ಯದಲ್ಲಿಯೆ ಅತ್ಯತ್ತಮವಾಗಿ ಜವಾಬ್ದಾರಿ ನಿಭಾಯಿಸಿದ್ದ ಇವರು ಕಳೆದ ವಿಧಾನಸಭಾ ಚುನಾವಣೆಯಲ್ಲಿ ವಿಜಯ ಸಂಕಲ್ಪ ಯಾತ್ರೆಯ ತಂಡದಲ್ಲಿ ಉತ್ತರ ಕರ್ನಾಕದ 54 ವಿಧಾನಸಭಾ ಕ್ಷೇತ್ರಗಳಲ್ಲಿ ಯಾತ್ರೆಯುದ್ದಕ್ಕೂ ಸಂಚರಿಸಿ ರಾಜ್ಯ ಬಿಜೆಪಿ ಮಾಧ್ಯಮ ಕ್ಷೇತ್ರದಲ್ಲಿ ಯಶಸ್ವಿಯಾಗಿದ್ದರು. ಜಿಲ್ಲೆಯಲ್ಲಿ ಬಿಜೆಪಿಯ ಪ್ರತಿಯೊಂದು ಕಾರ್ಯಕ್ರಮದಲ್ಲಿ ಸಕ್ರೀಯವಾಗಿ ತೊಡಗಿಕೊಂಡು ಪಕ್ಷದಲ್ಲಿ ಮಾಡಿದ ಸೇವಾಕಾರ್ಯಗಳನ್ನು ರಾಜ್ಯ ಬಿಜೆಪಿ ಪರಿಗಣಿಸಿ ಜಿಲ್ಲೆಯ ಪದಾಧಿಕಾರಿಯಾಗುವ ಇವರ ಕನಸ್ಸನ್ನು ರಾಜ್ಯ ಪದಾಧಿಕಾರಿಯಾಗಿ ಮಾಡುವಂತೆ ಮಾಡಿದೆ. ಇವರ ಆಯ್ಕೆಗೆ ಜಿಲ್ಲೆ ಮತ್ತು ರಾಜ್ಯದಿಂದ ಪಕ್ಷದ ಕಾರ್ಯಕರ್ತರು ಅಭಿನಂದನೆಗಳ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಬಿಜೆಪಿ ಅಧ್ಯಕ್ಷ ಸುಭಾಷ ಪಾಟೀಲಮಾತನಾಡಿ,



***ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಎಫ್.ಎಸ್.ಸಿದ್ದನಗೌಡರಸತ್ಕಾರ ಸ್ವೀಕರಿಸಿ ಮಾತನಾಡಿ, ಬಿಜೆಪಿಯಲ್ಲಿ ಶ್ರಮವಹಿಸಿ ಕೆಲಸ ಮಾಡುವ ಕಾರ್ಯಕರ್ತರನ್ನು ಗುರುತಿಸಿ ಪಕ್ಷದ ಹಿರಿಯರು ರಾಜ್ಯಮಟ್ಟದ ಜವಾಬ್ದಾರಿ ನೀಡಿದ್ದು ಪಕ್ಷ ಸಂಘಟನೆಗಾಗಿ ಹಗಲಿರಳು ಶ್ರಮಿಸುವದಾಗಿ ಹೇಳಿದರು.ಸಾಮಾಜಿಕ ಜಾಲತಾಣದ ರಾಜ್ಯ ಪದಾಧಿಕಾರಿಯಾಗಿ ಆಯ್ಕೆಯಾದ ನೀತಿನ ಚೌಗಲೆಯವರನ್ನು ಸತ್ಕರಿಸಲಾಯಿತು. ಡಾ.ಕೆ.ವಿ.ಪಾಟೀಲ, ದಾದಾಗೌಡ ಬಿರಾದಾರ, ವಿಜಯ ಗುಡದರಿ, ವಿಠಲ ಸಾಯಣ್ಣವರ, ಮಹಾಂತೇಶ ಚಿನ್ನಪ್ಪಗೌಡರ, ಮಂಜುನಾಥ ಪಮ್ಮಾರ, ವೀರಭದ್ರ ಪೂಜಾರ, ಯಲ್ಲೇಶ ಕೊಲಕಾರ, ಮಹಾಂತೇಶ ಹೊಸಗೌಡ್ರ ಮುಂತಾದವರ ಇದ್ದರು.**

ರಾಜ್ಯ ಬಿಜೆಪಿ ಮಾಧ್ಯಮ ಸಮಿತಿ ಸದಸ್ಯ ಸ್ಥಾನ ಬೆಳಗಾವಿ ಜಿಲ್ಲೆಗೆ ಪ್ರಥಮವಾಗಿ ಒಲಿದು ಬಂದಿದ್ದು ಈ ಗುರುತರ ಜವಾಬ್ದಾರಿಯಲ್ಲಿ ಎಫ್.ಎಸ್.ಸಿದ್ದನಗೌಡರ ಯಶಸ್ವಿಯಾಗಲೆಂದರು ನಿಕಟ ಪೂರ್ವ ಜಿಲ್ಲಾ ಪ್ರಧಾನ ಕಾರ್ಯದರ್ಶಿಮುರಘೇಂದ್ರಗೌಡ ಪಾಟೀಲ ಮಾತನಾಡಿ, ರಾಜ್ಯ ಬಿಜೆಪಿ ಘಟಕ ಜಿಲ್ಲೆಗೆ ಹೆಚ್ಚಿನ ರಾಜ್ಯ ಪದಾಧಿಕಾರಿಗಳ ಸ್ಥಾನಮಾನ ನೀಡಿದ್ದು ಬರುವ ಲೊಕಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಅತ್ಯಂತ ಅಧಿಕಮತಗಳ ಅಂತರದಿಂದ ಗೆಲವು ಸಾಧಿಸಲು ಕಾರ್ಯಕರ್ತರ ಸಹಕಾರದೊಂದಿಗೆ ಪದಾಧಿಕಾರಿಗಳು ಹೆಚ್ಚಿನ ಶ್ರಮವಹಿಸೋಣ ಎಂದರು.



## ಟಿಎಂಸಿಗೆ ಮತ ಹಾಕದಿದ್ದಕ್ಕೆ ಆದಿವಾಸಿಗಳಿಗೆ ಚಿತ್ರಹಿಂಸೆ

ನವದೆಹಲಿ: ಪಶ್ಚಿಮ ಬಂಗಾಳದ ಸಂದೇಶ್‌ಖಾಲಿಯಲ್ಲಿ ಭೂಹಗರಣ ಮತ್ತು ಲೈಂಗಿಕ ದೌರ್ಜನ್ಯದ ಆರೋಪ ಹೊತ್ತಿರುವ ಟಿಎಂಸಿ ನಾಯಕ ಶೇಖ್ ಷಹಜಹಾನ್ ಮತ್ತು ಅವರ ಸಹಚರರು ಬಡ ಬುಡಕಟ್ಟು ಕುಟುಂಬಗಳಿಂದ ಎಂಎನ್‌ಆರ್‌ಇಜಿಎ ವೇತನವನ್ನು ಬಲವಂತವಾಗಿ ತೆಗೆದುಕೊಳ್ಳುತ್ತಾರೆ ಮತ್ತು ಟಿಎಂಸಿಗೆ ಮತ ಹಾಕದಿದ್ದಕ್ಕಾಗಿ ಆದಿವಾಸಿಗಳಿಗೆ ಚಿತ್ರಹಿಂಸೆ ನೀಡಲಾಗುತ್ತಿದೆ ಎಂದು ಪರಿಶಿಷ್ಟ ಪಂಗಡಗಳ ರಾಷ್ಟ್ರೀಯ ಆಯೋಗ(ಎನ್‌ಸಿಎಸ್‌ಟಿ) ಹೇಳಿದೆ.ಪಶ್ಚಿಮ ಬಂಗಾಳ ಪೊಲೀಸರು ಷಹಜಹಾನ್ ಮತ್ತು ಅವರ ಸಹಚರರನ್ನು “ರಕ್ಷಿಸಿದ್ದಾರೆ” ಎಂದು ಎನ್‌ಸಿಎಸ್‌ಟಿ ಉಪಾಧ್ಯಕ್ಷ ಅನಂತ ನಾಯಕ್ ನೇತೃತ್ವದ ಮೂರು ಸದಸ್ಯರ ತನಿಖಾ ತಂಡಕ್ಕೆ ದೂರುದಾರರು ತಿಳಿಸಿದ್ದಾರೆ.

ತನಿಖಾ ತಂಡ ದೆಹಲಿಗೆ ಮರಳಿದ್ದು, ವರದಿ ಸಲ್ಲಿಸುವ ಪ್ರಕ್ರಿಯೆಯಲ್ಲಿ ತೊಡಗಿದ್ದು, ಅದನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ಎನ್‌ಸಿಎಸ್‌ಟಿ ಹೇಳಿದೆ.

## ಕಾಂಗ್ರೆಸ್ ಶಾಸಕಿ ವಿಜಯಧರಣಿ ಬಿಜೆಪಿಗೆ ಸೇರ್ಪಡೆ



ನವದೆಹಲಿ: ತಮಿಳುನಾಡಿನ ಕಾಂಗ್ರೆಸ್ ಶಾಸಕಿ ವಿಜಯಧರಣಿ ಶನಿವಾರ ಇಲ್ಲಿನ ಪಕ್ಷದ ಪ್ರಧಾನ ಕಚೇರಿಯಲ್ಲಿ ಬಿಜೆಪಿಗೆ ಸೇರ್ಪಡೆಗೊಂಡರು. ಕನ್ನಿಯಕುಮಾರಿ ಜಿಲ್ಲೆಯ ವಿಲವಂಕೋಡ್‌ನಿಂದ ಮೂರು ಬಾರಿ ಶಾಸಕರಾಗಿದ್ದ ವಿಜಯಧರಣಿ ಕೇಂದ್ರ ಮಾಹಿತಿ ಮತ್ತು ಪ್ರಸಾರ ರಾಜ್ಯ ಸಚಿವ ಎಲ್. ಮುರುಗನ್ ಅವರ ಸಮ್ಮುಖದಲ್ಲಿ ಕೇಸರಿ ಪಕ್ಷ ಸೇರಿದರು.ಪಕ್ಷದ ತಮಿಳುನಾಡು ಉಸ್ತುವಾರಿ ಅರವಿಂದ್ ಮೆನನ್ ಮತ್ತಿತರರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಶುಕ್ರವಾರ ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಕಾಂಗ್ರೆಸ್ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿರುವುದಾಗಿ ವಿಜಯ ಧರಣಿ ಘೋಷಿಸಿದ್ದರು. ಅವರನ್ನು ತಮಿಳುನಾಡು ಬಿಜೆಪಿ ಅಧ್ಯಕ್ಷ ಕೆ. ಅಣ್ಣಾಮಲೈ ಪಕ್ಷಕ್ಕೆ ಸ್ವಾಗತಿಸಿದ್ದಾರೆ.

ಬಿಜೆಪಿ ಪ್ರಧಾನ ಕಛೇರಿಯಲ್ಲಿ ಮಾಧ್ಯಮಗಳನ್ನು ಉದ್ದೇಶಿಸಿ ಮಾತನಾಡಿದ ವಿಜಯಧರಣಿ ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಿಂದ ಪ್ರಭಾವಿತರಾಗಿದ್ದು, ತಮಿಳುನಾಡು ಮತ್ತು ಪಶ್ಚಿಮ ಬಂಗಾಳದಂತಹ ಕೆಲವು ರಾಜ್ಯಗಳಲ್ಲಿ ಕೇಂದ್ರದ ಯೋಜನೆಗಳನ್ನು ಜನರಿಗೆ ತಲುಪಿಸುತ್ತಿಲ್ಲ. ಸಂಸತ್ತು ಮತ್ತು ಅಸೆಂಬ್ಲಿಗಳಲ್ಲಿ ಮಹಿಳೆಯರಿಗೆ ಶೇ. 33 ರಷ್ಟು ಮೀಸಲಾತಿ ನೀಡಲು ಕಾನೂನು ಜಾರಿಗೆ ತಂದಿದ್ದಕ್ಕಾಗಿ ಕೇಂದ್ರ ಸರ್ಕಾರವನ್ನುಅಭಿನಂದಿಸುವುದಾಗಿ ತಿಳಿಸಿದರು.

ವಿಜಯ ಧರಣಿ, ಕೇಂದ್ರ ಸಚಿವ ವಿಜಯ ಧರಣಿ ಮತ್ತಿತರರು ‘ಒಂದು ರಾಷ್ಟ್ರ ಒಂದು ಚುನಾವಣೆ’, ಡಿಲಿಮಿಟೇಶನ್ ವಿರುದ್ಧ ನಿರ್ಣಯ ಮಂಡಿಸಿದ ತಮಿಳುನಾಡು ಸಿಎಂ ಎಂಕೆ ಸ್ಟಾಲಿನ್ ಈ ಮಧ್ಯೆ ವಿಜಯ ಧರಣಿ ಅವರನ್ನು ಅನರ್ಹಗೊಳಿಸಲು ಪಕ್ಷವು ತಮಿಳುನಾಡು ವಿಧಾನಸಭಾ ಸ್ಪೀಕರ್ ಸಂಪರ್ಕಿಸುತ್ತದೆ ಎಂದು ತಮಿಳುನಾಡು ಕಾಂಗ್ರೆಸ್ ಸಮಿತಿಯ ಮುಖ್ಯಸ್ಥ ಕೆ. ಸೆಲ್ವಪೆರುಂತಗೈ ಹೇಳಿದ್ದಾರೆ.



## ಕುಪೇಂದ್ರ ರೆಡ್ಡಿ ಕಡೆಯವರು ಮತ ಕೇಳಿದ್ದಾರೆ, ಆಮಿಷವೊಡ್ಡಿಲ್ಲ.: ದರ್ಶನ್ ಪುಟ್ಟಣ್ಣಯ್ಯ

ಮಂಡ್ಯ: ರಾಜ್ಯಸಭಾ ಚುನಾವಣೆ ಹಿನ್ನಲೆಯಲ್ಲಿ ನನಗೆ ಯಾವುದೇ ಬೆದರಿಕೆ ಹಾಗೂ ಆಮಿಷವೊಡ್ಡಿಲ್ಲ ಕೇವಲ ಮತ ಕೇಳಿದ್ದಾರೆ ಅಷ್ಟೇ ಎಂದು ಶಾಸಕ ದರ್ಶನ್ ಪುಟ್ಟಣ್ಣಯ್ಯ ಸ್ಪಷ್ಟನೆ ನೀಡಿದ್ದಾರೆ.

ರಾಜ್ಯಸಭಾ ಚುನಾವಣೆಯಲ್ಲಿ ತಮ್ಮ ಪರ ಮತ ಚಲಾಯಿಸುವಂತೆ ಕಾಂಗ್ರೆಸ್ ಶಾಸಕರಿಗೆ ಹಣದ ಆಮಿಷವೊಡ್ಡಿದ್ದಾರೆಂಬ ಆರೋಪ ಜೆಡಿಎಸ್–ಬಿಜೆಪಿ ಮೈತ್ರಿ ಅಭ್ಯರ್ಥಿ ಕುಪೇಂದ್ರರೆಡ್ಡಿ ವಿರುದ್ಧ ಕೇಳಿ ಬಂದಿತ್ತು.

ಈ ಕುರಿತು ಸ್ಪಷ್ಟನೆ ನೀಡಿದ ಶಾಸಕ ದರ್ಶನ್ ಪುಟ್ಟಣ್ಣಯ್ಯ ಪ್ರಜಾಪ್ರಭುತ್ವದಲ್ಲಿ ಮತಯಾಚಿಸುವುದು ಸಾಮಾನ್ಯ. ಅದರಂತೆ ಕುಪೇಂದ್ರ ರೆಡ್ಡಿ ಕಡೆಯವರು ಕರೆ ಮಾಡಿ ಮತ ಕೇಳಿದ್ದಾರೆ. ಅದು ಬಿಟ್ಟು ಬೆದರಿಕೆ ಹಾಗೂ ಆಮಿಷ ನೀಡಿಲ್ಲ ಎಂದು ಸ್ಪಷ್ಟಪಡಿಸಿದರು. ಶಾಸಕ ರವಿಕುಮಾರ್ ಗೌಡ ಗಣಿಗ ಅವರು ನನಗೆ ಕರೆ ಮಾಡಿದ್ದರು. ಆಗ ತಿಳಿಸಿದ್ದೆನು. ಅದು ಬಿಟ್ಟು ಬೇರೆ ಏನೂ ಆಗಿಲ್ಲ ಎಂದರು.

ಬೇರೆ ಶಾಸಕರಿಗೆ ಏನು ಮಾಡಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಇಲ್ಲಿ ಹೈಡ್ರಾಮ ನಡೆ–ಯುತ್ತಿದೆ. ಇದರ ಬಗ್ಗೆ ತಿಳಿದುಕೊಳ್ಳುತ್ತೇನೆ ಎಂದು ಹೇಳಿದ್ದಾರೆ.

ಟ್ರಯಲ್ ಬ್ಲಾಸ್ಟ್ ಬಗ್ಗೆ ಮಾತನಾಡಿದ ಅವರು ಇದರ ಬಗ್ಗೆ ನನ್ನ ವಿರೋಧವೂ ಇದೆ. ಆದರೆ 8 ಗ್ರಾ.ಪಂನ ಜನರು ಕೈಕುಳಿ ಮಾಡಲು ಅವಕಾಶ ನೀಡಬೇಕು, ಅಲ್ಲಿನ ಜನರಿಗೆ ಜವಾಬ್ದಾರಿ ನೀಡಬೇಕು. ಯಾವುದೇ ಕಾರಣಕ್ಕೂ ಬ್ಲಾಸ್ಟಿಂಗ್ ಮಾಡಬಾರದು ಎಂದು ಸೂಚನೆ ನೀಡಬೇಕು ಎಂದರು.

## ಯಾವ ಗುತ್ತಿಗೆದಾರನಿಂದಲೂ ಒಂದು ರೂ. ಪಡೆಯದೆ ಪ್ರಾಮಾಣಿಕ ಕೆಲಸ ಮಾಡಿದ್ದೇನೆ: ಶೋಭಾ ಕರಂದ್ಲಾಜೆ

ಚಿಕ್ಕಮಗಳೂರು: ನಮ್ಮ ಪಕ್ಷವೇ ಆಗಲಿ ವಿರೋಧ ಪಕ್ಷವೇ ಆಗಲಿ ಅಭಿವೃದ್ಧಿ ಆಧಾರದಲ್ಲಿ ಚರ್ಚೆಗೆ ಸಿದ್ದ ಎಂದು ಕೇಂದ್ರ ಕೃಷಿ ಮತ್ತು ರೈತ ಕಲ್ಯಾಣ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಸವಾಲು ಹಾಕಿದರು.ಶನಿವಾರ ನಗರದಲ್ಲಿ ಸುದ್ದಿಗಾರ ರೊಂದಿಗೆ ಮಾತ ನಾಡಿ, ನನ್ನ ಮೇಲೆ ಸುಳ್ಳು ಆರೋಪವನ್ನು ಮಾಡಲಾಗುತ್ತಿದೆ.

ನಿಜವಾದ ಬೆಜೆಪಿ ಕಾರ್ಯಕರ್ತರು ಈ ರೀತಿ ಆರೋಪವನ್ನು ಮಾಡುವುದಿಲ್ಲ. ಯಾರೋ ಈ ರೀತಿ ಮಾಡಿಸಿದ್ದಾರೆ. ಅಧಿಕಾರಕ್ಕಾಗಿ ನಮ್ಮ ಪಕ್ಷಕ್ಕೆ ಬಂದವರು ಈ ರೀತಿ ಮಾಡಿಸಿರ ಬಹುದು, ಅವರು ಹಿಂದಿದ್ದ ಪಕ್ಷದಲ್ಲಿ ಇಂತಹ ಚಾಳಿಯನ್ನು ನಡೆಸಿದ್ದಾರೆ. ಇಲ್ಲೂ ನಡೆಸಿದ್ದಾರೆ. ಇದ್ಯಾವುದಕ್ಕೂ ತಲೆ ಕಡೆಸಿಕೊಳ್ಳುವುದಿಲ್ಲ ಅಭಿವೃದ್ಧಿ ಆಧಾರದಲ್ಲಿ ಚುನಾವಣೆಗೆ ಹೋಗುತ್ತೇವೆ ಎಂದು ತಮ್ಮ ವಿರುದ್ದ ಗೋಬ್ಯಾಕ್ ಶೋಭಾ ಅಭಿಯಾನಕ್ಕೆ ತಿರುಗೇಟು ನೀಡಿದರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಟಿಕೆಟ್ ಕೇಳಲು ಎಲ್ಲರಿಗೂ ಅವಕಾಶವಿದೆ.



ಆದರೆ, ಇನ್ನೊಬ್ಬರ ತೇಜೋವಧೆ ಮಾಡುವ ಕೆಲಸ ಮಾಡಬಾರದು. ನಾವು ನಮ್ಮ ವಿರುದ್ದ ನಿಲ್ಲುವ ಅಭ್ಯರ್ಥಿಯನ್ನು ಅಲ್ಲಗಳೆಯುವುದಿಲ್ಲ. ಅಭಿವೃದ್ಧಿ ಆಧಾರದ ಮೇಲೆ ಮತದಾರರ ಬಳಿ ತೆರಳುತ್ತೇವೆ ಎಂದರು.

ಚಿಕ್ಕಮಗಳೂರು– ಉಡುಪಿ ಕ್ಷೇತ್ರಕ್ಕೆ ಎಷ್ಟು ಅನುದಾನ ತಂದಿದ್ದೇನೆಂಬ ಮಾಹಿತಿ ನನಗೂ ಇದೆ. ನಾನು ಇದುವರೆಯೂ ಯಾವ ಗುತ್ತಿಗೆದಾರನಿಂಸ ಒಂದು ರೂ.ಪಡೆದಿಲ್ಲ ಅವರ ಮುಖವನ್ನು ಕೂಡ ನೋಡಿಲ್ಲ. ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ ಎಂದರು.

ಕೇಂದ್ರದ ಮಂತ್ರಿಗಳೊಂದಿಗೆ ಜಗಳವಾಡಿ ಇಲ್ಲಿಗೆ ಅನುದಾನ ತಂದಿದ್ದೇನೆ. ಅಭಿಯಾನ, ಪತ್ರ ಚಳುವಳಿ ಯಾವುದು ಎಫೇಕ್ಟ್ ಆಗಲ್ಲ. ನಾನು ಮಂತ್ರಿಯಾಗಿ ಒಳ್ಳೇ ಕೆಲಸ ಮಾಡಿದ್ದೇನೆ. ಇದೇ ರೀತಿ ಹಿಂದಿನ ಚುನಾವಣೆ ಯಲ್ಲೂ ಮಾಡಿದ್ದರು ಎಂದು ಹೇಳಿದರು.ಅನುಧಾನ ತಂದಿರುವ ಬಗ್ಗೆ ಪ್ರಶ್ನಿಸುವಾಗ ಬಹಳ ಬುದ್ದಿವಂತಿಕೆಯಿಂದ ಕೇಳಿದ್ದಾರೆ. 2019, 20,21ರ ಅನುದಾನ ಕೇಳಿದ್ದಾರೆ.

ಆದರೆ ಆ ವರ್ಷದಲ್ಲಿ ಕೇಂದ್ರದಿಂದ ಎಂ.ಪಿಗಳಿಗೆ ನಿಧಿಯನ್ನು ಕೊಟ್ಟಿಲ್ಲ ಆ ವರ್ಷ ನಿಧಿಯನ್ನು ಕೊರೊನಕ್ಕೆ ಬಳಕೆ ಮಾಡಲಾಗಿತ್ತು. ಆರ್ ಟಿಐನಲ್ಲಿ ಕೇಳಲಾಗಿದೆ ಇದರ ಹಿಂದಿರುವ ಉದ್ದೇಶ ಕೆಟ್ಟದಿದೆ. ಇದನ್ನು ಯಾರು ಮಾಡಿದ್ದಾರೆ ಅವರು ಮುಂದೇ ಅನುಭವಿಸುತ್ತಾರೆ ಎಂದು ಹೇಳಿದರು.

## ಪ್ರಧಾನಿ ಮೋದಿಗೆ ಪತ್ರ ಬರೆದ ಸಿಎಂ ಮಮತಾ ಬ್ಯಾನರ್ಜಿ

ಕೋಲ್ಕತ್ತಾ: ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಪತ್ರ ಬರೆದಿದ್ದಾರೆ. ರಾಜ್ಯದಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಇತರ ಹಿಂದುಳಿದ ವರ್ಗಗಳ ಜನರ ಆಧಾರ್ ಕಾರ್ಡ್‌ಗಳನ್ನು ನಿಷ್ಕ್ರಿಯಗೊಳಿಸಲಾಗಿದೆ ಎಂದು ಆರೋಪಿಸಿದ್ದಾರೆ.

ಈ ಕ್ರಮವು ಸಹಜ ನ್ಯಾಯದ ಸಂಪೂರ್ಣ ಉಲ್ಲಂಘನೆಯಾಗಿದೆ ಎಂದು ಕೂಡ ಮಮತಾ ಬ್ಯಾನರ್ಜಿ ಪತ್ರದಲ್ಲಿ ಆರೋಪಿಸಿದ್ದಾರೆ. ಪಶ್ಚಿಮ ಬಂಗಾಳದ ವಿಶೇಷವಾಗಿ ಪರಿಶಿಷ್ಟ ಜಾತಿಗಳು, ಪರಿಶಿಷ್ಟ ಪಂಗಡಗಳು ಮತ್ತು ಒಬಿಸಿ ಸಮುದಾಯಗಳಿಗೆ ಸೇರಿದ ಜನರ ಆಧಾರ್ ಕಾರ್ಡ್‌ಗಳನ್ನು ನಿರ್ದಾಕ್ಷಿಣ್ಯವಾಗಿ ನಿಷ್ಕ್ರಿಯಗೊಳಿಸುವ ಗಂಭೀರ ಸ್ವರೂಪದ ಹಠಾತ್ ಬೆಳವಣಿಗೆಯನ್ನು ನಿಮ್ಮ ಗಮನಕ್ಕೆ ತರಲು ನಾನು ಬಯಸುತ್ತೇನೆ ಎಂದು ಮಮತಾ ಪತ್ರದಲ್ಲಿ ಬರೆದಿದ್ದಾರೆ. ಈ ಸಮುದಾಯದ ಸದಸ್ಯರಿಗೆ ಯಾವುದೇ ಪೂರ್ವ ಸೂಚನೆ ನೀಡದೆ ಆಧಾರ್ ಕಾರ್ಡ್‌ಗಳನ್ನು ನಿಷ್ಕ್ರಿಯಗೊಳಿಸಲಾಗಿದೆ ಎಂದು ಆರೋಪಿಸಿದ್ದಾರೆ.

## ಶೇ.60ರಷ್ಟು ಕನ್ನಡ ಕಡ್ಡಾಯ ನೀತಿ ಅನುಷ್ಠಾನದಲ್ಲಿ ವಿಫಲ: ಬಿಬಿಎಂಪಿ ಅಧಿಕಾರಿ ಅಮಾನತು!

ಬೆಂಗಳೂರು: ರಾಜ್ಯ ಸರ್ಕಾರ ಜಾರಿಗೆ ತಂದಿರುವ ನಾಮಫಲಕಗಳಲ್ಲಿ ಶೇ.60ರಷ್ಟು ಕನ್ನಡ ಕಡ್ಡಾಯ ನೀತಿಯನ್ನು ಅನುಷ್ಠಾನ ಮಾಡುವಲ್ಲಿ ವಿಫಲವಾದ ಆರೋಪದ ಮೇರೆಗೆ ಬಿಬಿಎಂಪಿ ಅಧಿಕಾರಿಯೊಬ್ಬರನ್ನು ಅಮಾನತು ಮಾಡಲಾಗಿದೆ.ಶೇ.60ರಷ್ಟು ಕನ್ನಡ ನಿಯಮ ಜಾರಿ ಮಾಡದ ಟಿ.ಸಿ.ಪಾಳ್ಯದ ಅಂಗಡಿಗಳ ನಾಮಫಲಕಕ್ಕೆ ಹಾನಿ ಮಾಡಿದ ಆರೋಪದ ಮೇಲೆ ಹಿರಿಯ ಆರೋಗ್ಯ ನಿರೀಕ್ಷಕ ಕೆ.ಎಲ್.ವಿಶ್ವನಾಥ್ ಅವರನ್ನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಅಮಾನತು ಮಾಡಿದೆ.

ಬಿಬಿಎಂಪಿ ಮಹದೇವಪುರ ವಲಯದ ಜಂಟಿ ಆಯುಕ್ತರ ಆದೇಶದ ಪ್ರಕಾರ, ರಾಜ್ಯ ಸರ್ಕಾರವು ಅಂಗಡಿಗಳಿಗೆ ನಿಯಮವನ್ನು ಜಾರಿಗೆ ತರಲು ಫೆಬ್ರವರಿ 28 ರ ಗಡುವನ್ನು ನಿಗದಿಪಡಿಸಿದೆ. ಅಧಿಕಾರಿ ತರಾತುರಿಯಲ್ಲಿ ವರ್ತಿಸಿ ಗಲಾಟೆ ಸೃಷ್ಟಿಸಿ ಬಿಬಿಎಂಪಿ ಪ್ರತಿಷ್ಠೆಗೆ ಧಕ್ಕೆ ತಂದಿದ್ದಾರೆ. ಆದ್ದರಿಂದ ಅವರ ಕ್ರಮಗಳು ಕರ್ತವ್ಯಲೋಪಕ್ಕೆ ಒಳಪಡುವುದರಿಂದ ಅವರನ್ನು ಅಮಾನತುಗೊಳಿಸಲಾಗಿದೆ ಎಂದು ಆದೇಶದಲ್ಲಿ




ತಿಳಿಸಲಾಗಿದೆ.

**ಏನಿದು ಘಟನೆ?**

ನಗರದಲ್ಲಿ ಅಂಗಡಿ ಮುಂಗಟ್ಟುಗಳು ಹಾಗೂ ವಾಣಿಜ್ಯ ಮಳಿಗೆಗಳ ಮೇಲೆ ಹಾಕಲಾಗುವ ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಭಾಷೆಗೆ ಪ್ರಾಶಸ್ತ್ಯ ನೀಡಬೇಕು ಒಂದು ವೇಳೆ ಈ ನಿಯಮ ತಪ್ಪುವ ಮಾಲೀಕರ ಮೇಲೆ ಕ್ರಮ ಕೈಗೊಳ್ಳಬೇಕು ಹಾಗೂ ಅನ್ಯಭಾಷೆಯಲ್ಲಿರುವ ಫಲಕಗಳನ್ನು ಬಟ್ಟೆಯಿಂದ ಮುಚ್ಚಬೇಕು ಎಂದು ಬಿಬಿಎಂಪಿ ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರು ಆದೇಶ ಹೊರಡಿಸಿದ್ದರು. ಕನ್ನಡ ಅನುಷ್ಠಾನ ಜಾರಿಗೊಳಿಸದ ಮಳಿಗೆಗಳ ಮೇಲೆ ಕ್ರಮ ಕೈಗೊಳ್ಳುವ ಅಧಿಕಾರವನ್ನು ಆಯಾ ವಲಯಗಳ ಹಿರಿಯ ಆರೋಗ್ಯ ಪರಿವೀಕ್ಷಕರಿಗೆ ನೀಡಲಾಗಿತ್ತು.

**ಕನ್ನಡ ಕಡ್ಡಾಯ**

ನಾಮಫಲಕಗಳಲ್ಲಿ ಶೇ.60 ರಷ್ಟು ಕನ್ನಡ ಕಡ್ಡಾಯಗೊಳಿಸುವ ಮಸೂದೆ ವಿಧಾನಸಭೆಯಲ್ಲಿ ಅಂಗೀಕಾರ ಆದರೆ, ಮಹದೇವಪುರ ವಲಯದ ಹಿರಿಯ ಆರೋಗ್ಯ ಪರಿವೀಕ್ಷಕ ವಿಶ್ವನಾಥ್ ಅವರು ಆಯುಕ್ತರ ಆದೇಶಕ್ಕೂ ಕಿಮ್ಮತ್ತು ನೀಡದೆ ಬೇಜವಾಬ್ದಾರಿತನ ಪ್ರದರ್ಶಿಸಿರುವುದು ಕಂಡು ಬಂದಿತ್ತು. ವಿಶ್ವನಾಥ್ ಅವರ ಈ ಬೇಜವಬ್ದಾರಿತನವನ್ನು ಗಂಭೀರವಾಗಿ ಪರಿಗಣಿಸಿರುವ ಮಹದೇವಪುರ ವಲಯ ಜಂಟಿ ಆಯುಕ್ತರು ಮುಖ್ಯ ಆಯುಕ್ತ ತುಷಾರ್ ಗಿರಿನಾಥ್ ಅವರ ಆದೇಶದ ಮೇರೆಗೆ ಅವರನ್ನು ಸೇವೆಯಿಂದ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ. ಅಮಾನತುಗೊಂಡಿರುವ ವಿಶ್ವನಾಥ್ ಅವರಿಗೆ ಕೆಸಿಎಆರ್ ನಿಯಮದಂತೆ ಜೀವಾನಾಧರ ಭತ್ಯೆ ನೀಡಬೇಕು ಹಾಗೂ ಅವರು ಕೇಂದ್ರ ಸ್ಥಾನಬಿಟ್ಟು ಬೇರೆಡೆಗೆ ತೆರಳದಂತೆ ನೋಡಿಕೊಳ್ಳಬೇಕು ಎಂದು ಆರೋಗ್ಯ ವೈದ್ಯಾಧಿಕಾರಿಗಳಿಗೆ ಜಂಟಿ ಆಯುಕ್ತರು ಸೂಚನೆ ನೀಡಿದ್ದಾರೆ.

## ರಾಯಚೂರು ವಿಜ್ಞಾನ ಕೇಂದ್ರವನ್ನು ಮೇಲ್ದರ್ಜೆಗೇರಿಸಲು ಅನುಮೋದನೆ



ಬೆಂಗಳೂರು: ರಾಯಚೂರಿನ ವಿಜ್ಞಾನ ಕೇಂದ್ರವನ್ನು ಕೆಟಗರಿ – 2 ವಿಜ್ಞಾನ ಕೇಂದ್ರವಾಗಿ ಅಂದಾಜು ರೂ. 22.25 ಕೋಟಿ ವೆಚ್ಚದಲ್ಲಿ ಮೇಲ್ದರ್ಜೆಗೇರಿಸಲು ರಾಜ್ಯ ಸಚಿವ ಸಂಪುಟದ ಅನುಮೋದನೆ ದೊರೆತಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಎನ್ ಎಸ್ ಭೋಸರಾಜು ಶನಿವಾರ ತಿಳಿಸಿದ್ದಾರೆ.

ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ವತಿಯಿಂದ ರಾಜ್ಯದ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಜನಸಾಮಾನ್ಯರಲ್ಲಿ ವೈಜ್ಞಾನಿಕ ಮನೋಭಾವ ಹಾಗೂ ಚಿಂತನೆಯನ್ನು ಮೂಡಿಸುವ ಉದ್ದೇಶದಿಂದ ಜಿಲ್ಲಾ ಕೇಂದ್ರಗಳಲ್ಲಿ ವಿಜ್ಞಾನ ಕೇಂದ್ರಗಳೂ ಹಾಗೂ ತಾರಾಲಯವನ್ನು ಸ್ಥಾಪಿಸಲಾಗುತ್ತಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಕಲ್ಯಾಣ ಕರ್ನಾಟಕ ಅಭಿವೃದ್ದಿ ಮಂಡಳಿಯ ಅಧ್ಯಕ್ಷನಾಗಿದ್ದ ಸಂಧರ್ಭದಲ್ಲಿ ಅಗತ್ಯ ಅನುದಾನ ನೀಡುವ ಮೂಲಕ ರಾಯಚೂರಿನಲ್ಲಿ 10 ಎಕರೆ ಪ್ರದೇಶದಲ್ಲಿ ಉಪ ಪ್ರಾದೇಶಿಕ ವಿಜ್ಞಾನ ಕೇಂದ್ರವನ್ನು ಸ್ಥಾಪಿಸಲಾಗಿತ್ತು. ಈ ವಿಜ್ಞಾನ ಕೇಂದ್ರವನ್ನು ಮೇಲ್ದರ್ಜೆಗೇರಿಸುವ ನಿಟ್ಟಿನಲ್ಲಿ ದೆಹಲಿಗೆ ತೆರಳಿ ಕೇಂದ್ರ ಸಂಸ್ಕೃತಿ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿತ್ತು. ಕೇಂದ್ರ ಸಂಸ್ಕೃತಿ ಸಚಿವ ಮನ್ಸುಖ್ ಮಾಂಡವೀಯಾ ಅವರನ್ನು ಖುದ್ದು ಭೇಟಿ ಮಾಡಿ ಉನ್ನತೀಕರಣಕ್ಕಾಗಿ ಮನವಿ ಸಲ್ಲಿಸಿದ್ದಾಗಿ ಹೇಳಿಕೆಯಲ್ಲಿ ವಿವರಿಸಿದ್ದಾರೆ.

# ರಾಜ್ಯ ಸರ್ಕಾರ ಮಾತು ತಪ್ಪಿದರೆ ಎಲ್ಲಾ ಜಿಲ್ಲೆ ಗುಡುಗುತ್ತದೆ: ನಾರಾಯಣಗೌಡ

ಬೆಳಗಾವಿ: ಫೇ.28 ರ ಒಳಗೆ ಕನ್ನಡಮಯವಾಗುತ್ತದೆ ಅಂತಾ ಸರಕಾರ ಹೇಳಿ ಸಮಯ ತೆಗೆದುಕೊಂಡಿದೆ. ಸರಕಾರ ಮಾತು ತಪ್ಪಿದರೆ 32 ಜಿಲ್ಲೆಯವರು ಗುಡುಗಬೇಕಾಗುತ್ತದೆ ಎಂದು ಕರವೇ ಅಧ್ಯಕ್ಷ ನಾರಾಯಣಗೌಡ ರಾಜ್ಯ ಸರ್ಕಾರಕ್ಕೆ ಎಚ್ಚರಿಕೆ ನೀಡಿದರು..ನಗರದ ಕನ್ನಡ ಭವನದಲ್ಲಿ ಇಂದು ಕರವೇ ರಾಜ್ಯ ಕಾರ್ಯಕಾರಣಿ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಕನ್ನಡ ಭಾಷೆ ಉಳಿವಿಗಾಗಿ ಬೆಂಗಳೂರಿನಲ್ಲಿ ದೊಡ್ಡ ಮಟ್ಟದ ಹೋರಾಟ ನಡೆಯಿತು..

ಪ್ರತಿ ಹೋರಾಟದಲ್ಲಿ ನಮಗೆ ಮಾಧ್ಯಮಗಳು ಸಾಕಷ್ಟು ಸಹಕಾರ ನೀಡುವ ಕೆಲಸ ಮಾಡಿವೆ. ನಮ್ಮ ಹೋರಾಟದಲ್ಲಿ ನಮಗೆ ಸದಾ ಬೆನ್ನೆಲುಬಾಗಿ ನಿಂತು ನಮ್ಮ ಜೈಲಿನಿಂದ ಬಿಡಿಸಿದವರು ನಮ್ಮ ವಕೀಲರು ಎಂದು ಹೇಳಿ ಮಾಧ್ಯಮ ಹಾಗೂ ವಕೀಲರಿಗೆ ಅಭಿನಂದನೆ ಸಲ್ಲಿಸಿದರು. ನಮ್ಮನ್ನ ಬಂಧಿಸಿ ನಮ್ಮನ್ನ ಇನ್ನು ಜೈಲಿಗೆ ಹಾಕಿ ಭಯ ಪಡುವುದಿಲ್ಲ. ಹೆಂಡರು ಹೋಗಲಿ ಮಕ್ಕಳು ಹೋಗಲಿ, ಕನ್ನಡ ನಮ್ಮ ಜಗತ್ತ ಬೆಳಗಿಸೊವರೆಗೂ ನಮ್ಮ ಹೋರಾಟ ನಡೆಯಲಿದೆ. ನಾಡಿನ ಸಲುವಾಗಿ ಮನೆ ಬಿಟ್ಟು ಹೊರಗೆ ಬಂದು ಹೋರಾಟ ಮಾಡುವವರು ನಾವು. ಸಿದ್ದರಾಮಯ್ಯ, ಡಿಕೆ ಶಿವಕುಮಾರ್, ಹಾಗೂ ಯಡಿಯೂರಪ್ಪ ಅವರೇ ನಿಮ್ಮ ಕೊಡುಗೆ ರಾಜ್ಯಕ್ಕೆ ಏನಾದರೂ ಇದೇನಾ? ರಾಜಕಾರಣಿಗಳ ಕೊಡುಗೆ ಬಗ್ಗೆ ಪ್ರಶ್ನೆ ಮಾಡಿದಾಗ ಬರುವ ಉತ್ತರ ಶೂನ್ಯ ಎಂದರು.ಬೆಳಗಾವಿ ಅಂತಾ ಅಂದರೆ ಬೆಳಗಾವಿ ನಮ್ಮದು ಅಂತಾ ಹೇಳಿದ್ದು ಕರವೇ ಹೋರಾಟದಿಂದ ಶುರುವಾಗಿದೆ. ಕರ್ನಾಟಕದ ಸಚಿವ ಸಂಪುಟ ಅಂದರೆ ನಮ್ಮ ಕನ್ನಡಿಗರು. ಅಪ್ಪಟ ಕನ್ನಡಿಗರು ಈ ಸಭೆಯಲ್ಲಿ ಕುಳಿತಿರುವುದೆ ನಮ್ಮ




ಸಚಿವ ಸಂಪುಟ ಎಂದರು.

ಪಾಟೀಲ ಪುಟ್ಟಪ್ಪ, ಕುವೆಂಪು ಅವರೇ ನಮ್ಮ ನಾಯಕರು, ಅವರೆ ನಮ್ಮ ದೇವರು. ನಮಗೆ ಕನ್ನಡವೇ ಧರ್ಮ, ಕನ್ನಡವೇ ಜಾತಿ. ನಿಮ್ಮದು ಯಾವುದು ಎಂದು ರಾಜಕೀಯ ನಾಯಕರ ವಿರುದ್ಧ ಅಕ್ರೋಶ ಹೊರಹಾಕಿದ ನಾರಾಯಣಗೌಡ, ನನ್ನನ್ನು ಅಡಗಿಸಿದರೆ ಕರವೇ ಮುಚ್ಚುತ್ತೆ ಎಂದು ತಿಳಿದು ಕೊಂಡಿದ್ದೀರಾ? ಕರವೇ ಬೇರು ಸಾಕಷ್ಟು ಆಳವಾಗಿದೆ, ಅದನ್ನ ಅಡಗಿಸಲು ಅಸಾಧ್ಯವಾದ ಮಾತು ಎಂದರು.ಕನ್ನಡವನ್ನ, ಕರವೇ ಅವರನ್ನ ಎದುರು ಹಾಕಿಕೊಂಡವರು ಯಾರು ಉಳದಿಲ್ಲಾ ನಮ್ಮ ಮುಂದೆ. ನಮ್ಮ ಹೆಣ್ಣ ಮಕ್ಕಳು ಶಾಲು ಹಾಕಿ ಕುತಕ್ಕೊಂಡಾರಲ್ಲಾ ಅವರೆಲ್ಲಾ ರಾಣಿ ಚೆನ್ನಮ್ಮ, ಬೆಳವಡಿ ಮಲ್ಲಮ್ಮ, ಕೆಳದಿ ಚೆನ್ನಮ್ಮ ಹೆತ್ತವರು ಅನಸುತ್ತದೆ. ನಾನು ನನ್ನ 35 ವರ್ಷದಲ್ಲಿ ನನ್ನ ಬದುಕಿನ ಬಗ್ಗೆ ಯೋಚನೆ ಮಾಡಿಲ್ಲ. ಇವತ್ತಿಗೂ ನಾನು ನನ್ನ ಬದುಕಿನ ಬಗ್ಗೆ ಯೋಚನೆ ಮಾಡಿಲ್ಲ. ನಾನು ಇವತ್ತಿಗೂ ಎದೆಗುಂದದೆ ಮಾತಾಡುವ ಶಕ್ತಿ ಕೊಟ್ಟಿದ್ದು ನೀವು ಎಂದು ಕಾರ್ಯಕರ್ತರ ಬಗ್ಗೆ ಹೊಗಳಿಕೆಯ ಮಾತುಗಳನ್ನಾಡಿದರು.

ಕನ್ನಡ ನಾಡನ್ನ ಪ್ರೀತಿಯಿಂದ ಕಟ್ಟೋಣ, ನಾವು ಯಾರನ್ನ ದ್ವೇಷ ಮಾಡಲು ಬಂದಿಲ್ಲ. ನಮ್ಮ ನಾಡು ನುಡಿ ಹಂಚಿಕೊಂಡು ಬದುಕಿ, ನಮ್ಮ ಭಾಷೆ ಹಂಚಿಕೊಂಡು ಬದುಕಿ ಎಂದು ರಾಜ್ಯದಲ್ಲಿರುವ ಹೊರ ರಾಜ್ಯದವರಿಗೆ ಎಚ್ಚರಿಕೆ ನೀಡಿದರು. ನಮ್ಮಲ್ಲಿ ಬೇರೆ ಬೇರೆ ಭಾಷೆ ಮಾತಾಡುವವರು ಇದ್ದಾರೆ.

ಆದರೆ ಕನ್ನಡ ಭಾಷೆಯನ್ನು ಪ್ರೀತಿಸುವವರು ಇದ್ದಾರೆ. ಬೆಳಗಾವಿಯಲ್ಲಿ ಇರುವ ಮರಾಠಿಗರಿಗೆ ದ ರಾ ಬೇಂದ್ರೆ ಆಗಿ ಅಂತಾ ಹೇಳುತ್ತೇವೆ. ಅದು ತಪ್ಪು ಅಂದರೆ ನಾವು ಅದನ್ನ ಒಪ್ಪಿಕ್ಕೊಳುವುದಿಲ್ಲ. ತಕ್ಕ ಉತ್ತರ ಕೊಡಬೇಕಾಗುತ್ತದೆ ಎಂದರು.

ನಾನು ಸುಪ್ರೀಂ ಕೋರ್ಟಗೆ ಹೋಗುತ್ತೇನೆ ಅಂತ ಯಾವನೋ ಮರಾಠಿಯವನು ಹೇಳುತ್ತಿದ್ದಾನೆ. ಹೋಗರಪಾ ನಾವು ಬೇಡಾ ಅಂದಿದ್ದೇವಾ? ಸುಪ್ರೀಂ ಕೋರ್ಟ್‌ಗಾದರೂ ಹೋಗಿ ಅವರ ಅಪ್ಪನ ಕೋರ್ಟ್‌ಗಾದರೂ ಹೋಗಿ. ಇಲ್ಲಿರುವ ಎಂಇಎಸ್‌ನವರಿಗೆ ಬೆಳಗಾವಿ ಕಾರ್ಪೊರೇಟರ್ ಆಗಲಿಕೆ ಆಗಲ್ಲ. ಗಾಂಚಾಲಿ ಬಿಡಿ ಸರಿಯಾಗಿ ಇರಿ ಎಂದು ಎಂಇಎಸ್ ನಾಯಕರಿಗೆ ತಿರುಗೇಟು ನೀಡಿದರು.

ಕರ್ನಾಟಕ ಸರಕಾರ ಬಸವಣ್ಣನವರನ್ನ ಸಾಂಸ್ಕೃತಿಕ ನಾಯಕ ಎಂದು ಘೋಷಣೆ ಮಾಡಿದ್ದು ಸಂತೋಷ. ಆದರೆ ಬಸವಣ್ಣನವರ ವಚನ ನಿಮ್ಮ ಸಚಿವ ಸಂಪುಟದವರಿಗೆ ಅನ್ವಯಿಸುತ್ತಾ? ಕೇವಲ ಬಸವಣ್ಣನವರ ಪೋಟೋ ಹಾಕಿದರೆ ಸಾಕಾ? ಅವರ ಸಿದ್ಧಾಂತಾ ಬೇಡವೇ ಸಿದ್ದರಾಮಯ್ಯ ಅವರೇ ಎಂದು ಕೇಳಿದರು.

ರಾಜ್ಯದಲ್ಲಿ ಒಬ್ಬ ಅಧಿಕಾರಿಯನ್ನ ನೇಮಕ ಮಾಡಬೇಕಾದರೆ ಲಂಚ ತಗೊಂಡು ನೇಮಕ ಮಾಡತ್ತೀರಿ. ಲಂಚ ಕೊಟ್ಟು ನೇಮಕವಾದ ವ್ಯಕ್ತಿ ಲಂಚ ಹೊಡಿಯಲಿಕೆ ಶುರು ಮಾಡುತ್ತಾನೆ. ಅಧಿಕಾರಿಗಳು ಬಂಡವಾಳ ಹೂಡತ್ತಾನೆ, ಲಂಚಾ ತಿನ್ನುತ್ತಾನೆ ಎಂದು ವಾಗ್ದಾಳಿ ನಡೆಸಿದ ನಾರಾಯಣಗೌಡ, ಕನ್ನಡ ನಾಡಿಗಾಗಿ ಹೋರಾಟ ಮಾಡುವವರ ಮೇಲೆ ಇಲ್ಲ ಸಲ್ಲದ ಪ್ರಕರಣ ದಾಖಲಿಸುತ್ತೀರಿ. ನಾಚಿಕೆ ಆಗಬೇಕು ನಿಮಗೆ ಎಂದು ಛೀಮಾರಿ ಹಾಕಿದರು.

ಒಬ್ಬ ಪುಣ್ಯಾತ್ಮ ಮೂರು ವರ್ಷ ಹೋರಾಟ ಮಾಡಬೇಡಿ ಅಂತಾ ನನಗೆ ಹೇಳಿದ್ದ. ಹೋರಾಟ ಮಾಡಬೇಡಿ ಅಂದಿದ್ದಕ್ಕೆ ನಾನು ಹೋರಾಟ ಮಾಡಿದ್ದೇನೆ. ಕಾವೇರಿಗಾಗಿ ಹೋರಾಟ ಮಾಡಿದೆ ಅದಕ್ಕೂ ಬಂಧಿಸಿದರು.

ಬೆಂಗಳೂರಿನಲ್ಲಿ ತಮಿಳುನಾಡಿನವರು ಮೂರ್ತಿ ಸ್ಥಾಪನೆ ವಿಚಾರವಾಗಿ ಅದಕ್ಕೂ ಹೋರಾಟ ಮಾಡಿದೆ, ಅವಾಗಲೂ ಬಂಧಿಸಿದರು. ಹೋರಾಟ ವಿಚಾರದಲ್ಲಿ ನಾನು ಯಾರಿಗೂ ಹೊಂದಾಣಿಕೆ ಆಗಲ್ಲ. ಕನ್ನಡ ಸುದ್ದಿಗೆ ಬಂದರೆ ಸಿದ್ದರಾಮಯ್ಯ ಅವರೇ ಮಾನ ಉಳಿಸಾಂಗಿಲ್ಲಾ ಎಂದು ಸಾರಿ ಸಾರಿ ಹೇಳುವುದಕ್ಕೆ ಬರುವುದು ರಕ್ಷಣಾ ವೇದಿಕೆಗೆ ಮಾತ್ರ ಎಂದರು. ಈ ವೇಳೆ ಕರವೇ ಜಿಲ್ಲಾಧ್ಯಕ್ಷ ದೀಪಕ್ ಗುಡಗನಟ್ಟಿ, ಮಹಾದೇವ ತಳವಾರ, ಸುರೇಶ ಗವಣ್ಣವರ ಸೇರಿದಂತೆ ನೂರಾರು ಕಾರ್ಯಕರ್ತರು ಇದ್ದರು.

# ಬೇಸಿಗೆ ಕಾಲದಲ್ಲಿ ಕಾಡುವ ಉಷ್ಣದ ಗುಳ್ಳೆಗಳು

ಬೇಸಿಗೆ ಕಾಲ ಈಗಷ್ಟೇ ಶುರುವಾಗುತ್ತಿದೆ. ಬಿಸಿಲು ನಿಧಾನಕ್ಕೆ ಹೆಚ್ಚಾಗುತ್ತಿದೆ. ಮಧ್ಯಾಹ್ನದ ಸಮಯದಲ್ಲಿ ದಿನೇ ದಿನೇ ಧಗೆ ಏರುತ್ತಿದೆ. ಇದರ ಪರಿಣಾಮವಾಗಿ ಉಷ್ಣತೆ ಹೆಚ್ಚಾಗುತ್ತಿದ್ದಂತೆ ಬಾಯಾರಿಕೆಯಾಗುವ ಜೊತೆಗೆ ಮೈಯಿಂದ ವಿಪರೀತ ಬೆವರು ಬರುತ್ತದೆ. ಕೆಲವೊಮ್ಮೆ ಬೆವರಿನ ಜೊತೆಗೆ ವಾತಾವರಣದ ಧೂಳು ಮತ್ತು ಕೊಳೆ ಸೇರಿ ಕೊಂಡು ಸೆಖೆ ಅಥವಾ ಉಷ್ಣದ ಗುಳ್ಳೆಗಳು ಉಂಟಾಗುತ್ತವೆ.

**ಉಷ್ಣದ ಗುಳ್ಳೆಗಳು ಮೂಡುವ ಲಕ್ಷಣಗಳು**

ದೇಹದಲ್ಲಿ ಕೈ, ಕಾಲು, ತೋಳು ಹೀಗೆ ಯಾವುದೇ ಭಾಗದಲ್ಲಿ ಉಷ್ಣದ ಗುಳ್ಳೆಗಳು ಉಂಟಾಗಬಹುದು. ಬಿಸಿಲು ಹೆಚ್ಚಿದಂತೆ ಚರ್ಮದ ಬಣ್ಣ ಕೆಂಪು ಬಣ್ಣಕ್ಕೆ ತಿರುಗಿ ಗುಳ್ಳೆಗಳು ಉರಿಯುತ್ತವೆ. ಹಿರಿಕಿರಿಯರೆಲ್ಲರನ್ನು ಸಾಮಾನ್ಯವಾಗಿ ಕಾಡುವ ಸಮಸ್ಯೆ ಇದು. ಸುಡು ಬಿಸಿಲಿನ ನಡುವೆ ಉಷ್ಣದ ಗುಳ್ಳೆಗಳು, ಚರ್ಮದ ಉರಿ ಹಾಗೂ ತುರಿಕೆ ತೊಂದರೆ ಕೊಡುತ್ತವೆ.

**ಉಷ್ಣದ ಗುಳ್ಳೆಗಳಿಗೆ ಮನೆಮದ್ದು**

ಎರಡು–ಮೂರು ವೀಳ್ಯದ ಎಲೆಗಳನ್ನು ತೆಗೆದುಕೊಂಡು ಅವುಗಳನ್ನು ಸ್ವಲ್ಪ ಬಿಸಿ ಮಾಡಿ ಮೇಲೆ ಕೆಲವು ಹನಿಗಳಷ್ಟು ಹರಳೆಣ್ಣೆ ಹಾಕಿ ಉಷ್ಣದ ಗುಳ್ಳೆಗಳು ಉಂಟಾಗಿರುವ ಜಾಗದಲ್ಲಿ ಸ್ವಲ್ಪ ಹೊತ್ತು ಇಡಬೇಕು. ಇದರಿಂದ ಉರಿಯು ಶಮನವಾಗುತ್ತದೆ. ಹಾಗೇ ವೀಳ್ಯದ ಎಲೆಗಳ ರಸ ತೆಗೆದುಕೊಂಡು ಉಷ್ಣದ ಗುಳ್ಳೆಗಳ ಮೇಲೆ ಹಚ್ಚಿ ಒಂದೆರಡು ದಿನಗಳಲ್ಲಿ ಪರಿಹಾರ ಕಂಡುಕೊಳ್ಳಬಹುದು.

ಸ್ವಲ್ಪ ಹತ್ತಿಯನ್ನು ತೆಗೆದುಕೊಂಡು ಅದನ್ನು ಉಂಡೆ ಮಾಡಿ ಅಥವಾ ಸ್ವಚ್ಛವಾಗಿರುವ ಹತ್ತಿ ಬಟ್ಟೆಯನ್ನು ತೆಗೆದುಕೊಂಡು ಅದನ್ನು ನೀರಿನಲ್ಲೆ ನೆನೆಸಿ ಉಷ್ಣದ/ಬೆವರು ಗುಳ್ಳೆಗಳನ್ನು ನಿಧಾನವಾಗಿ ಸ್ವಚ್ಛಮಾಡಿಕೊಳ್ಳಬೇಕು. ಗುಳ್ಳೆಗಳ ಮೇಲೆ ತೆಳುವಾಗಿ ಹರಳೆಣ್ಣೆ/ಕೊಬ್ಬರಿ ಎಣ್ಣೆ ಹಚ್ಚಿದರೂ ಸಮಸ್ಯೆ ಉಪಶಮನ ಸಾಧ್ಯ. ಹೀಗೆ ಬೇವಿನ ಎಣ್ಣೆಯನ್ನೂ ಬಳಸಬಹುದು.ಹರಳೆಣ್ಣೆಗೆ ನಂಜು ನಿರೋಧಕ ಶಕ್ತಿ



ಇದೆ. ಹತ್ತಿಯನ್ನು ಹರಳೆಣ್ಣೆಯಲ್ಲಿ ನೆನೆಸಿ ಅದನ್ನು ಗುಳ್ಳೆಯ ಮೇಲೆ ಇಡುತ್ತಾ ಬರಬೇಕು.

ಬೆಚ್ಚಗಿರುವ ನೀರಿಗೆ ಕಲ್ಲು ಉಪ್ಪು ಬೆರೆಸಿ ಸ್ವಲ್ಪ ಹೊತ್ತು ಸ್ನಾನ ಮಾಡಿದರೆ ಚರ್ಮದ ಸೋಂಕು ಕಡಿಮೆಯಾಗುತ್ತದೆ. ಉಷ್ಣದ ಗುಳ್ಳೆಗಳಾಗಿದ್ದರೆ ಕ್ರಮೇಣ ಮಾಯವಾಗುತ್ತವೆ.

ಗುಳ್ಳೆಗಳು ಉರಿದಾಗ ಅಥವಾ ಅವುಗಳಿಂದ ಕಿರಿಕಿರಿಯಾದರೆ ಹಿಸುಕಬಾರದು ಮತ್ತು ಹೆಚ್ಚು ಕೆರೆದುಕೊಳ್ಳಬಾರದು. ಹಾಗೆ ಮಾಡಿದರೆ ಅವುಗಳು ಮತ್ತಷ್ಟು ಹರಡುವ ಸಾಧ್ಯತೆ ಇದೆ.

ಕರ್ಪೂರವನ್ನು ಬೇವಿನ ಎಣ್ಣೆಯ ಜೊತೆಗೆ ಸೇರಿಸಿ ಗುಳ್ಳೆಗಳ ಮೇಲೆ ಹಚ್ಚಿ ಸ್ವಲ್ಪ ಕಾಲ ಬಿಟ್ಟರೂ ಸರಿಯೇ.

ಅಲೋವೆರಾ ಅಥವಾ ಲೋಳೆಸರ ಚರ್ಮದ ಎಲ್ಲಾ ಸಮಸ್ಯೆಗಳಿಗೂ ಮದ್ದು. ಅಲೋವಿರಾದ ರಸ ತೆಗೆದು ಅದಕ್ಕೆ ಉರಿಯೂತ ನಿವಾರಕ ಅರಸಿನವನ್ನು ಬೆರೆಸಿ ಬಾಧಿತ ಭಾಗಕ್ಕೆ ಹಗುರಾಗಿ ಹಚ್ಚಬೇಕು. ಇದು ಸೂಕ್ಷ್ಮಾಣುಜೀವಿಗಳನ್ನು ನಿವಾರಿಸುತ್ತದೆ. ಪ್ರತಿ ದಿನ 1–2 ಬಾರಿ ಈ ರೀತಿ ಮಾಡಿದರೆ ಬಹುಬೇಗ ಸಮಸ್ಯೆ ನಿವಾರಣೆಯಾಗುತ್ತದೆ. ಜೊತೆಗೆ ಇದು ಚರ್ಮದಲ್ಲಿ ನೀರಿನ ಅಂಶ ಕಡಿಮೆಯಾಗದಂತೆ ನೋಡಿಕೊಳ್ಳುತ್ತದೆ.

ತುಳಸಿ ರಸ, ಅರಿಷಿಣ ಮತ್ತು ಸ್ವಲ್ಪ ಬೇವಿನ ಎಲೆಗಳನ್ನು ಸೇರಿಸಿ ಪೇಸ್ಟ್ ಮಾಡಿಟ್ಟುಕೊಳ್ಳಿ. ಇದನ್ನು ಪ್ರತಿ ದಿನ ಉಷ್ಣದ ಗುಳ್ಳೆಗಳಿಗೆ ಹಚ್ಚಿದರೆ ಸಮಸ್ಯೆಗಳು ದೂರವಾಗುತ್ತದೆ.

**ಬಿಸಿಲು ಗುಳ್ಳೆಗಳಿಗೆ ಪರಿಹಾರ**

ಉಷ್ಣದ ಗುಳ್ಳೆಗಳಿಗೆ ಉತ್ತಮ ಪರಿಹಾರವೆಂದರೆ ಚರ್ಮವನ್ನು ನೀರಿನಿಂದ ತೊಳೆದು ಸ್ವಚ್ಛವಾಗಿರಿಸುವುದು. ಹೊರಗೆ ಹೋದಾಗ ಅಥವಾ ಕೆಲವೊಮ್ಮೆ ಮನೆಯಲ್ಲಿ ಇದ್ದಾಗಲೂ ದಿನವು ತಣ್ಣೀರಿನಿಂದ ಸ್ನಾನ ಮಾಡಿ ಚರ್ಮವನ್ನು ಶುದ್ಧವಾಗಿ ಇಟ್ಟುಕೊಳ್ಳುವುದು ಬಹಳ ಉತ್ತಮ. ದಿನವೂ ಬಳಕೆ ಮಾಡುವ ಟವೆಲ್ ಮತ್ತು ಬಟ್ಟೆ ಸ್ವಚ್ಛವಾಗಿರಬೇಕು. ಮೃದುವಾಗಿರುವ ಕಾಟನ್ ಟವೆಲ್ಲನ್ನು ಬಳಸಬೇಕು. ಯಾವಾಗಲೂ ಒಂದು ಕರ್ಚೀಫನ್ನು ಇಟ್ಟುಕೊಂಡು ಅದನ್ನು ಸ್ವಚ್ಛವಾದ ನೀರಿನಲ್ಲಿ ಅದ್ದಿ ಮುಖ, ಕುತ್ತಿಗೆ ಮತ್ತು ಕುತ್ತಿಗೆಯ ಭಾಗವನ್ನು ಒರೆಸಿಕೊಳ್ಳಬೇಕು.

**ಬಿಸಿಲು ಗುಳ್ಳೆಗಳು ಬರದಂತೆ ತಡೆಯಲು ಕೆಲವು ಸಲಹೆ...**

ಬೇಸಿಗೆ ಕಾಲದಲ್ಲಿ ನೀರನ್ನು ಸಾಕಷ್ಟು ಕುಡಿಯಬೇಕು. ಚರ್ಮದ ಆರೋಗ್ಯಕ್ಕೆ ನೀರು ಬಹಳ ಸಹಕಾರಿ. ಕಲವರು ಮನೆಯಲ್ಲಿ ಮಣ್ಣಿನ ಮಡಿಕೆಯಲ್ಲಿಟ್ಟ ತಣ್ಣನೆಯ ನೀರನ್ನು ಕುಡಿಯುತ್ತಾರೆ. ಇದು ಬಹಳ ಉತ್ತಮ. ತಾಮ್ರದ ಬಿಂದಿಗೆಯಲ್ಲಿ ನೀರು ತುಂಬಿ ಅದಕ್ಕೆ ಸುತ್ತಲೂ ತಣ್ಣೀರು ಬಟೆಕಟ್ಟಿ ನೀರನ್ನು ತಂಪು ಮಾಡಿ ಕುಡಿಯುತ್ತಾರೆ. ಇದು ಒಳ್ಳೆಯದೇ. ಆದರೆ ಫ್ರಿಜ್ಜಿನಲ್ಲಿ ನೀರನ್ನು ಕೂಲ್ ಮಾಡಿ ಅತಿಯಾಗಿ ಕುಡಿಯುವುದು ಒಳ್ಳೆಯದಲ್ಲ. ಈ ಬಗ್ಗೆ ಎಚ್ಚರದಿಂದಿರಬೇಕು. ತಂಪು ಪಾನೀಯಗಳು ಮತ್ತು ಐಸ್ ಕ್ರೀಮನ್ನು ಹೆಚ್ಚಾಗಿ ತಿನ್ನಬಾರದು. ಜೊತೆಗೆ ಲಾವಂಚದ ಬೇರನ್ನು ಸ್ವಚ್ಛ ಮಾಡಿ ಅದನ್ನು ನೀರಿಗೆ ಹಾಕಿ ಆ ನೀರನ್ನು ನಿಯಮಿತವಾಗಿ ಸೇವಿಸಬೇಕು.

ಬೇಸಿಗೆ ಕಾಲದಲ್ಲಿ ಸಿಹಿ ತಿನಿಸುಗಳ ಸೇವನೆಯನ್ನು ಕಡಿಮೆ ಮಾಡಬೇಕು. ಅತಿಯಾಗಿ ಕಾಫಿ ಕುಡಿಯುವುದು ಒಳ್ಳೆಯದಲ್ಲ. ಹಣ್ಣುಗಳು ಮತ್ತು ತರಕಾರಿಗಳಿಂದ ಸಮೃದ್ಧವಾಗಿರುವ ಆಹಾರವನ್ನು ಸೇವಿಸಬೇಕು. ಸಂಸ್ಕರಿಸಿದ ಆಹಾರಗಳು, ಹೆಚ್ಚಾಗಿ ಕರಿದ/ಹುರಿದ ಮತ್ತು ಅತಿ ಮಸಾಲೆಯುಕ್ತ ಆಹಾರಗಳನ್ನು ಅಂದರೆ ಚೌಚೌ, ಮಸಾಲೆಪುರಿ, ಪಾನಿಪುರಿ, ಗೋಬಿ ಮಂಚೂರಿಯನ್ ತಿನಿಸುಗಳನ್ನು ಬೇಸಿಗೆ ಕಾಲದಲ್ಲಿ ಮಿತವಾಗಿ ಸೇವಿಸಬೇಕು. ಮಾಂಸಾಹಾರ ಸೇವನೆಯೂ ಮಿತವಾಗಿರಬೇಕು.

ಬಿಸಿಲು ಹೆಚ್ಚಾಗಿರುವ ದಿನಗಳಲ್ಲಿ ಬಿಗಿಯಾದ ಮತ್ತು ಕಡು ಬಣ್ಣದ ಬಟ್ಟೆಗಳನ್ನು ಧರಿಸುವ ಬದಲು ಹತ್ತಿ ಬಟ್ಟೆ ಧರಿಸಿದರೆ ಅದು ಬೆವರು ಮತ್ತು ಹಾನಿಕಾರಕ ಕಿರಣಗಳಿಂದ ರಕ್ಷಣೆ ನೀಡುತ್ತದೆ. ಅಷ್ಟರಮಟ್ಟಿಗೆ ಬಿಸಿಲು ಗುಳ್ಳೆಗಳನ್ನು ಬರದಂತೆ ತಡೆಯುತ್ತದೆ.

## ವಾರ್ಷಿಕ ಸ್ನೇಹ ಸಮ್ಮೇಳನ ಕಾರ್ಯಕ್ರಮ



ಬೆಳಗಾವಿ: 2023 24ರ ವಾರ್ಷಿಕ ಸ್ನೇಹ ಸಮ್ಮೇಳನ ಸರಕಾರಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆ ವತಿಯಿಂದಾ ವಾರ್ಷಿಕ ಸ್ನೆಹ ಸಮ್ಮೇಳನ 2023 24 ಕಾರ್ಯಕ್ರಮವನ್ನು ನಗರದ ಸಾರಥಿ ನಗರದಲ್ಲಿ ಹಮ್ಮಿಕೊಳ್ಳಲಾಗಿತ್ತು ಕಾರ್ಯಕ್ರಮ ಅಧ್ಯಕ್ಷತೆ ವಹಿಸಿದ ಶಿಕ್ಷಕರ ಸಂಘದ ಅಧ್ಯಕ್ಷರಾದ ಹೆಬ್ಬಳ್ಳಿಯವರು ದೀಪ ಬೆಳಗಿಸುವ ಮುಖಾಂತರ ಉದ್ಘಾಟಿಸಿದರು.

ಈ ಕಾರ್ಯಕ್ರಮದಲ್ಲಿ ನಗರದ ಶಾಲೆಯ ಚ್‌ಡಿಎಫ್ಸಿ ಅಧ್ಯಕ್ಷರು ಹಾಗೂ ಗ್ರಾಮದ ಹಿರಿಯರು ಕಾರ್ಯಕ್ರಮದಲ್ಲಿ ಉಪಸ್ಥಿರಿದ್ದರು.

ಅಧ್ಯಕ್ಷ ವಹಿಸಿದ ಹೆಬ್ಬಳ್ಳಿ ಅವರು ಮಾತನಾಡಿ ಖಾಸಗಿ ಶಾಲೆಗೆ ಕಳಿಸುವ ಮಕ್ಕಳನ್ನು ಸರಕಾರಿ ಶಾಲೆಗೆ ಕಳುಹಿಸಿ ಇಲ್ಲಿ ಒಳ್ಳೆಯ ವಿದ್ಯಾಭ್ಯಾಸ ಸಿಗುತ್ತದೆ ಆ ಕೆಲಸವನ್ನು ಮುಖ್ಯ ಶಿಕ್ಷಕರಾದ ರಾಜು ಕಲಿಕಾರ್ ರವರು ವಹಿಸುವರು ವಿಶ್ವಾಸ ನನಗಿದೆ ಎಂದು ಪಾಲಕರಿಗೆ ಕಿವಿಮಾತು ಹೇಳಿದರು.

ಶಿಕ್ಷಣ ಇಲಾಖೆಯಿಂದ ಆಗಮಿಸಿದ ಹಿರೇಮಠ ಅವರು ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಹಿರೇಮಠ ಸಾರ್ಥಿ ನಗರ ಶಾಲೆಯನ್ನು ಖಾಸಗಿ ಮನೆ ಬಾಡಿಗೆ ಪಡೆದುಕೊಂಡು ನಡೆಸುತ್ತಿದ್ದು ಬರುವಂತ ದಿನದಲ್ಲಿ ಸರಕಾರಿ ಶಾಲೆಗೆ ಸ್ಥಳೀಯ ಶಾಸಕರು 10 ಗುಂಟೆ ಜಾಗವನ್ನು ಸ್ಥಳ ಗುರುತಿಸಿ ಮಂಜೂರು ಮಾಡಿದರೆ ಅದಕ್ಕೆ ಕಟ್ಟಡ ಅನುದಾನವನ್ನ ಶಿಕ್ಷಣ ಇಲಾಖೆಯಿಂದ ನಾವು ಬಿಡುಗಡೆ ಮಾಡಿ ಕಟ್ಟಡವನ್ನು ನಿರ್ಮಾಣ ಮಾಡುತ್ತೇವೆ ನಮಗೆ ನಗರದ ವ್ಯಾಪ್ತಿಯಲ್ಲಿರುವುದರಿಂದ ಕಟ್ಟಡಕ್ಕೆ ಜಾಗ ಸಿಗದ ಕಾರಣಕ್ಕಾಗಿ ಶಾಲೆಯು ಇಲ್ಲಿವರೆಗೆ ಆಗಿರುವುದಿಲ್ಲ ಜಾಗ ನೀಡಿದಲ್ಲಿ ಶಾಲೆ ನಿರ್ಮಾಣ ಮಾಡುವ ಕಾರ್ಯವನ್ನು ನಿರ್ವಹಿಸುತ್ತೇವೆ ಸರ್ಕಾರಿ ಶಾಲೆಯಲ್ಲಿ ನಗರದ ಮಕ್ಕಳು ಓದಲು ಅವಕಾಶವನ್ನ ಕಲ್ಪಿಸಲು ಪ್ರಯತ್ನಿಸುವೆ ಎಂದು ಹಿರೇಮಠ ಹೇಳಿದರು.

ಈ ಕಾರ್ಯಕ್ರಮದಲ್ಲಿ ಒಂದನೇ ತರಗತಿಯಿಂದ 5ನೇ ತರಗತಿಯವರೆಗೆ ಓದಿರುವ ವಿದ್ಯಾರ್ಥಿಗಳು ಕೆಲವು ಕಲಾ ಪ್ರದರ್ಶನಗಳನ್ನ ಸ್ಪರ್ಧಿಸಿದರು ಈ ಕಾರ್ಯಕ್ರಮದಲ್ಲಿ ನಗರದ ಹಿರಿಯರು ವಿದ್ಯಾರ್ಥಿಗಳ ಪಾಲಕರು ಹೆಚ್ಚಿನ ಸಂಖ್ಯೆಯಲ್ಲಿ ಉಪಸ್ತರಿದ್ದರು

## ಪೋಷಕಾಂಶ ಹಾಗೂ ಖನಿಜಾಂಶಗಳ ಆಗರ ಎಳನೀರು: ನೀವು ತಿಳಿಯಲೇಬೇಕಾದ ಆರೋಗ್ಯ ಪ್ರಯೋಜನಗಳು...



ಕ ಲ್ಪ ವ್ ೃ ಕ್ಷ ವ್ ಂ ದ್ ೇ ಕರೆಯಲಾಗುವ ತೆಂಗಿನ ಮರದ ಎಳನೀರು ಸ್ ರ್ ್ ರ ೋ ೀ ಗ ್ ಕ ್ೂ ಮದ್ದಾಗಿದ್ದು, ಮನುಷ್ಯನ ದೇಹದ ಆಯಾಸವನ್ನು ದೂರಾಗಿಸಿ ಉಲ್ಲಾಸ ನೀಡುತ್ತದೆ. ನಿರ್ಜಲೀಕರಣ, ಅಜೀರ್ಣ, ಕಿಡ್ನಿಯಲ್ಲಿ ಕಲ್ಲು, ತಲೆನೋವುಗಳಂತಹ ನಾನಾ ರೋಗಗಳಿಗೆ ಎಳನೀರು ಪ್ರಮುಖ ಮದ್ದಾಗಿದೆ.

ವರ್ಷದ ಎಲ್ಲಾ ದಿನಗಳಲ್ಲೂ ಸಿಗುವ ಎಳನೀರಿನಲ್ಲಿ ಸಾಕಷ್ಟು ಔಷಧೀಯ ಗುಣಗಳಿವೆ. ಪ್ರತೀನಿತ್ಯ ಒಂದೊಂದು ಎಳನೀರು ಕುಡಿಯುವ ಅಭ್ಯಾಸವಿಟ್ಟುಕೊಂಡರೆ, ದೇಹಕ್ಕೆ ಎದುರಾಗುವ ಸಾಕಷ್ಟು ರೋಗಗಳಿಂದ ದೂರ ಇರಬಹುದು. ನವಿರಾದ ಸಿಹಿ, ನೀರಿನಷ್ಟೇ ಗಾಢವಾದ ಎಳನೀರು ದೇಹಕ್ಕೆ ಅಗತ್ಯವಾದ ಬಹಳಷ್ಟು ಪೋಷಕಾಂಶಗಳನ್ನು ಒದಗಿಸುತ್ತದೆ. ಎಳನೀರಿನಿಂದ ಸಿಗುವ ಪೋಷಕಾಂಶಗಳಿಂದ ದೇಹ ಶೀಘ್ರ ತನ್ನ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುತ್ತದೆ.

ಎಳನೀರಿನಲ್ಲಿರುವ ವಿವಿಧ ಖನಿಜ, ಸಕ್ಕರೆ ಹಾಗೂ ಲವಣಾಂಶ ಅಗತ್ಯ ಪ್ರಮಾಣದಲ್ಲಿ ಇರುವುದರಿಂದಲೇ ಇದೊಂದು ಅಮೃತಪಾನವಾಗಿದೆ. ಬೇಸಿಗೆ ತಾಪವನ್ನು ನೇರವಾಗಿ ನೀಗಿಸಬಲ್ಲ ಎಳನೀರು ದೈವದತ್ತವಾದುದು. ಸರ್ವರೋಗಕ್ಕೂ ಮದ್ದಾಗಿರುವ ಎಳನೀರಿನ ಕೆಲ ಉಪಯೋಗಗಳನ್ನು ಇಲ್ಲಿ ಇಲ್ಲಿವೆ...

ನಿಶಕ್ತಿಗೆ ಎಳನೀರು ಅತ್ಯುತ್ತಮ ಆಯ್ಕೆ, ಪ್ರತಿದಿನ ಎಳನೀರನ್ನು ಸೇವಿಸುವುದರಿಂದ ದೇಹದಲ್ಲಿ ಶಕ್ತಿ ಹೆಚ್ಚುವುದಲ್ಲದೆ, ನವ ಚೈತನ್ಯ ಇರುತ್ತದೆ.

ಅಜೀರ್ಣ ಮತ್ತು ಹೊಟ್ಟೆನೋವು ಸಂಬಂಧಿತ ಸಮಸ್ಯೆಗಳಿಗೆ ಎಳನೀರು ಒಳ್ಳೆಯ ಆರೋಗ್ಯ ಪರಿಣಾಮ ನೀಡುತ್ತದೆ. ಪ್ರತಿದಿನ ಎಳನೀರು ಸೇವಿಸಿದರೆ ಅಜೀರ್ಣ ಸಮಸ್ಯೆ ಮತ್ತು ಹೊಟ್ಟೆ ನೋವು ನಿವಾರಣೆ ಆಗುತ್ತದೆ.

ಎಳನೀರು ಕೇವಲ ಆರೋಗ್ಯ ಪ್ರಯೋಜನೆಗಳನ್ನು ಮಾತ್ರ ಹೊಂದಿಲ್ಲ, ಇದು ಚರ್ಮಕ್ಕೂ ಅಷ್ಟೇ ಉತ್ತಮ ಪರಿಹಾರಗಳನ್ನು ನೀಡುತ್ತದೆ, ಸುಕ್ಕುಗಟ್ಟಿದ ಚರ್ಮವನ್ನು ಎಳನೀರಿನಿಂದ ತೊಳೆದರೆ ಚರ್ಮದ ಸುಕ್ಕು ನಿವಾರಣೆಯಾಗುತ್ತದೆ.

ಎಳನೀರು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ನಿರ್ವಹಿಸಲು ಮತ್ತು ಮಧುಮೇಹ ರೋಗಲಕ್ಷಣಗಳನ್ನು ಸುಧಾರಿಸಲು ಸಹಾಯ ಮಾಡುತ್ತದೆ. ಇದು ಇನ್ಸುಲಿನ್ ಸೂಕ್ಷ್ಮತೆಯನ್ನು ಹೆಚ್ಚಿಸುತ್ತದೆ ಮತ್ತು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಕಡಿಮೆ ಮಾಡುತ್ತದೆ.

ಎಳನೀರಿನಲ್ಲಿರುವ ವಿವಿಧ ವಿಟಮಿನ್ ಮತ್ತು ವಿಶೇಷವಾಗಿ ವಿಟಮಿನ್ ಕೆ ಮತ್ತು ಕಬ್ಬಿಣದ ಅಂಶ ಕೂದಲಿಗೆ ಸಹಕಾರಿಯಾಗಿದೆ. ಕೂದಲನ್ನು ಕೊಂಚ ಎಳನೀರಿನಿಂದ ಮಸಾಜ್ ಮಾಡುವುದರಿಂದ ತಲೆಯ ಚರ್ಮದಲ್ಲಿ ರಕ್ತಸಂಚಾರ ಹೆಚ್ಚುತ್ತದೆ. ಇದರ ಪರಿಣಾಮ ಕೂದಲ ಬುಡ ಹೆಚ್ಚು ಶಕ್ತಿಯುತವಾಗುತ್ತವೆ. ಕೂದಲು ಉದುರುವುದು ಕಡಿಮೆಯಾಗಿ ಕೂದಲ ಹೊಳಪು ಹೆಚ್ಚುತ್ತದೆ. ಕೂದಲು ಮೃದುವಾಗಿಸುವಲ್ಲಿ ಕೂಡಾ ಸಹಾಯ ಮಾಡುತ್ತದೆ.

ಮುಖದ ಮೇಲೆ ಹೊಳಪನ್ನು ಕಾಪಾಡಿಕೊಳ್ಳಲು ಎಳನೀರು ಸಹಾಯ ಮಾಡುತ್ತದೆ. ನಿರ್ಜಲೀಕರಣವು ಚರ್ಮವನ್ನು ಹಾನಿಯುಂಟು ಮಾಡುತ್ತದೆ. ಜೊತೆಗೆ ನಿಮ್ಮ ಮುಖದಲ್ಲಿ ಮೊಡವೆ ಉಂಟಾಗಲು ಕಾರಣವಾಗುತ್ತದೆ. ಎಳನೀರು ದೇಹಕ್ಕೆ ತೇವಾಂಶವನ್ನು ನೀಡುವುದರಿಂದ ನಿಮ್ಮ ಚರ್ಮದ ಆರೋಗ್ಯವನ್ನು ಕಾಪಾಡುವಲ್ಲಿ ಸಹಾಯಕವಾಗಿದೆ.

# ಭಾರತ ಸಿರಿವಂತವಾಗಿದೆ, ಶ್ರೇಷ್ಠವಾಗುವುದು ಬಾಕಿಯಿದೆ!

ಭಾರತ ಬಡದೇಶವಾಗಿ ಉಳಿದಿಲ್ಲ. 2013/14 ರಲ್ಲಿ ಇದ್ದ ನೇರ ತೆರಿಗೆ ಸಂಗ್ರಹಣೆ 2022/23 ರಲ್ಲಿ 173 ಪ್ರತಿಶತ ಏರಿಕೆ ಕಂಡಿದೆ. ಅಂದರೆ 2013/14ರಲ್ಲಿ 7 ಲಕ್ಷ 21 ಸಾವಿರ ಕೋಟಿ ರೂಪಾಯಿ ಇದ್ದ ತೆರಿಗೆ ಸಂಗ್ರಹಣೆ 2022/23ರಲ್ಲಿ 19ಲಕ್ಷ 72 ಸಾವಿರ ಕೋಟಿ ರೂಪಾಯಿಯಾಗಿದೆ.

ಮಾಸಿಕ ಆದಾಯ ಎಂಟೂವರೆ ಲಕ್ಷ ರೂಪಾಯಿ ಅಂದರೆ ವಾರ್ಷಿಕ ಕೋಟಿ ರೂಪಾಯಿ ಆದಾಯ ಹೊಂದಿರುವವರ ಸಂಖ್ಯೆ ಎರಡು ಲಕ್ಷ 16ಸಾವಿರವಾಗಿದೆ. ಇದು ಆದಾಯ ತೆರಿಗೆ ಕಟ್ಟುವವರ ಸಂಖ್ಯೆ. ಒಂದು ಅಂದಾಜಿನ ಪ್ರಕಾರ ಇಷ್ಟು ಆದಾಯ ಗಳಿಸುತ್ತಿರುವವ ಭಾರತೀಯರ ಸಂಖ್ಯೆ 4 ಕೋಟಿ! ಈ ಮಾತನ್ನು ಸಾಬೀತು ಪಡಿಸಲು ನಾವು ಒಂದು ಸಣ್ಣ ಅಂಶವನ್ನು ಉದಾಹರಣೆಗೆ ತೆಗೆದುಕೊಂಡರೆ ಸಾಕು. ಬೆಂಜ್ ಕಾರು ಪ್ರತಿ ದಿನ ಭಾರತದಲ್ಲಿ 50 ಕಾರುಗಳನ್ನು 2023ರಲ್ಲಿ ಮಾರಾಟ ಮಾಡಿದೆ. ಅಂದರೆ ವರ್ಷಕ್ಕೆ 18,250 ಕಾರುಗಳನ್ನು ಮಾರಾಟ ಮಾಡಿದೆ. ಇದರ ಕನಿಷ್ಠ ಬೆಲೆ ಎಪ್ಪತ್ತು ಲಕ್ಷವಿದೆ, ಹೀಗಾಗಿ ನಾವು ಅವರೇಜ್ 70 ಲಕ್ಷ ಹಣವನ್ನು ಗುಣಿಸಿದರೆ 13,125 ಕೋಟಿ ರೂಪಾಯಿ ಆಗುತ್ತದೆ. ಇನ್ನು ಬಿಎಂಡಬ್ಲ್ಯೂ, ಆಡಿ, ಟೊಯೋಟಾ, ಇನ್ನಿತರೇ ಐಷಾರಾಮಿ ಕಾರುಗಳನ್ನು ಲಕ್ಕ ಹಾಕಿದರೆ ಅದು ಬೇರೆಯ ಕಥೆಯನ್ನು ತೆರೆದಿಡುತ್ತದೆ. ಒಟ್ಟಾರೆ 2023ರ ಡಿಸೆಂಬರ್ ಕೊನೆಯವರೆಗೆ ಮಾರಾಟವಾದ ಕಾರುಗಳ ಸಂಖ್ಯೆ 41 ಲಕ್ಷ, ಒಟ್ಟಾರೆ ಮೌಲ್ಯ ನಾಲ್ಕುವರೆ ಲಕ್ಷ ಕೋಟಿ ರೂಪಾಯಿಯ ವಹಿವಾಟು ನಡೆದಿದೆ. ಇದು ಕೇವಲ ಆಟೋಮೊಬೈಲ್ ವಲಯದ ಕಥೆ. ಹೀಗೆ ಪ್ರತಿ ವಲಯವು ಹೇಳುತ್ತಿರುವುದು ಇಂತಹುದೇ ಏರಿಕೆಯ ಕಥೆ. ಭಾರತದ ಜನಸಂಖ್ಯೆ 140 ಕೋಟಿ ಎಂದು ಕೊಂಡರೆ ಅದರಲ್ಲಿ ಅದು ಪ್ರತಿಶತ ಜನ ಈ ಕಾರು ಅಥವಾ ಇನ್ನಿತರೇ ಐಷಾರಾಮಿ ವಸ್ತುಗಳನ್ನು ಖರೀದಿ ಮಾಡುವ ಸಾಮರ್ಥ್ಯವನ್ನು ಹೊಂದಿದ್ದಾರೆ. ಅಂದರೆ ಭಾರತದ ಜನಸಂಖ್ಯೆಯ 7 ಕೋಟಿಯಾಷ್ಟು ಜನ ಯೂರೋಪು ಅಥವಾ ಅಮೇರಿಕಾ ಅಥವಾ ಇನ್ನಿತರೇ ಮುಂದುವರಿದ ದೇಶದ ಪ್ರಜೆಗಳಿಗೆ ಸಮವಾಗಿ ಅಥವಾ ಅದಕ್ಕಿಂತ ಉತ್ತಮವಾಗಿ ಇಲ್ಲಿ ಬಾಳುತ್ತಿದ್ದಾರೆ. ಏಳು ಕೋಟಿ ಜನಸಂಖ್ಯೆ ಎಂದರೆ ಕನಿಷ್ಠ ಎರಡು ಅಥವಾ ಮೂರು ಯೂರೋಪಿಯನ್ ದೇಶಗಳಿಗೆ ಸಮ. ಅದರಲ್ಲೂ ಈ ಮಟ್ಟದ ಖರೀದಿ ಶಕ್ತಿ ಇರುವವರ ಲೆಕ್ಕಾಚಾರ ಹಾಕಿದರೆ ಪೂರ್ಣ ಅಮೇರಿಕಾ ದೇಶವನ್ನೂ ನಾವು ಮೀರಿಸುತ್ತೇವೆ.

ಮೇಲಿನ ಲೆಕ್ಕಾಚಾರ ಸಾಹುಕಾರರದ್ದು ಎನ್ನುವ ಮಾತನ್ನು ಬದಿಗಿಟ್ಟು ಮಧ್ಯಮ ವರ್ಗದ ಜನರ ಲೆಕ್ಕಾಚಾರ ಹಾಕೋಣ. ಭಾರತದ 31 ಪ್ರತಿಶತ ಜನರನ್ನು ಮಧ್ಯಮವರ್ಗ ಎನ್ನಲಾಗಿದೆ. ಐದು ಲಕ್ಷದಿಂದ 30 ಲಕ್ಷ ವಾರ್ಷಿಕ ಆದಾಯ ಇರುವವರನ್ನು ಈ ಲೆಕ್ಕಾಚಾರದ ಅಡಿಯಲ್ಲಿ ಪರಿಗಣಿಸಲಾಗಿದೆ. ಇದರಲ್ಲಿ ಬಹುತೇಕರ ಆದಾಯ ವಾರ್ಷಿಕ 12 ರಿಂದ 15 ಲಕ್ಷದಲ್ಲಿದೆ. ಒಟ್ಟಾರೆ ಭಾರತದ 43.4 ಕೋಟಿ ಜನರನ್ನು ನಾವು ಮಿಡ್ಲ್ ಕ್ಲಾಸ್ ಎನ್ನಬಹುದು. 2013/14 ರಲ್ಲಿ ಈ ವರ್ಗದ ಆದಾಯ ವಾರ್ಷಿಕ 3/4 ಲಕ್ಷ ರೂಪಾಯಿಯಿತ್ತು ಎನ್ನುವುದನ್ನು ನಾವು ಗಮನಿಸಬೇಕು.

ಕಳೆದ 10 ವರ್ಷದಲ್ಲಿ ಭಾರತ ಪೂರ್ಣವಾಗಿ ಬದಲಾಗಿ ಹೋಗಿದೆ. ಇಲ್ಲಿನ ಸಿರಿವಂತರ ಸಂಖ್ಯೆ ಹೆಚ್ಚಾಗಿದೆ. ಮಧ್ಯಮವರ್ಗದ ಸಂಖ್ಯೆ ಹೆಚ್ಚಾಗಿದೆ. ಬಡವರ ಸಂಖ್ಯೆ ಗಣನೀಯವಾಗಿ ಕುಸಿದಿದೆ. ಈ ಎಲ್ಲಾ ಕಾರಣದಿಂದ ಭಾರತದ ಡೊಮೆಸ್ಟಿಕ್ ಕನ್ಸಮ್ಶನ್ ಅತ್ಯಂತ ಹೆಚ್ಚಾಗಿದೆ. ಇದು ಉತ್ತಮ ಬೆಳವಣಿಗೆ. ಅಭಿವೃದ್ಧಿ ನಿಲ್ಲದೆ ಸಾಗಲು ನಾವು ಬೇರೆ ದೇಶದ ಮೇಲೆ ಅವಲಂಬಿತರಾಗಬೇಕು , ಆದರೆ ನಮ್ಮ ಆಂತರಿಕ ಬಳಕೆಯಲ್ಲಿ ಹೆಚ್ಚಳ ಆಗಿರುವುದು ಅವಲಂಬನೆಯನ್ನು ಅಷ್ಟರಮಟ್ಟಿಗೆ ಕಡಿಮೆ ಮಾಡುತ್ತದೆ. ಜಾಗತಿಕ ಮಟ್ಟದಲ್ಲಿ ಭಾರತವನ್ನು ಅಷ್ಟು ಸುಲಭವಾಗಿ ಯಾರೂ ರೈಟ್ ಆಫ್ ಮಾಡಲು ಆಗದ ಮಟ್ಟಕ್ಕೆ ಇಂದು ಬೆಳೆದಿದೆ. ಐಷಾರಾಮಿ ಪದಾರ್ಥಗಳನ್ನು ಉತ್ಪಾದಿಸುವ ಸಂಸ್ಥೆಗಳ ಜೊತೆಗೆ ಇನ್ನಿತರ ಅವಶ್ಯಕವಾಗಿ ಬೇಕಾಗುವ ಪದಾರ್ಥಗಳನ್ನು ಉತ್ಪಾದಿಸುವ ಸಂಸ್ಥೆಗಳು ಬೇರೆ ದೇಶದಿಂದ ಭಾರತಕ್ಕೆ ಬರಲು ಸಿದ್ಧವಿರಲು ಕೂಡ ಇಲ್ಲಿನ ಅಗಾಧ ಮಾರುಕಟ್ಟೆ ಕಾರಣವಾಗಿದೆ. ಈ ನಿಟ್ಟಿನಲ್ಲಿ ಭಾರತ ಸಿರಿವಂತ ದೇಶವಾಗಿದೆ. ಆದರೆ ಜಾಗತಿಕ ಮಟ್ಟದಲ್ಲಿ ಶ್ರೇಷ್ಠವಾಗಲು ಇನ್ನಷ್ಟು ಕೆಲಸ ಬಾಕಿಯಿದೆ.

ಮುಂದಿನ ಇಪ್ಪತ್ತು ವರ್ಷ ಭಾರತಕ್ಕೆ ಸೇರಿದ್ದು , ಇದರ ಬಗ್ಗೆ ಯಾವುದೇ ಸಂಶಯ ಬೇಡ. ಇಂತಹ ಕಾಲಘಟ್ಟದಲ್ಲಿ ನಾವು ಸಮಾಜದಲ್ಲಿ ಆಗುತ್ತಿರುವ ಬದಲಾವಣೆಯ ಗಾಳಿಗೆ ಸಿಲುಕಿ ನಮ್ಮ ಜೀವನಶೈಲಿಯನ್ನು ಬದಲಾಯಿಸಿಕೊಳ್ಳಬಾರದು. ಒಂದು ಉತ್ತಮ ಬದುಕು ಬದುಕಲು, ಅದೂ ಕೆಲಸದ ಮತ್ತು ಅದರಿಂದ ಬರುವ ಹಣದ ಸಹಾಯವಿಲ್ಲದೆ ಜೀವಿಸುವುದಕ್ಕೆ ಬೇಕಾಗುವ ಸಿದ್ಧತೆಗಳನ್ನು ನಾವು ಮಾಡಿಕೊಳ್ಳಬೇಕು. ನಿತ್ಯ ಬದುಕಿನ ಜಂಜಾಟದಿಂದ ದೂರಾಗುವಷ್ಟು ಹಣ ಗಳಿಸಬೇಕು. ಶ್ರೀಮಂತರಾಗುವುದು ಅಥವಾ ಸ್ಥಿತಿವಂತರಾಗುವುದು ಕಷ್ಟವೇನೂ ಅಲ್ಲ. ಆದರೆ ನಮ್ಮ ಬಹುತೇಕ ವೇಳೆ ನಿತ್ಯದ ಬದುಕನ್ನು ಬದುಕಲು




ಬೇಕಾಗುವ ವೇತನಕ್ಕೆ ದುಡಿಯಲು ಶುರು ಮಾಡಿದರೆ ನಮ್ಮ ಬಳಿ ಆಲೋಚಿಸಲು ಸಮಯವೆಲ್ಲಿ ಸಿಗುತ್ತದೆ ? ನಾವು ಮುಂದಿನ ದಿನಗಳ ಬಗ್ಗೆ ಕನಸ್ಸು ,ಆಲೋಚನೆ ಮಾಡದಿದ್ದರೆ ಅದನ್ನು ಸಾಕಾರಗೊಳಿಸುವ ದಾರಿಯಾದರೂ ಯಾವುದು ? ಹೀಗಾಗಿ ಕನಸು ಕಾಣಲು ಬೇಕಾಗುವ ಸಮಯವನ್ನು ಮೊದಲು ನಾವು ಗಳಿಸಿಕೊಳ್ಳಬೇಕು. ಇದಕ್ಕಾಗಿ ಏನು ಮಾಡಬೇಕು ಎನ್ನುವುದನ್ನು ತಿಳಿದುಕೊಳ್ಳಬೇಕು. ನಾವು ಬಜೆಟ್ ಮಾಡಿಕೊಂಡಿದ್ದೆವು ಅಲ್ಲವೇ ? ಅದರ ಪ್ರಕಾರ ಮಾಸಿಕ ಆದಾಯ ಎಷ್ಟು ಬೇಕಾಗುತ್ತದೆ ಎನ್ನುವುದು ತಿಳಿದುಬರುತ್ತದೆ. ಎಲ್ಲಕ್ಕೂ ಮೊದಲಿಗೆ ಆ ಹಣವನ್ನು ನಾವು ನಮ್ಮ ಸಮಯವನ್ನು ಒತ್ತೆಯಿಡದೆ ಅಥವಾ ಈಗ ವ್ಯಯಿಸುವ ಸಮಯಕ್ಕಿಂತ ಕಡಿಮೆ ಸಮಯವನ್ನು ವ್ಯಯಿಸಿ ಹೇಗೆ ಗಳಿಸುವುದು? ಎನ್ನುವುದರ ಬಗ್ಗೆ ಗಮನ ಹರಿಸಬೇಕು. ಆದಷ್ಟೂ ಕಡಿಮೆ ಹಣದಲ್ಲಿ ಬದುಕುವುದು , ತನ್ಮೂಲಕ ಯೋಚಿಸಲು ಹೆಚ್ಚು ಸಮಯವನ್ನು ಗಳಿಸಿಕೊಳ್ಳುವುವದನ್ನು ಮಾಡಬೇಕು. ಅರ್ಥವಿಷ್ಟೇ ಎರಡು ಅಥವಾ ಮೂರು ವರ್ಷ ನಮ್ಮ ಕನಸಿನ ಬೆನ್ನತ್ತಲು , ಯಶಸ್ಸು ಪಡೆಯಲು ಬೇಕು ಎಂದಾದರೆ ಅಷ್ಟು ವರ್ಷಕ್ಕೆ ಬೇಕಾಗುವ ಹಣದ ಲೆಕ್ಕಾಚಾರ ಮಾಡಿ ಅಷ್ಟು ಹಣವನ್ನು ಕ್ರೋಡೀಕರಿಸಿ ಇಡಬೇಕು. ಅಯ್ಯೋ ನಾಳೆ ಹೇಗೋ ? ಮುಂದಿನ ತಿಂಗಳ ಗತಿಯೇನು ? ಎನ್ನುವ ಆತಂಕದಿಂದ ದೂರಾದರೆ, ಮತ್ತು ಮಾಡಬೇಕಾದ ಕೆಲಸ, ಗುರಿಯ ಕಡೆಗೆ ಹೆಚ್ಚಿನ ಸಮಯವನ್ನು ನೀಡಿದರೆ, ತೀವ್ರವಾಗಿ ಅನುಭವಿಸಿ ಬಯಸಿದರೆ, ಬಯಸಿದ್ದು ಸಿಕ್ಕೇ ಸಿಗುತ್ತದೆ.

ಹೀಗಾಗಿ ನಮ್ಮ ಬದುಕಿನ ಮೇಲೆ ನಿಯಂತ್ರಣ ಹೊಂದುವುದು ಅತ್ಯಂತ ಅವಶ್ಯಕ. ಆದರೆ ಇಂದೇನಾಗಿದೆ ಯುವ ಜನತೆ ಗಳಿಕೆ–ಖರ್ಚುಗಳ ಸೈಕಲ್ ಸೃಷ್ಟಿ ಮಾಡಿಕೊಂಡಿದ್ದಾರೆ. ನಾಳೆಗೆಂದು ಉಳಿಸುವ ಪರಿಪಾಠ ನಿಧಾನಕ್ಕೆ ನೇಪಥ್ಯಕ್ಕೆ ಸೇರುತ್ತಿದೆ. ನಾಲ್ಕು ದಶಕದ ನಂತರ ಮೊದಲ ಬಾರಿಗೆ ಭಾರತದಲ್ಲಿ ಉಳಿಕೆಯಲ್ಲಿನ ಅನುಪಾತ ಕುಸಿತ ಕಂಡಿದೆ ಎನ್ನುವ ಅಂಕಿಅಂಶ ನಮ್ಮ ಮುಂದಿದೆ. ಚಲನಚಿತ್ರ ತಾರೆಗಳು , ಕ್ರಿಕೆಟ್ ಆಟಗಾರರು , ಇನ್ನಿತರ ಸೆಲಬ್ರೆಟಿಗಳನ್ನು ನೋಡಿ ಅವರಂತೆ ಬದುಕಬೇಕು ಎನ್ನುವ ಹುಚ್ಚು ಧಾವಂತಕ್ಕೆ ಇಂದಿನ ಜನತೆ ಬಿದ್ದಿದ್ದಾರೆ. ದೀರ್ಘಕಾಲದ ಹೂಡಿಕೆಗಳಲ್ಲಿ ಅವರಿಗೆ ನಂಬಿಕೆಯಿಲ್ಲದಂತಾಗಿದೆ. ಮೂವತ್ತು ವರ್ಷ ಹೂಡಿಕೆ ಮಾಡಿ ಎಂದರೆ 'ಡೂಡ್ ಆರ್ ಯು ಕ್ರೇಜಿ?' ಎನ್ನುತ್ತಾರೆ. ವಯಸ್ಸಿದ್ದಾಗ ಈ ಮಾತುಗಳು ಸಹಜ. ಸಮಯ ಎನ್ನುವುದು ಅತ್ಯಂತ ವೇಗವಾಗಿ ಕಳೆದುಹೋಗುತ್ತದೆ. ವೃದ್ಯಾಪ್ಯದ ಹೊಸ್ತಿನಲ್ಲಿ ಯವ್ವನದಲ್ಲಿ ಮಾಡಿದ ತಪ್ಪುಗಳು ಬಂದು ನಿಲ್ಲುತ್ತವೆ. ಜೀವನ ಪೂರ್ತಿ ಹಣಕ್ಕಾಗಿ ದುಡಿಯುವುದು ಸರಿಯಾದ ಮಾರ್ಗವಲ್ಲ. ಹೀಗಾಗಿ ಸ್ಟಾರ್ಟ್ ಅರ್ಲಿ. ಚಕ್ರಬಡ್ಡಿಯ ಪೂರ್ಣ ಶಕ್ತಿಯನ್ನು ಬಳಸಿಕೊಳ್ಳಬೇಕು ಎಂದರೆ ಸಾಧ್ಯವಾದಷ್ಟು ಬೇಗೆ ಹೂಡಿಕೆಯನ್ನು ಶುರು ಮಾಡಬೇಕು.ಜಗತ್ತಿನಲ್ಲಿ ಬೆರಳೆಣಿಕೆಯಷ್ಟು ಜನರಿಗೆ ಮಾತ್ರ ಹೂಡಿಕೆ ಮಾಡುವ ಅವಶ್ಯಕತೆ ಇಲ್ಲದಷ್ಟು ಹಣ ಬರುತ್ತದೆ. ಅದನ್ನೂ ಅವರು ಸರಿಯಾಗಿ ನಿಯಂತ್ರಿಸದಿದ್ದರೆ ಬೀದಿಗೆ ಬರುವುದನ್ನು ತಪ್ಪಿಸಲಾಗುವುದಿಲ್ಲ. ನಮ್ಮ ಅಮಿತಾಬ್ ಬಚ್ಚನ್, ಮೈಕ್ ಟೈಸನ್, ಅನೇಕ ಚಲನಚಿತ್ರ ನಟರನ್ನು ನಾವು ಉದಾಹರಿಸಬಹುದು. ಅಮಿತಾಬ್ ಅದರಿಂದ ಪಾಠ ಕಲಿತರು, ಬದುಕನ್ನು ಮತ್ತೆ ಕಟ್ಟಿಕೊಂಡದ್ದು, ಇಂದಿಗೂ ಅತಿ ಹೆಚ್ಚು ಶ್ರೀಮಂತ ನಟರ ಸಾಲಿನಲ್ಲಿರುವುದು ನಾವು ಕಾಣಬಹುದು. ಉಳಿದವರೆಲ್ಲಾ ಹೂಡಿಕೆ ಮಾಡಬೇಕು, ದೀರ್ಘಾವಧಿಯಲ್ಲಿ, ಚಕ್ರಬಡ್ಡಿಯ ಶಕ್ತಿಯಲ್ಲಿ ನಂಬಿಕೆಯಿಡಬೇಕು.

ಕೊನೆಮಾತು: ಭಾರತ ತೀವ್ರಗತಿಯಲ್ಲಿ ತನ್ನ ಪಥವನ್ನು ಬದಲಿಸುತ್ತಿದೆ. ಶ್ರೀಮಂತರು ಇನ್ನಷ್ಟು ಶ್ರೀಮಂತರಾಗುತ್ತಿದ್ದಾರೆ. ಮಧ್ಯಮವರ್ಗ ಇನ್ನಷ್ಟು ಆದಾಯವನ್ನು ಹೆಚ್ಚಿಸಿಕೊಂಡು ಹೊಸ ಹುರುಪಿನಲ್ಲಿದೆ. ಬಡವರ ಸಂಖ್ಯೆಯಲ್ಲಿ ಕೂಡ ತೀವ್ರ ಕುಸಿತವಾಗಿದೆ. ಇವೆಲ್ಲವೂ ಮೆಚ್ಚಬೇಕಾದ , ನಾವು ಹೆಮ್ಮೆ ಪಡ ಬೇಕಾದ ಅಂಶಗಳು. ಆದರೆ ನಾವು ಈ ಬದಲಾವಣೆಯ ವೇಗಕ್ಕೆ ಹೊಂದಿಕೊಳ್ಳುವ ತರಾತುರಿಯಲ್ಲಿ ಸ್ವಲ್ಪ ಜಾರಿದರೂ ಕೂಡ ಸಾಲದ ಸುಳಿಯಲ್ಲಿ ಸಿಲುಕಿ ಬಿಡುತ್ತೇವೆ. ಮುಂದಿನ ಎರಡು ದಶಕ ನಮ್ಮದು ಎನ್ನುವ ವಿಶ್ವಾಸದೊಂದಿಗೆ ಭದ್ರವಾದ ಆದರೆ ಜಾಗರೂಕತೆಯ ಹೆಜ್ಜೆಯನ್ನು ನಾವು ಇರಿಸಬೇಕಾಗಿದೆ. ಆಗ ಮಾತ್ರ ಭಾರತ ಮುಂದುವರಿದ ದೇಶವಾದಾಗ ನಾವು ಕೂಡ ಸಂಭ್ರಮಿಸಬಹುದು. ದೇಶದ ಅಭಿವೃದ್ಧಿ ಜೊತೆ ಜೊತೆಗೆ ನಾವು ಹೆಜ್ಜೆ ಹಾಕಬೇಕು. ನಮ್ಮ ಆರ್ಥಿಕತೆಯನ್ನು ಭದ್ರ ಮಾಡಿಕೊಂಡರೆ ಅದು ಅಷ್ಟರಮಟ್ಟಿಗೆ ದೇಶಕ್ಕೂ ನೀಡಿದ ಕೊಡುಗೆಯಾಗುತ್ತದೆ.

# "ರೊಟ್ಟಿ ಜಾತ್ರೆ"



ಡಂಬಳ: ಕೋಮು ಸೌಹಾರ್ದತಗೆ ಹಾಗೂ ಜಾತ್ಯತೀತ ಮನೋಭಾವ ಮೂಡಿಸುವಲ್ಲಿ ಹೆಸರುವಾಸಿಯಾದ ಡಂಬಳ ತೋಂಟದಾರ್ಯ ಮಠದ ರೊಟ್ಟಿ ಜಾತ್ರೆ ವಿಜೃಂಭಣೆಯಿಂದ ಜರುಗಲಿದೆ.

ಗ್ರಾಮದ ತೋಂಟದಾರ್ಯ ಮಠದ 284ನೇ ಜಾತ್ರಾ ಮಹೋತ್ಸವ ನಿಮಿತ್ತ ಫೆ. 24 ರಥೋತ್ಸವ, ಫೆ. 25ರಂದು ಲಘು ರಥೋತ್ಸವ

ಜರುಗಲಿದೆ. ಜಾತ್ರೋತ್ಸವ ಅಂಗವಾಗಿ ವಿವಿಧ ಸಾಂಸ್ಕೃತಿ ಕಾರ್ಯಕ್ರಮ ಜರುಗಲಿವೆ. ರೊಟ್ಟಿ ಜಾತ್ರೆಗೂ ಮುನ್ನ ನಡೆಯುವ

ತೋಂಟದಾರ್ಯ ರಥೋತ್ಸವ ವೈಶಿಷ್ಟದಿಂದ ಕೂಡಿದೆ. ತೇರಿನ ಮುಂದೆ ತೋಂಟದಾರ್ಯ ಡಾ। ಸಿದ್ಧರಾಮ ಶ್ರೀಗಳು ನಡೆಯುತ್ತ ಸಾಗಿದರೆ, ಅವರ ಜೊತೆಯಲ್ಲಿ ಷಟಸ್ಥಲ ಜ್ಞಾನ ಸಾರಾಮೃತ ವಚನ ಸಂಪುಟಗಳ ಮೆರವಣಿಗೆ ಸಾಗುತ್ತದೆ. ಸಮಾಜದಲ್ಲಿ ಸಹೋದರತ್ವ ಭಾವ ಮೂಡಿಸುವ ಉದ್ದೇಶದಿಂದ ರೊಟ್ಟಿ ಜಾತ್ರೆ 1976ರಲ್ಲಿ ಡಂಬಳ ತೋಟದಾರ್ಯ ಮಠದಲ್ಲಿ ಲಿಂಗೈಕ್ಯ ಡಾ। ಸಿದ್ಧಲಿಂಗ ಸ್ವಾಮೀಜಿ ಪ್ರಾರಂಭಿಸಿದರು.

20 ಕ್ವಿಂಟಲ್ ಬಿಳಿ ಜೋಳದ ರೊಟ್ಟಿ: ಈ ಬಾರಿ 20 ಕ್ವಿಂಟಲ್ ಜೋಳದ ಹಿಟ್ಟು ಬಳಸಿ 40 ಸಾವಿರ ರೊಟ್ಟಿ ತಯಾರಿಸಲಾಗಿದೆ. ಡೋಣಿ, ಡೋಣಿ ತಾಂಡಾ, ಯಕ್ಲಾಸಪುರ, ಹೈತಾಪುರ ಗ್ರಾಮ ಸೇರಿ ಸುತ್ತಮುತ್ತಲಿನ ಭಕ್ತರ ಪ್ರತಿ ಮನೆಯಿಂದ 50 ರಿಂದ 100ಕ್ಕೂ ಅಧಿಕ ರೊಟ್ಟಿ ಸಿದ್ಧಪಡಿಸಿ ಚಕ್ಕಡಿ, ಟ್ರಾಕ್ಟರ್ ಮೂಲಕ ಮಠಕ್ಕೆ ತರುತ್ತಾರೆ.

ಕರಂಡಿ–ಖಡಕ್ ರೊಟ್ಟಿ ವಿಶೇಷ: ಜಾತ್ರೆಯಲ್ಲಿ ಖಡಕ್ ರೊಟ್ಟಿಯೊಂದಿಗೆ ಅಗಸಿ ಚಟ್ನಿ, ಮೊಸರು, ಗುರೆಳ್ಳು ಹಿಂಡಿ, ತರಕಾರಿ, ಭಜ್ಜಿ ಬಾನದ ಅನ್ನದ, ಗೋಧಿ ಹುಗ್ಗಿ, ವಿವಿಧ ತರಕಾರಿ ಪಲ್ಯ, ಸಿಹಿ ಪೊಂಗಲ್ ತಯಾರಿಸಲಾಗುತ್ತದೆ. ಎರಡು ವಾರದ ಹಿಂದೆಯೇ ವಿವಿಧ ತರಕಾರಿಯಿಂದ ಕರಂಡಿ ತಯಾರಿಸಲಾಗಿದೆ. ಹಾವೇರಿ, ಗದಗ, ಧಾರವಾಡ, ಕೊಪ್ಪಳ ಸೇರಿ ಸುತ್ತಲಿನ ಭಕ್ತರು ರೊಟ್ಟಿ ಜಾತ್ರೆಯಲ್ಲಿ ಪಾಲ್ಗೊಳ್ಳುತ್ತಾರೆ.

ಜಾತ್ಯತೀತ ಸಮಾಜ ಕಟ್ಟುವುದಕ್ಕಾಗಿ, ಸಮಾಜಗಳಲ್ಲಿ ಅಡಗಿರುವ ಮೌಢ್ಯ, ಅಂಧಕಾರ ಹೊಡೆದೊಡಿಸುವ ಉದ್ದೇಶದಿಂದ ಲಿಂ। ತೋಂಟದ ಡಾ। ಸಿದ್ಧಲಿಂಗ ಶ್ರೀ ರೊಟ್ಟಿ ಜಾತ್ರೆ ಆರಂಭಿಸಿದರು. ಈ ಬಾರಿ ತೋಂಟದ ಡಾ। ಸಿದ್ಧರಾಮ ಶ್ರೀ ಮಾರ್ಗದರ್ಶನದಲ್ಲಿ ರೊಟ್ಟಿ ಜಾತ್ರೆ ಆಚರಿಸಲಾಗುತ್ತದೆ.

# ನೀರಿಗಾಗಿ ಜನರ ಪರದಾಟ

ಲಕ್ಷ್ಮೇಶ್ವರ: ಪಟ್ಟಣದಲ್ಲಿ ನೀರಿಗೆ ಬರ ಬಂದಿದ್ದು, ಜನತೆ ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ. ಕಳೆದ ಎರಡು ದಶಕಗಳಿಂದ ಪಟ್ಟಣದ ಜನತೆಗೆ ಕುಡಿಯುವ ನೀರು ಪೂರೈಸುತ್ತಿದ್ದ ತುಂಗಭದ್ರಾ ನದಿ ಈ ವರ್ಷ ಮಳೆ ಇಲ್ಲದ ಕಾರಣ ಸಂಪೂರ್ಣ ಬತ್ತಿ ಹೋಗಿದೆ. ಈ ನೀರನ್ನೇ ನೆಚ್ಚಿದ್ದ ಲಕ್ಷ್ಮೇಶ್ವರಕ್ಕೆ ನೀರಿನ ಕ್ಷಾಮ ಎದುರಾಗಿದೆ.

ಹಾವೇರಿ ಜಿಲ್ಲೆ ಮೇವುಂಡಿ ಹತ್ತಿರ ತುಂಗಭದ್ರಾ ನದಿಗೆ ನಿರ್ಮಿಸಿರುವ ಜಾವೆನಿಂದ ಲಕ್ಷ್ಮೇಶ್ವರಕ್ಕೆ ನದಿ ನೀರು ಪೂರೈಕೆ ಆಗುತ್ತಿತ್ತು. ಆದರೆ ನದಿ ಖಾಲಿ ಆಗಿದ್ದು ಗಂಭೀರ ಸಮಸ್ಯೆ ತಲೆದೋರಿದೆ. ನದಿ ನೀರು ಪೂರೈಕೆ ಆಗುವ ಪೂರ್ವದಲ್ಲಿ ಕೊಳವೆ ಬಾವಿಗಳ ಮೂಲಕ ಪುರಸಭೆ ನೀರು ಪೂರೈಕೆ ಮಾಡುತ್ತಿತ್ತು. ಆದರೆ ನದಿ ನೀರು ಬಂದ ಮೇಲೆ ಕೊಳವೆ ಬಾವಿಗಳತ್ತ ಪುರಸಭೆ ನಿರ್ಲಕ್ಷ್ಯ ಮಾಡಿತು. ಅಲ್ಲದೆ ಕೊಳವೆ ಬಾವಿಗಳಿಂದ ನೀರು ಪೂರೈಕೆ ಆಗುತ್ತಿದ್ದ ಪೈಲೈನ್ನೂ ಸಹ ಪುರಸಭೆ ತೆಗೆದು ಹಾಕಿತು. ಹೀಗಾಗಿ ಕೊಳವೆ ಬಾವಿಗಳಿಂದ ಮನೆ ಮನೆಗೆ ನೀರು ಪೂರೈಕೆ ಹೆಚ್ಚು ಕಡಿಮೆ ಸ್ಥಗಿ–ತಗೊಂಡಿದೆ.

ಪಟ್ಟಣದಲ್ಲಿ ಪುರಸಭೆಗೆ ಸೇರಿದ 97 ಕೊಳವೆ ಬಾವಿಗಳಿದ್ದು ಅವುಗಳೇ ಈಗ ನೀರಿನ ಆಸರೆಯಾಗಿವೆ. ಎಲ್ಲ ವಾಗಳಲ್ಲಿ ಕೊಳವೆ ಬಾವಿಗಳಿಂದ ನೀರು ಪೂರೈಸಲು ಪುರಸಭೆ ಹಗಲೂ ರಾತ್ರಿ ಹೆಣಗಾಡುತ್ತಿದೆ. ಆದರೆ ಕೆಲ ಭಾಗಗಳಲ್ಲಿ ನೀರು ಬರುವುದೇ ಇಲ್ಲ. ಹೀಗಾಗಿ ಅಲ್ಲಿನ ಜನರು ನೀರಿಗಾಗಿ ಅಲೆದಾಡುವ ಸ್ಥಿತಿ ಇದೆ.

ಜೆಡಿಎನ ಅಲ್ಪಸಂಖ್ಯಾತರ ಘಟಕದ ತಾಲ್ಲೂಕು ಘಟಕದ ಅಧ್ಯಕ್ಷ ಜಾಕೀರ್‌ಹುಸೇನ್ ಹವಾಲ್ದಾರ, ತೀವ್ರ ಸಮಸ್ಯೆ ಇರುವಲ್ಲಿ ಪ್ರತಿದಿನ ಉಚಿತವಾಗಿ ಟ್ರ್ಯಾಕ್ಟರ್ ಮೂಲಕ ಎರಡು ಟ್ಯಾಂಕರ್ ನೀರು ಕೊಡುತ್ತಿದ್ದಾರೆ.

'ನಮ್ಮ ಓಣ್ಯಾಗ ನೀರ ಬರಂಗಿಲ್ರಿ. ಹಿಂಗಾಗಿ ದಿನಾ ನೀರಿಗಾಗಿ ಸುತ್ತಾಡಬೇಕಾಗೇತ್ರೀ' ಎಂದು ಐದನೇ ವಾನ ನಿವಾಸಿಗಳು ಅಳಲು ತೋಡಿಕೊಂಡರು.

# ವಿಶ್ವಾಸಕ್ಕೆ ಚ್ಯುತಿ ಬಾರದು: ಜೋಶಿ ಅಭಯ

ಹುಬ್ಬಳ್ಳಿ: 2004ರಿಂದ ಇಲ್ಲಿಯವರೆಗೆ ವಿಶ್ವಾಸಕ್ಕೆ ಧ–ಕ್ಕೆ ಬರದಂತೆ ಕೆಲಸ ಮಾಡಿದ್ದೇನೆ. ಮುಂದೆಯೂ ಜನರ ವಿಶ್ವಾಸ ಹಾಗೂ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಹೇಳಿದರು.ಇಲ್ಲಿನ ದೇಶಪಾಂಡೆ ನಗರದಲ್ಲಿರುವ ಪಕ್ಷದ ಕಚೇರಿಯಲ್ಲಿ ಶನಿವಾರ ಧಾರವಾಡ ಲೋಕಸಭಾ ಕ್ಷೇತ್ರದ ಚುನಾವಣೆ ಕಾರ್ಯಾಲಯ ಉದ್ಘಾಟಿಸಿ ಅವರು ಮಾತನಾಡಿದರು.

'ಮೊದಲ ಬಾರಿ ಲೋಕಸಭಾ ಚುನಾವಣೆಗೆ ಸ್ಪರ್ಧಿಸಿದ್ದಾಗ ಹೇಗೆ ನಿಮ್ಮ ವಿಶ್ವಾಸ ಹಾಗೂ ನಿರೀಕ್ಷೆಗೆ ತಕ್ಕಂತೆ ಮಾಡಿದ್ದೇನೋ ಅದೇ ರೀತಿ ಇದುವರೆಗೆ ಕೆಲಸ ಮಾಡಿದ್ದೇನೆ. ದೇಶವನ್ನು ಅಭಿವೃದ್ಧಿ ಪಥದಲ್ಲಿ ಕೊಂಡೊಯ್ಯಬೇಕಾದರೆ, ವಿಶ್ವದಲ್ಲಿಯೇ 3ನೇ ಅತಿದೊಡ್ಡ ಆರ್ಥಿಕ ಶಕ್ತಿಯನ್ನಾಗಿ ಮಾಡಬೇಕಾದರೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಮತ್ತೊಮ್ಮೆ ಪ್ರಧಾನಿಯನ್ನಾಗಿ ಮಾಡಬೇಕಾಗಿದೆ' ಎಂದು ಹೇಳಿದರು.

ಮುಂಬರುವ ಲೋಕಸಭೆ ಚುನಾವಣೆಯು ಸಾಧನೆಯ ಆಧಾರದ ಮೇಲೆ ನಡೆಯಲಿರುವ ಚುನಾವಣೆಯಾಗಿದ್ದು, ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಅಭೂತಪೂರ್ವ ಕೆಲಸಗಳಾಗಿದ್ದು, ಚುನಾವಣೆಯಲ್ಲಿ ಗೆಲುವು ಸಾಧಿಸುವ ವಿಶ್ವಾಸವಿದೆ ಎಂದರು.

ತ್ರಿವಳಿ ತಲಾಖ್ ತೆಗೆದುಹಾಕಿರುವುದು, ಶೇ 33 ಮಹಿಳಾ ಮೀಸಲಾತಿ, ಆರ್ಟಿಕಲ್ 370 ರದ್ದುಪಡಿಸಿರುವುದು ಸೇರಿದಂತೆ ಹಲವು ಸಾಧನೆಯನ್ನು ಕೈಗೊಳ್ಳಲಾಗಿದೆ. ಇದಕ್ಕೆ ಪಕ್ಷದ ಕಾರ್ಯಕರ್ತರು ಹಾಗೂ ಜನರ ಆಶೀರ್ವಾದವೇ ಕಾರಣ ಎಂದು ಹೇಳಿದರು.

ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ ಮಾತನಾಡಿ, ಐಐಟಿ, ಐಐಐಟಿ, ಫ್ಲೈ ಓವರ್, ರಸ್ತೆ ಅಭಿವೃದ್ಧಿ, ಶಾಲೆ–ಅಂಗನವಾಡಿಗಳ ಸುಧಾರಣೆ, ರೈಲ್ವೆ ನಿಲ್ದಾಣ ಹಾಗೂ ವಿಮಾನ ನಿಲ್ದಾಣಗಳ ಅಭಿವೃದ್ಧಿ, ಕೆರೆಗಳ ಪುನರುಜ್ಜೀವನ ಸೇರಿದಂತೆ ಹಲವು ಕಾರ್ಯಗಳನ್ನು ಜೋಶಿ ಅವರು ಮಾಡಿದ್ದಾರೆ. ಹಿಂದಿನ ಎಲ್ಲ ಚುನಾವಣೆಗಿಂತ ಹೆಚ್ಚು ಮತಗಳ ಅಂತರದಿಂದ ಜೋಶಿ ಅವರು ಗೆಲುವು ಸಾಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ತಪ್ಪು ಆರ್ಥಿಕ ನೀತಿಯಿಂದಾಗಿ ರಾಜ್ಯ ಆರ್ಥಿಕವಾಗಿ ದಿವಾಳಿಯಾಗಿದೆ. ಅಭಿವೃದ್ಧಿ ಕೆಲಸ ಕೈಗೊಳ್ಳಲು ಅನುದಾನವಿಲ್ಲ. ತೆರಿಗೆ ಸಂಗ್ರಹ ಸಮರ್ಪಕವಾಗಿ ಮಾಡುತ್ತಿಲ್ಲ. ಇವೆಲ್ಲ ವೈಫಲ್ಯಗಳನ್ನು ಕೇಂದ್ರ ಸರ್ಕಾರದ ಮೇಲೆ ಹೊರಿಸಲು ಸಿದ್ದರಾಮಯ್ಯ ಯತ್ನಿಸುತ್ತಿದ್ದಾರೆ. ಗೂಬೆ ಕೂರಿಸುವ ಪ್ರಯತ್ನ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ರಾಜ್ಯದಿಂದ ಸಂಗ್ರಹಿಸುವ ತೆರಿಗೆಯನ್ನು ಕೇಂದ್ರ ಸರ್ಕಾರ ಸಮರ್ಪಕವಾಗಿ ಮರುಹಂಚಿಕೆ ಮಾಡುತ್ತಿಲ್ಲ ಎಂದು ಸಿದ್ದರಾಮಯ್ಯ ಅವರು ದಕ್ಷಿಣದ ರಾಜ್ಯಗಳನ್ನು ಎತ್ತಿಕಟ್ಟುವ ಪ್ರಯತ್ನ ಮಾಡುತ್ತಿದ್ದಾರೆ. ಅಬಕಾರಿಯಿಂದ ಸಂಗ್ರಹಿಸುವ ತೆರಿಗೆಯನ್ನು ತಮ್ಮ ಸಲುವಾಗಿ ಖರ್ಚು ಮಾಡಬೇಕೆಂದು ಮದ್ಯಪ್ರಿಯರು ಹಠ ಹಿಡಿದರೆ ಅವರ ಬೇಡಿಕೆ ಪೂರೈಸಲು ಸಾಧ್ಯವೆ ನಮ್ಮ ಸಾರಾಯಿ, ನಮ್ಮ ತೆರಿಗೆ, ನಮ್ಮ ಹಕ್ಕು ಎಂದು ಮದ್ಯಪ್ರಿಯರು ಕೇಳಿದರೆ ಸಿದ್ದರಾಮಯ್ಯ ಏನು ಮಾಡುತ್ತಾರೆ ಎಂದು ಪ್ರಶ್ನಿಸಿದರು.

ಶಾಸಕ ಮಹೇಶ ಟೆಂಗಿನಕಾಯಿ ಮಾತನಾಡಿ, ಸಂಸದರು ಹೆಚ್ಚಿನ ಅನುದಾನ ತಂದಿದ್ದಾರೆ. ಎಲ್ಲಡೆ ಅಭಿವೃದ್ಧಿ ಮಾಡಿದ್ದಾರೆ. ಆದರೆ, ಕಾಂಗ್ರೆಸ್ ಜನರ ದಿಕ್ಕು ತಪ್ಪಿಸುವ ಯತ್ನ ಮಾಡುತ್ತಿದೆ ಎಂದು ಹೇಳಿದರು.ಧಾರವಾಡ



ಲೋಕಸಭಾ ಕ್ಷೇತ್ರದ ಉಸ್ತುವಾರಿ ಎಂ.ನಾಗರಾಜ ಪ್ರಾಸ್ತಾವಿಕವಾಗಿ ಮಾತನಾಡಿದರು. ಹುಬ್ಬಳ್ಳಿ–ಧಾರವಾಡ ಮಹಾನಗರ ಜಿಲ್ಲಾ ಬಿಜೆಪಿ ಅಧ್ಯಕ್ಷ ತಿಪ್ಪಣ್ಣ ಮಜ್ಜಗಿ ಸ್ವಾಗತಿಸಿದರು.

'ಜೋಶಿ ಅವರು ಯಾವುದೇ ಜಾತಿಗೆ ಸೀಮಿತವಾಗಿಲ್ಲ. ಎಲ್ಲ ಜಾತಿ ನಾಯಕರನ್ನು ಬೆಳೆಸಿದ್ದಾರೆ. ಸ್ಥಳೀಯವಾಗಿ ಅಭಿವೃದ್ಧಿ ಕೈಗೊಳ್ಳಲು ಸಾಕಷ್ಟು ಅನುದಾನ ಕೊಡಿಸಿದ್ದಾರೆ. ನಮ್ಮ ಗೆಲುವಿನಲ್ಲಿ ಅವರ ಕೊಡುಗೆ ದೊಡ್ಡದಿದೆ

–ಎಂ.ಆರ್. ಪಾಟೀಲ ಕುಂದಗೋಳ ಶಾಸಕ

**ಶೆಟ್ಟರ್ ಗೈರು**

ಧಾರವಾಡ ಲೋಕಸಭಾ ಕ್ಷೇತ್ರದ ಬಿಜೆಪಿ ಚುನಾವಣೆ ಕಾರ್ಯಾಲಯ ಉದ್ಘಾಟನೆ ಸಮಾರಂಭದಲ್ಲಿ ಜಗದೀಶ ಶೆಟ್ಟರ್ ಗೈರಾಗಿದ್ದರು. ಬಿಜೆಪಿಗೆ ಮರುಸೇರ್ಪಡೆಯಾದ ನಂತರ ಪಕ್ಷದ 3ನೇ ಪ್ರಮುಖ ಕಾರ್ಯಕ್ರಮದಿಂದ ಅವರು ದೂರ ಉಳಿದಿದ್ದಾರೆ. ಶೆಟ್ಟರ್ ಗೈರಾಗಿರುವ ಬಗ್ಗೆ ಪ್ರತಿಕ್ರಿಯಿಸಿದ ಪ್ರಲ್ಹಾದ ಜೋಶಿ 'ಮೂರು ದಿನಗಳವರೆಗೆ ಊರಿನಲ್ಲಿ ಇರಲ್ಲವೆಂದು ಖುದ್ದು ಶೆಟ್ಟರ್ ಅವರೇ ತಿಳಿಸಿದ್ದಾರೆ. ಅಪಾರ್ಥ ಕಲ್ಪಿಸುವುದು ಬೇಡ. ಅವರ ಬೆಂಬಲಿಗರ ಪಕ್ಷದಲ್ಲಿ ಮರುಸೇರ್ಪಡೆ ಕಾರ್ಯ ಶೀಘ್ರದಲ್ಲಿ ನಡೆಯಲಿದೆ' ಎಂದು ಸುದ್ದಿಗಾರರಿಗೆ ತಿಳಿಸಿದರು.

ಸಚಿವ ಸ್ಥಾನ ಉಳಿಸಿಕೊಳ್ಳಲು ಲಾಡ್‌ಗೆ ಗುರಿ

ಹುಬ್ಬಳ್ಳಿ: 'ಸಚಿವ ಸ್ಥಾನ ಉಳಿಸಿಕೊಳ್ಳಬೇಕಾದರೆ ವಾರಕ್ಕೆ 3 ಬಾರಿ ಮೋದಿ ಹಾಗೂ 2 ಬಾರಿ ನನ್ನನ್ನು ಬೈಯುವಂತೆ ಕಾಂಗ್ರೆಸ್ ಪಕ್ಷ ಸಂತೋಷ ಲಾಡ್‌ಗೆ ಟಾರ್ಗೆಟ್ ನೀಡಿದೆ' ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ವ್ಯಂಗ್ಯವಾಡಿದರು. ಸಂತೋಷ ಲಾಡ್ ಅವರ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು ವಲ್ಲಭಬಾಯಿ ಪಟೇಲ್ ಅವರು ಆರ್‌ಎಸ್‌ಎಸ್ ಮೇಲೆ ನಿಷೇಧ ಹೇರಿದ್ದರು ಎನ್ನುವುದಕ್ಕಿಂತ ಗೋವಾ ಹೈದರಾಬಾದ್‌ಗೆ ಸೈನ್ಯ ಕಳುಹಿಸಿ ಅವೆರಡನ್ನೂ ಭಾರತದ ಒಕ್ಕೂಟದೊಳಗೆ ಸೇರಿಸಿದ್ದರು. ಅವರ ಈ ಕೊಡುಗೆಯನ್ನು ನೋಡಿ ಬಿಜೆಪಿ ಸ್ಮರಿಸುತ್ತದೆ ಎಂದರು.

## ಬಸ್‌ನಲ್ಲಿದ್ದ ಮಹಿಳೆಯ ಸರ ಕಳವು; ಪ್ರಯಾಣಿಕರ ಬ್ಯಾಗ್ ತಪಾಸಣೆ

ಜಾಲಹಳ್ಳಿ: ದೇವದುರ್ಗ ತಾಲ್ಲೂಕಿನ ಮಹಿಳೆಯೊಬ್ಬರು ಶನಿವಾರ ಬೆಳಿಗ್ಗೆ ಬಳ್ಳಾರಿಯಿಂದ ತಿಂಥಣಿ ಬ್ರಿಜ್ ಮೂಲಕ ದೇವದುರ್ಗಕ್ಕೆ ಬರುತ್ತಿರುವ ಸಮಯದಲ್ಲಿ ಬ್ಯಾಗ್‌ನಲ್ಲಿಟ್ಟಿದ್ದ 50 ಗ್ರಾಂ ಚಿನ್ನದ ಎರಡು ಸರಗಳನ್ನು ಕಳವು ಮಾಡಲಾಗಿದೆ.

ಬೆಳಿಗ್ಗೆ 10.30ಕ್ಕೆ ತಿಂಥಣಿ ಬ್ರಿಜ್‌ನಿಂದ ದೇವದುರ್ಗಕ್ಕೆ ಬರುವಾಗ ಬಸ್ ಹತ್ತುವ ಸಂದರ್ಭದಲ್ಲಿ ಕಳ್ಳರು ಕಳವು ಮಾಡಿದ್ದಾರೆ.ತಕ್ಷಣವೇ ಎಚ್ಚೆತ್ತ ಮಹಿಳೆ ಪತಿಗೆ ವಿಷಯ ತಿಳಿಸಿದ್ದಾರೆ.

ಬಸ್‌ನಲ್ಲಿರುವ ಪ್ರಯಾಣಿಕರನ್ನು ವಿಚಾರಿಸಿದರೂ ಪ್ರಯೋಜನವಾಗಿಲ್ಲ.

ನಂತರ ಜಾಲಹಳ್ಳಿ ಪಟ್ಟಣದ ಪೊಲೀಸ್ ಠಾಣೆಗೆ ಬಸ್ ಕರೆತಂದು ಬಸ್‌ನಲ್ಲಿದ್ದ ಎಲ್ಲ ಪ್ರಯಾಣಿಕರ ಬ್ಯಾಗ್‌ಗಳನ್ನು ಪರಿಶೀಲಿಸಿದರೂ ಚಿನ್ನದ ಸರಗಳು ಸಿಕ್ಕಿಲ್ಲ. ಈ ಯಾವುದೇ ಪ್ರಕರಣ ದಾಖಲಾಗಿಲ್ಲ ಎಂದು ತಿಳಿದು ಬಂದಿದೆ.

'ತಿಂಥಣಿ ಬ್ರಿಜ್ ದೇವದುರ್ಗ ತಾಲ್ಲೂಕಿಗೆ ಸೇರಿದ್ದು, ತಾಲ್ಲೂಕುಗಳ ಸಂಪರ್ಕ ಕಲ್ಪಿಸುವ ಕೇಂದ್ರ. ಇಲ್ಲಿ ನಿತ್ಯ ಒಂದಿಲ್ಲ ವಸ್ತುಗಳ ಕಳವು ನಡೆಯುತ್ತದೆ. ಆದರೆ, ಕೆಲವರು ಮಾತ್ರ ದೂರು ನೀಡುತ್ತಾರೆ' ಎಂದು ಆರೋಪ ಕೇಳಿ ಬಂದಿದೆ.

# ಗ್ಯಾರಂಟಿ ಯೋಜನೆಯಿಂದ ದೇಶ ದಿವಾಳಿ: ಮಾಜಿ ಸಚಿವ ಎಸ್.ಎಸ್.ಪಾಟೀಲ

ಮುಂಡರಗಿ: ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆ ನೀಡುವುದಕ್ಕಾಗಿ ಪ್ರಸ್ತುತ ಬಜೆಟ್‌ನಲ್ಲಿ □52 ಸಾವಿರ ಕೋಟಿ ಮೀಸಲಿರಿಸಿದ್ದು, ಜನರನ್ನು ದುಡಿಯದೆ ಉಣ್ಣಲು ಪ್ರೇರೇಪಿಸುತ್ತಿದೆ. ಉಚಿತ ಕೊಡುಗೆಗಳನ್ನು ಕೊಡುತ್ತಾ ಹೋದರೆ ದೇಶ ದಿವಾಳಿಯಾಗುವ ಸಾಧ್ಯತೆ ಇದೆ. ರಾಜ್ಯದ ವಿವಿಧ ನೀರಾವರಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ರೈತರ ಜಮೀನುಗಳಿಗೆ ನೀರೊದಗಿಸಲು ಆ ಹಣವನ್ನು ವಿನಿಯೋಗಿಸಬೇಕು ಎಂದು ಮಾಜಿ ಸಚಿವ ಎಸ್.ಎಸ್.ಪಾಟೀಲ ಹೇಳಿದರು.

ಕರ್ನಾಟಕ ರಾಜ್ಯ ಚುಟುಕು ಸಾಹಿತ್ಯ ಪರಿಷತ್ತು ಪಟ್ಟಣದ ಜಗದ್ಗುರು ಅನ್ನದಾನೀಶ್ವರ ಮಠದಲ್ಲಿ ಶನಿವಾರ ಹಮ್ಮಿಕೊಂಡಿದ್ದ ಅಖಂಡ ಧಾರವಾಡ ಜಿಲ್ಲಾ ಚುಟುಕು ಸಾಹಿತ್ಯ ಸಮ್ಮೇಳನದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

'ಬಸವಣ್ಣನನ್ನು ಸಾಂಸ್ಕೃತಿಕ ರಾಯಭಾರಿ'



ಎಂದು ಕೊಂಡಾಡುತ್ತಿರುವ ರಾಜ್ಯ ಸರ್ಕಾರವು ಶರಣ–ರು ಪ್ರತಿಪಾದಿಸಿದ ಕಾಯಕ ತತ್ವವನ್ನು ಸಂಪೂರ್ಣವಾಗಿ ಕಡೆಗಣಿಸಿದೆ. ದುಡಿಯದೆ ಉಣ್ಣುವುದು ಮಹಾಪಾಪ ಎಂದು ಶರಣರು ಸಾರಿದ್ದರು. ಆದರೆ ಇಂದಿನ ಸರ್ಕಾರ ಉಚಿತವಾಗಿ ಹಲವು ಸೌಲಭ್ಯಗಳನ್ನು ನೀಡುವ ಮೂಲಕ ಜನರನ್ನು ಕಾಯಕದಿಂದ ವಿಮುಖರನ್ನಾಗಿ ಮಾಡುತ್ತಲಿದೆ ಎಂದು ಹರಿಹಾಯ್ದರು.

ಸಮ್ಮೇಳ ಉದ್ಘಾಟಿಸಿದ ಮೈಸೂರಿನ ಡಾ.ಸುಜ್ಞಾನದೇವ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಸಾಧನೆಯು ಯಾರಿಗೂ ಸುಲಭವಾಗಿ ಒಲಿಯುವುದಿಲ್ಲ. ನಿದ್ರಾಹಾರಗಳನ್ನು ತ್ಯಜಿಸಿ, ಒಂದೇ ವಿಷಯದಲ್ಲಿ ಮಗ್ನರಾಗಿ ತೊಡಗಿದಾಗ ಮಾತ್ರ ಕನಸು ನನಸಾಗುತ್ತದೆ. ಅಲ್ಪ ಜ್ಞಾನವು ಅಪಾಯಕಾರಿಯಾಗಿದ್ದು, ನಾವೆಲ್ಲ ಪರಿಪೂರ್ಣ ಜ್ಞಾನ ಸಂಪಾದಿಸಬೇಕು ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ಡಾ.ಅನ್ನದಾನೀಶ್ವರ ಸ್ವಾಮೀಜಿ ಮಾತನಾಡಿ, ಚುಟುಕು ಎನ್ನುವುದು ವೇದಗಳ ಕಾಲದಿಂದಲೂ ಜಾರಿಯಲ್ಲಿರುವ ಒಂದು ಶಾಸ್ತ್ರ ಮಾರ್ಗವಾಗಿದ್ದು, ಬಹುತೇಕ ಜೀವನ ಸೂತ್ರಗಳು ಚುಟುಕು ಮಾದರಿಯಲ್ಲಿರುತ್ತವೆ. ಅಲ್ಪ ಪದಗಳನ್ನು ಬಳಸಿ ವಿಶಾಲವಾದ ತಿಳಿವಳಿಕೆ ಹಾಗೂ ಅರ್ಥ ನೀಡುವ ಸಾಮರ್ಥ್ಯ ಚುಟುಕುಗಳಿಗಿದೆ ಎಂದು ತಿಳಿಸಿದರು.

# ಮಾಜಿ ಸಚಿವೆ ಲೀಲಾದೇವಿ ಪ್ರಸಾದ್‌ಗೆ ಅಕ್ಕ ಪ್ರಶಸ್ತಿ

ಧಾರವಾಡ: ಅಕ್ಕನ ಬಳಗ ವತಿಯಿಂದ ಎರಡು ವರ್ಷಕ್ಕೊಮ್ಮೆ ಕೊಡ ಮಾಡುವ ಅಕ್ಕ ಪ್ರಶಸ್ತಿಗೆ ಮಾಜಿ ಸಚಿವೆ ಡಾ.ಲೀಲಾದೇವಿ ಆರ್. ಪ್ರಸಾದ ಅವರನ್ನು ಆಯ್ಕೆ ಮಾಡಲಾಗಿದೆ ಎಂದು ಬಳಗದ ಅಧ್ಯಕ್ಷೆ ಮುಕ್ತಾ ಸವಡಿ ಹೇಳಿದರು.ನಗರದಲ್ಲಿ ಶುಕ್ರವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಪ್ರಶಸ್ತಿಯು 10 ಸಾವಿರ ನಗದು, ಪ್ರಶಸ್ತಿ ಫಲಕ ಒಳಗೊಂಡಿದೆ.

ಇಲ್ಲಿಯ ಶ್ರೀ ಮೃತ್ಯುಂಜಯಪ್ಪಗಳ ಭವನದಲ್ಲಿ ಫೆ.27 ರಂದು ಬೆಳಿಗ್ಗೆ 11 ಗಂಟೆಗೆ ಪ್ರಶಸ್ತಿ ಪ್ರದಾನ ನೆರವೇರಲಿದೆ.ವಿರೋಧ ಪಕ್ಷ ಉಪನಾಯಕ ಅರವಿಂದ ಬೆಲ್ಲದ ಅಧ್ಯಕ್ಷತೆ ವಹಿಸಲಿದ್ದು, ಜಿಲ್ಲಾಧಿಕಾರಿ ದಿವ್ಯಾ ಪ್ರಭು ಮುಖ್ಯ ಅತಿಥಿಯಾಗಿ ಆಗಮಿಸುವರು. ವೈಶುದೀಪ ಫೌಂಡೇಶನ್ ಮುಖ್ಯಸ್ಥೆ ಶಿವಲೀಲಾ ಕುಲಕರ್ಣಿ, ಉತ್ತರ ಕನ್ನಡ ಲೇಖಕಿಯರ ಸಂಘದ ಅಧ್ಯಕ್ಷೆ ರಾಜೇಶ್ವರಿ ಮಹೇಶ್ವರಯ್ಯ ಪಾಲ್ಗೊಳ್ಳಲಿದ್ದಾರೆ ಎಂದರು.

ಮಾಜಿ ಸಚಿವ ವಿನಯ ಕುಲಕರ್ಣಿ ಅವರು ಮಾತೋಶ್ರೀ ಸುವರ್ಣಮ್ಮ ರಾಜಶೇಖರ ಕುಲಕರ್ಣಿ ಸ್ಮರಣಾರ್ಥ ಈ ದತ್ತಿ ಸ್ಥಾಪಿಸಿದ್ದು, ಇದರ ಮೂಲಕ ಪ್ರತಿ



ಎರಡು ವರ್ಷಕ್ಕೊಮ್ಮೆ ಪ್ರಶಸ್ತಿ ಪ್ರದಾನ ಮಾಡುತ್ತಾ ಬರಲಾಗಿದೆ. ಇದಲ್ಲದೆ ಅಕ್ಕನ ಬಳಗವು ಸಾಹಿತ್ಯ ಹಾಗೂ ಮಹಿಳಾ ಪರವಾದ ಕಾರ್ಯ ಮಾಡುವುದರ ಜತೆಗೆ ಮಕ್ಕಳ ಪ್ರತಿಭೆಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಸಾಮಾಜಿಕ ಕಾರ್ಯಗಳಲ್ಲಿಯೂ ತೊಡಗಿ–ಕೊಂಡಿದೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಸುನಂದಾ ಗುಡ್ಡದ, ಪ್ರೇಮಾ ಹಲಕಿ, ಗೌರಾ ಹಾಲಭಾವಿ, ಶಾರದಾ ಕೌದಿ, ವೀಣಾ ಹರಿಹರ, ಭಾರತಿ ರಾಜಗುರು ಇದ್ದರು.

# ಕಾರ್ಗಿಲ್ ಯುದ್ಧ ವಿಜಯೋತ್ಸವ; ರಜತ ಮಹೋತ್ಸವ ಕಳಸ ರಥ ಯಾತ್ರೆಗೆ ಅದ್ದೂರಿ ಸ್ವಾಗತ

ಗಂಗಾವತಿ: ಭಾರತೀಯ ಸೇನೆ ವಿಶ್ವ–ಕ್ಕೆ ಮಾದರಿಯಾಗಿದ್ದು, ಯುದ್ಧ ಮತ್ತು ಪ್ರಕೃತಿ ವಿಕೋಪ ಸೇರಿ ತುರ್ತು ಪರಿಸ್ಥಿತಿಯಲ್ಲಿ ಜನ ಸಾಮಾನ್ಯರ ನೆರವಿಗೆ ಸೈನಿಕರು ಆಗಮಿಸಿ ಮಾನವೀಯತೆ ಮೆರೆದಿದ್ದಾರೆ ಎಂದು ಮಾಜಿ ಸಂಸದ ಎಚ್.ಜಿ. ರಾಮುಲು ಹೇಳಿದರು.

ಅವರು ತಮ್ಮ ನಿವಾಸದಲ್ಲಿ ಸಿಟಿಝನ್ ಆಫ್ ಇಂಡಿಯಾ ಸಂಘಟನೆಯ ಕನ್ಯಾಕುಮಾರಿಯಿಂದ ಕಾಶ್ಮೀರದ ಕಾರ್ಗಿಲ್ ವರೆಗೆ ಹಮ್ಮಿಕೊಂಡಿರುವ ಕಾರ್ಗಿಲ್ ವಿಜಯೋತ್ಸವದ ರಜತಮಹೋತ್ಸವ ಕಳಸ ರಥ ಯಾತ್ರೆಗೆ ಅದ್ದೂರಿ ಸ್ವಾಗತ ನೀಡಿ ಮಾತನಾಡಿದರು.

ಕಾರ್ಗಿಲ್ ಯುದ್ಧ ಭಾರತೀಯ ಮಿಲಿಟರಿಗೆ ಸ್ವಾಭಿಮಾನ ಪ್ರಶ್ನಿಸುವ ಯುದ್ಧವಾಗಿತ್ತು. ನೂರಾರು ಸೈನಿಕರು ಹುತಾತ್ಮರಾಗಿ ದೇಶದ ಗಡಿ ಸಂರಕ್ಷಣೆ ಮಾಡಿದ್ದಾರೆ. ದೇಶ ವಾಸಿಗಳು ಯಾವಾಗಲೂ ಸೈನಿಕರಿಗೆ ಗೌರವ ಸಲ್ಲಿಸಬೇಕು. ಯುವಜನರು ಸೈನ್ಯ ಸೇರಬೇಕು. ಪ್ರತಿಯೊಬ್ಬರು ಭಾರತೀಯತೆ ಮೈಗೂಡಿಸಿಕೊಂಡು ದೇಶ ಪ್ರೇಮ ಮೆರೆಯಬೇಕು ಎಂದು ಹೇಳಿದರು.

ದೇಶದ ಸ್ವಾಭಿಮಾನವನ್ನು ಸದಾ ಮೆರೆಸಬೇಕು. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಹಿಂದೂ, ಮುಸ್ಲಿಂ, ಕ್ರೈಸ್ತ, ಪಾರ್ಸಿ, ಶಿಖ್ ಸೇರಿ ಹಲವು ಸಮುದಾಯದವರು ತ್ಯಾಗ, ಬಲಿದಾನ ಮಾಡಿದ್ದು, ಸ್ವಾತಂತ್ರ್ಯ ನಂತರ ಜನಿಸಿದವರು ಇತಿಹಾಸಕ್ಕೆ ಗೌರವ



ಕೊಡಬೇಕು. ಸಿಟಿಝನ್ ಆಫ್ ಇಂಡಿ–ಯಾ ಸಂಘಟನೆಯವರು ಕಳೆದ 25 ವರ್ಷಗಳಿಂದ ಕಾರ್ಗಿಲ್ ಯುದ್ಧ ವಿಜಯೋತ್ಸವದ ಮೂಲಕ ಯುವಕರಿಗೆ ದೇಶ ಭಕ್ತಿ ಮೂಡಿಸುತ್ತಿರುವುದು ಗೌರವದ ಕಾರ್ಯವಾಗಿದೆ ಎಂದರು.

ಕಲ್ಮಠದ ಡಾ. ಕೊಟ್ಟೂರು ಸ್ವಾಮೀಜಿ ಮಾತನಾಡಿ, ದೇಶದ ಸ್ವಾಭಿಮಾನದ ಸಂಕೇತವಾಗಿ ಭಾರತೀಯ ಸೈನ್ಯ ಇದುವರೆಗಿನ ಯುದ್ಧ ಮತ್ತು ಸಮುದಾಯದ ಕಾರ್ಯಗಳಲ್ಲಿ ಪಾಲ್ಗೊಂಡಿದೆ. ಮಾರ್ಗದ ಯುದ್ಧ ದುಷ್ಟ ಪಾಕಿಸ್ತಾನ ಕುತಂತ್ರದಿಂದ ಮಾಡಿದ ಯುದ್ಧವಾಗಿದ್ದು, ಸೈನಿಕರು ಪಾಕ್ ಸೈನ್ಯವನ್ನು ಹಿಮ್ಮೆಟ್ಟಿದ ಶೌರ್ಯದ ಪ್ರದರ್ಶನವಾಗಿದೆ ಎಂದು ಹೇಳಿದರು.

ಸಿಟಿಝನ್ ಆಫ್ ಇಂಡಿ–ಯಾ ಸಂಘಟನೆಯ ಕಾರ್ಯಕರ್ತರು ಕಳೆದ 25 ವರ್ಷಗಳಿಂದ ಪ್ರತಿ ವರ್ಷದ ವಿಜಯೋತ್ಸವದ ಕಳಸ ರಥ ಯಾತ್ರೆ ಆಯೋಜಿಸುತ್ತಿರುವುದು ಗೌರವದ ಸಂಕೇತವಾಗಿದೆ ಎಂದರು.

ಮಾಜಿ ಮಂತ್ರಿ ಎಂ.ಮಲ್ಲಿಕಾರ್ಜುನ ನಾಗಪ್ಪ ಮಾಜಿ ಎಂಎಲ್ಸಿ ಎಚ್.ಆರ್. ಶ್ರೀನಾಥ, ಭಾರತೀಯ ಸೇನೆಯ ಮಾಜಿ ಅಧಿಕಾರಿಗಳು ಹಾಗೂ ಸಿಟಿಝನ್ ಆಫ್ ಇಂಡಿಯಾ ಸಂಘಟನೆಯ ಕ್ಯಾಪ್ಟನ್ ಭಂಡಾರಿ, ಶಿವಕುಮಾರ್, ದಿನೇಶ್, ವೀರೇಂದ್ರ, ರಘುರಾಮರೆಡ್ಡಿ, ಮಣಿಕಂಠ, ಮುನಿಸ್ವಾಮಿ, ಶೇಷಾದ್ರಿ, ಗಣೇಶ,ರಾಜಣ್ಣ, ಮುಖಂಡರಾದ ಜೋಗದ ನಾರಾಯಣಪ್ಪ, ಮಹೇಶ ಸಾಗರ,ಪಟ್ಟಣ ಸೌಹಾರ್ದ ಪಟ್ಟಣ ಬ್ಯಾಂಕ್ ರಾಷ್ಟ್ರ ನಿರ್ದೇಶಕ ಕೆ.ಕಾಳಪ್ಪ, ಎಚ್.ಎಂ.ವಿರೂಪಾಕ್ಷ ಸ್ವಾಮಿ, ರಮೇಶ್ ಗೌಳಿ, ಮಂಗಳಮ್ಮ ಗೌಳಿ, ಉದಯಶೇಟ್, ತಿರುಮಲ, ಹನುಮಂತ ರಾಯ, ಸುರೇಶ ಗೌರಪ್ಪ, ವೀರನಗೌಡ, ಆಯೂಭ್, ಮುಸ್ಟೂರು ರಾಜಶೇಖರ ಸೇರಿ ರೋಟರಿ ಕ್ಲಬ್ ಪದಾಧಿಕಾರಿಗಳು ಅನೇಕರಿದ್ದರು.

## 'ನೇಕಾರ ಸಮುದಾಯಕ್ಕೆ 100 ಕೋಟಿ ಮೀಸಲಿಡಿ'

ಬೀದರ್: ರಾಜ್ಯದಲ್ಲಿ ಸುಮಾರು 60 ಲಕ್ಷ ನೇಕಾರರಿದ್ದು, ಆ ಸಮುದಾಯದ ಅಭಿವೃದ್ಧಿಗೆ ರಾಜ್ಯ ಸರ್ಕಾರ 100 ಕೋಟಿ ಮೀಸಲಿಡಬೇಕು ಎಂದು ರಾಜ್ಯ ನೇಕಾರ ಸಮುದಾಯ ಒಕ್ಕೂಟ ಆಗ್ರಹಿಸಿದೆ.

ಈ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಹೆಸರಿಗೆ ಬರೆದ ಮನವಿಯವನ್ನು ಒಕ್ಕೂಟದ ಪದಾಧಿಕಾರಿಗಳು ನಗರದಲ್ಲಿ ಶುಕ್ರವಾರ ಹೆಚ್ಚುವರಿ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರಿಗೆ ಸಲ್ಲಿಸಿದರು.

ನೇಕಾರರ ಸಮುದಾಯದ ಅಭಿವೃದ್ಧಿಗೆ ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಕ್ರಮ ಕೈಗೊಳ್ಳುವ ಭರವಸೆ ನೀಡಿ–ದ್ದರು. ಈ ಸಂಬಂಧ ಇತ್ತೀಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಸಮುದಾಯದವರು ಭೇಟಿ ಮಾಡಿ, 100 ಕೋಟಿ ಮೀಸಲಿಟ್ಟು ನಿಗಮಕ್ಕೆ ಚಾಲನೆ ಕೊಡಬೇಕೆಂದು ಕೋರಲಾಗಿತ್ತು. ಆದರೆ, ಮುಖ್ಯಮಂತ್ರಿಗಳು ಸ್ಪಂದಿಸಿಲ್ಲ ಎಂದು ಗೋಳು ತೋಡಿಕೊಂಡಿದ್ದಾರೆ.

ಸಮುದಾಯಕ್ಕೆ ಆಗಿರುವ ಅನ್ಯಾಯ ಸರಿಪಡಿಸಬೇಕು. ಕೂಡಲೇ ಅನುದಾನ ಬಿಡುಗಡೆಗೊಳಿಸಬೇಕೆಂದು ಮನವಿ ಮಾಡಿದ್ದಾರೆ. ಒಕ್ಕೂಟ ಜಿಲ್ಲಾಧ್ಯಕ್ಷ ಸೋಮಶೇಖರ ನಾಗಪ್ಪಾ ಅಮಲಾಪೂರೆ ಜಮಗಿ, ಗೌರವ ಅಧ್ಯಕ್ಷ ರಾಮಕೃಷ್ಣಾ ಸಾಳೆ, ಮುಖಂಡರಾದ ಮಾಧವ ಚೌಡೇಕರ್, ಪ್ರಕಾಶ ಕಂಗಳೆ, ಕೃಷ್ಣಾ ಧೊಮಲ್, ಕಿಶೋರ ಸಂಗಾ, ಗುಂಡಪ್ಪ ಕನಕ, ರಮೇಶ ಮಾಮಡೆಕರ್, ದೇವಿಂದ್ರ ಎಮ್ಮೆಕರ, ಯೋಗೇಶ ಶೆಂದ್ರೆ, ಶೇಖರ್, ಪ್ರಶಾಂತ ಶೆಂದ್ರೆ, ವೀರಣ್ಣಾ ತೊಗಲೂರ್, ರಾಜಶೇಖರ್ ಚಂದಾ, ಅನೂಪಕುಮಾರ ಢಗೆ, ಬಸವರಾಜ ಮಾಮಡೆ ಇತರರಿದ್ದರು.

# ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳ ಆಶೀರ್ವಾದ ಪಡೆದ ಕೆಆರ್‌ಪಿಪಿ ಲಕ್ಷ್ಮಿ ಅರುಣ



ಬಳ್ಳಾರಿ ಫೆ 24.ಬಳ್ಳಾರಿ ಜಿಲ್ಲೆಯ ಕುರುಗೋಡು ಸಮೀಪದ ಎಮ್ಮಿಗನೂರು ಗ್ರಾಮದ ಹಂಪಿ ಸಾವಿರ ದೇವರ ಮಠದ ಶ್ರೀವಾಮದೇವ ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳನ್ನು ಭೇಟಿ ಮಾಡಿದ ಕೆಆರ್‌ಪಿ ಪಕ್ಷದ ಹಿರಿಯ ಧುರೀಣೆ ಅರುಣಾ ಲಕ್ಷ್ಮೀಯವರು ಶ್ರೀಗಳಿಗೆ ಫಲಪುಷ್ಪ ತಾಂಬೂಲವನ್ನು ನೀಡಿ ಆಶೀರ್ವಾದ ಪಡೆದರು.ಶ್ರೀ ಬ್ರಹ್ಮಜ್ಞಾನಿ ನಿಟ್ರಾವಟ್ಟಿ ಬಸಪ್ಪ ತಾತನವರ 52ನೇ ವರ್ಷದ ಪುಣ್ಯಾರಾಧನೆ ಮತ್ತು ಶರಣೆ ಲಿಂಗಮ್ಮನವರ 31ನೇ ವರ್ಷದ ಪುಣ್ಯಾರಾಧನೆ ಮತ್ತು ಎಂಟನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಎಮ್ಮಿಗನೂರು ಗ್ರಾಮದ ಹಂಪಿ ಸಾವಿರ ದೇವರ ಮಠದಲ್ಲಿ ಪೂಜಾ ಕಾರ್ಯಕ್ರಮಗಳು ನಡೆಯುತ್ತಿದ್ದು ಈ ಹಿನ್ನೆಲೆಯಲ್ಲಿ ಕೆಆರ್‌ಪಿ ಪಕ್ಷದ ಹಿರಿಯ ಧುರೀಣೆ ಅರುಣಾ ಲಕ್ಷ್ಮೀಯವರು ಮಠಕ್ಕೆ ಭೇಟಿ ನೀಡಿ ಶ್ರೀವಾಮದೇವ ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳಿಂದ ಆಶೀರ್ವಾದ ಪಡೆದು ನಂತರ 200 ಮುತ್ತೈದೆಯರಿಗೆ ಉಡಿ ತುಂಬ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ತದನಂತರ ನಡೆದ ಕಾರ್ಯಕ್ರಮದಲ್ಲಿ ಎಸ್. ಎಸ್.ಎಲ್.ಸಿ, ಪಿ.ಯು.ಸಿ ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ, ರಾಜ್ಯಮಟ್ಟಕ್ಕೆ ಆಯ್ಕೆಯಾದ ಸ್ಥಳೀಯ ಕ್ರೀಡಾಪಟುಗಳಿಗೆ ಪ್ರೋತ್ಸಾಹಧನ ವಿತರಣೆ ಹಾಗೂ ಮಕ್ಕಳಿಗೆ ಬಟ್ಟೆ, ಪುಸ್ತಕ ವಿತರಣೆಯನ್ನು ಅರುಣಾ ಲಕ್ಷ್ಮೀಯವರು ಮಾಡಿದರು. ಇದೇ ಸಂದರ್ಭದಲ್ಲಿ ಶ್ರೀವಾಮದೇವ ಮಹಾಂತ ಶಿವಾಚಾರ್ಯ ಮಹಾಸ್ವಾಮಿಗಳು, ಕಂಪ್ಲಿಯ ಶಾಸಕರಾದ ಜೆ.ಎನ್ ಗಣೇಶ್, ಕಲ್ಯಾಣ ರಾಜ್ಯ ಪ್ರಗತಿ ಪಕ್ಷದ ಚಿತ್ರದುರ್ಗ ಜಿಲ್ಲೆ, ಸೇವಾ ಟ್ರಸ್ಟ್ ಅಧ್ಯಕ್ಷರಾದ ಕೆ.ಬಿ.ವೇದಮೂರ್ತಿ ದಂಪತಿಗಳು ಹಾಗೂ ಇನ್ನಿತರ ಮುಖಂಡರು, ಗುರು–ಹಿರಿಯರು, ಸ್ಥಳೀಯರು ಉಪಸ್ಥಿತರಿದ್ದರು.

# ಮಾಧ್ಯಮ ಪ್ರಮಾಣೀಕರಣ, ಮೇಲ್ವಿಚಾರಣಾ ಸಮಿತಿ ಮಾರ್ಗಸೂಚಿಗಳನ್ವಯ ಕಾರ್ಯನಿರ್ವಹಿಸಲಿ

ಗದಗ:ಮುಂಬರುವ ಲೋಕಸಭಾ ಚುನಾವಣೆ–2024 ರ ಅಂಗವಾಗಿ ಕರ್ನಾಟಕ ಚುನಾವಣಾ ಆಯೋಗದಿಂದ ಶುಕ್ರವಾರದಂದು(ಫೆ.23) ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯ ಜವಾಬ್ದಾರಿ, ಕರ್ತವ್ಯಗಳ ಬಗ್ಗೆ ಜಿಲ್ಲಾ ಚುನಾವಣಾ ವಿಭಾಗದಲ್ಲಿ ವಿಡಿಯೋ ಸಂವಾದ ಜರುಗಿತು.

ವಿಡಿಯೋ ಸಂವಾದದಲ್ಲಿ ಮಾತನಾಡಿದ ಕರ್ನಾಟಕ ಚುನಾವಣಾ ಆಯೋಗದ ಹೆಚ್ಚುವರಿ ಮುಖ್ಯ ಚುನಾವಣಾಧಿಕಾರಿ ವೆಂಕಟೇ□□ಕುಮಾರ್ ಆರ್. ಅವರು, ಚುನಾವಣೆಗಳಲ್ಲಿ ನೀತಿ ಸಂಹಿತೆ ಜಾರಿ ದಿನಾಂಕದಿಂದ ಮುಕ್ತಾಯದ ದಿನಾಂಕದವರೆಗೆ ಚುನಾವಣಾ ನಿಯೋಜಿತ ಸಮಿತಿ, ಅಧಿಕಾರಿಗಳು ಚುನಾವಣಾ ಆಯೋಗದ ಮಾರ್ಗಸೂಚಿಗಳನ್ನು ಕಡ್ಡಾಯವಾಗಿ ಪಾಲಿಸಿ, ಅದರನ್ವಯ ಕಾರ್ಯನಿರ್ವಹಿಸಬೇಕು. ಅಭ್ಯರ್ಥಿಗಳು, ರಾಜಕೀಯ ಪಕ್ಷಗಳು ತಮ್ಮ ಪ್ರಚಾರದ ಮಾರ್ಗವಾಗಿ ದಿನಪತ್ರಿಕೆಗಳು, ಸುದ್ದಿವಾಹಿನಿಗಳು, ರೇಡಿಯೋ, ಎಫ್. ಎಂಗಳು, ಸಾಮಾಜಿಕ ಜಾಲತಾಣಗಳನ್ನು ಅವಲಂಬಿಸಿರುತ್ತವೆ. ಆದ್ದರಿಂದ ಇವುಗಳ ಮೇಲೆ ನಿಗಾ ಇಡಲು ಚುನಾವಣಾ ಆಯೋಗದಿಂದ ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯನ್ನು ರಚಿಸಲಾಗಿದೆ. ಇದರಲ್ಲಿ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾಗಿ ವಾರ್ತಾಧಿಕಾರಿಗಳನ್ನು ಒಳಗೊಂಡು ಜಿಲ್ಲಾ ಚುನಾವಣಾಧಿಕಾರಿಗಳು ಸಮಿತಿಯನ್ನು ರಚಿಸಬೇಕು ಎಂದು ಅವರು ತಿಳಿಸಿದರು.

ಚುನಾವಣೆಗಾಗಿ ಅಭ್ಯರ್ಥಿಗಳು, ರಾಜಕೀಯ ಪಕ್ಷಗಳು ಪತ್ರಿಕೆಗಳು, ಸುದ್ದಿವಾಹಿನಿಗಳು ಮುಂತಾದ ಮಾಧ್ಯಮಗಳ ಮೂಲಕ ನೀಡುವ ಜಾಹೀರಾತುಗಳ ಮೇಲೆ, ಮಾಧ್ಯಮಗಳಲ್ಲಿ ಬರುವ ಸುದ್ದಿಗಳ ಮೇಲೆ ಸಮಿತಿಯು ನಿಗಾ ವಹಿಸಬೇಕು. ಪತ್ರಿಕೆಗಳಲ್ಲಿ ಪ್ರಕಟವಾಗುವ, ಸುದ್ದಿ ವಾಹಿನಿಗಳಲ್ಲಿ ಪ್ರಸಾರವಾಗುವ ಸಂದರ್ಶನ, ಏಕ ವ್ಯಕ್ತಿ ಕೇಂದ್ರಿತ ಸುದ್ದಿಗಳ ಮೇಲೆ ನಿಗಾ



ವಹಿಸಿ, ಪೇಯ್ಡ್ ಸುದ್ದಿಯ ಕುರಿತು ಎಚ್ಚರಿಕೆ ವಹಿಸಬೇಕು. ಪೇಯ್ಡ್ ಸುದ್ದಿ ಎಂದು ಸಮಿತಿಯು ನಿರ್ಧರಿಸಿದ ಮೇಲೆ ಆಯೋಗದ ಮಾರ್ಗಸೂಚಿಯನ್ವಯ ಮುಂದಿನ ಕ್ರಮ ಕೈಗೊಳ್ಳಬೇಕು. ಜಾಹೀರಾತು ವೆಚ್ಚದ ಮಾಹಿತಿಯನ್ನು ಆ□□ಒ, ಎಕ್ಸ್ಪೆಂಡಿಚರ್ ಅಧಿಕಾರಿಗೆ ಪ್ರತಿ ದಿನ ನೀಡಬೇಕು. ಸಾಮಾಜಿಕ ಮಾಧ್ಯಮಗಳಲ್ಲಿ ಪ್ರಸಾರವಾಗುವ ಜಾಹೀರಾತು, ಸುದ್ದಿಗಳನ್ನು ಗುರುತಿಸಿ ವರದಿ ಮಾಡಬೇಕು ಎಂದು ಮಾಧ್ಯಮ ಪ್ರಮಾಣೀಕರಣ ಹಾಗೂ ಮೇಲ್ವಿಚಾರಣಾ ಸಮಿತಿಯ ಕಾರ್ಯಗಳು, ಜವಾಬ್ದಾರಿಗಳ ಕುರಿತು ವಿವರವಾಗಿ ಮಾಹಿತಿ ನೀಡಿದರು.

ವಿಡಿಯೋ ಸಂವಾದದ ಬಳಿಕ ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿಗಳಾದ ವೈಶಾಲಿ.ಎಂ.ಎಲ್. ಅವರು ಮಾತನಾಡಿಚುನಾವಣಾ ಅಕ್ರಮಗಳ ಬಗ್ಗೆ ನೀತಿ ಸಂಹಿತೆಯ ಉಲ್ಲಂಘನೆ ಪ್ರಕರಣಗಳ ಬಗ್ಗೆ ದಿನಪತ್ರಿಕೆ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಆಗುವ ವರದಿಗಳನ್ನು ಕ್ಷಣ ಕ್ಷಣ–ಕ್ಕೆ ಎಂ.ಸಿ.ಎಂ.ಸಿ ಸಮಿತಿಯು ವರದಿ ಮಾಡಬೇಕು.

ಉಲ್ಲಂಘನೆ ಪ್ರಕರಣಗಳು ಹಾಗೂ ಚುನಾವಣಾ ಅಕ್ರಮಗಳ ವರದಿಗಳ ಮೇಲೆ ನಿರಂತರ ನಿಗಾವಹಿಸಬೇಕು. ಕರ್ತವ್ಯ ನಿರ್ವಹಿಸಬೇಕು ಎಂದರು.

# ನನಗೆ ಜಾತಿ ಅನ್ನುವುದಿಲ್ಲ, ಮನುಷ್ಯತ್ವವೇ ನನ್ನ ಜಾತಿ: ಲಕ್ಷ್ಮೀ ಹೆಬ್ಬಾಳಕರ್

ಬೆಳಗಾವಿ: ಎಲ್ಲೆ ಇದ್ದರೂ ಬೆಳಗಾವಿ ಗ್ರಾಮೀಣ ಕ್ಷೇತ್ರಕ್ಕೆ ಕೈ ಮುಗಿದು ಮುಂದಿನ ಕೆಲಸ ಆರಂಭಿಸುತ್ತೇನೆ. ಈ ಕ್ಷೇತ್ರ-ಕ್ಕೆ ಒಳ್ಳೆಯ ಕೆಲಸ ತರುವುದೇ ನನ್ನ ಉದ್ದೇಶ. ಮೊದಲ ಬಾರಿಗೆ ಈ ಕ್ಷೇತ್ರದಿಂದ ಮಂತ್ರಿಯಾದಗಿದ್ದೇನೆ. ಈ ಸೌಭಾಗ್ಯಕ್ಕಾಗಿ ನಾನು ಎಲ್ಲರಿಗೂ ಕೃತಜ್ಞಳಾಗಿದ್ದೇನೆ ಎಂದು ರಾಜ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಬೆಳಗಾವಿ ಗ್ರಾಮೀಣ ಕ್ಷೇತ್ರದ ಬಾಳೇಕುಂದ್ರಿ ಕೆ ಎಚ್ ಗ್ರಾಮದಲ್ಲಿ ಶ್ರೀ ಮಹಾಲಕ್ಷ್ಮಿ ಮಂದಿರದ ನೂತನ ಕಟ್ಟಡದ ನಿರ್ಮಾಣಕ್ಕಾಗಿ ಶನಿವಾರ ಕಾಲಂ ಪೂಜೆ ನೆರವೇರಿಸಿ, ಕಟ್ಟಡ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ರಾಜ್ಯದಲ್ಲಿ ಎಲ್ಲಿಯೇ ಹೋದರೂ ಭಾಷಣದ ಪೂರ್ವದಲ್ಲಿ ನನ್ನ ಕ್ಷೇತ್ರ, ನನ್ನ ಮತದಾರರು, ಸುಳೇಭಾವಿ ಮಹಾಲಕ್ಷ್ಮೀ, ಉಚಗಾಂವ ಮಳೇಕರಣಿ ದೇವಿಯನ್ನು ಸ್ಮರಿಸಿ ಭಾಷಣ ಮಾಡುತ್ತಿದ್ದೇನೆ. ಕ್ಷೇತ್ರದ ಜನರ ಆಶೀರ್ವಾದದಿಂದ ಇಂದು ರಾಜ್ಯದಲ್ಲಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಎಂದು ಕರೆಯುವಂತಾಗಿದೆ. ಮೊದಲು ನನಗೆ ನನ್ನ ಕ್ಷೇತ್ರ, ಆಮೇಲೆ ರಾಜ್ಯ. ದಿನ ಬೆಳಗಾದರೆ ಕ್ಷೇತ್ರಕ್ಕೆ ಎಷ್ಟು ಅನುದಾನ ತೆಗೆದುಕೊಂಡು ಹೋಗಲಿ, ಯಾವ ಇಲಾಖೆಯಿಂದ ತೆಗೆದುಕೊಂಡು ಹೋಗಲಿ ಎಂದು ಯೋಚಿಸುತ್ತೇನೆ ಎಂದು ಅವರು ಹೇಳಿದರು.

ಎಲ್ಲರ ಕೈಯಿಂದ ದೇವಸ್ಥಾನಗಳನ್ನು ಕಟ್ಟಲು ಸಾಧ್ಯವಿಲ್ಲ. ಅದಕ್ಕೆ ಪುಣ್ಯ ಮಾಡಿರಬೇಕು. ನನ್ನ ಹಿಂದಿನ ಜನ್ಮದ ಪುಣ್ಯವೋ ಗೊತ್ತಿಲ್ಲ, ಕ್ಷೇತ್ರದಲ್ಲಿ 103 ಮಂದಿರಗಳನ್ನು ಕಟ್ಟುವ ಅವಕಾಶ ಸಿಕ್ಕಿದೆ. ಕ್ಷೇತ್ರದ ಅಭಿವೃದ್ಧಿಯೇ ನನ್ನ ಹವ್ಯಾಸವಾಗಿದೆ, ಯಾವುದೇ ಸಮಾಜವಿರಲಿ, ಎಲ್ಲರನ್ನೂ ಸೇರಿಸಿಕೊಂಡು ಬೆಳಗಾವಿ ಗ್ರಾಮೀಣ ಕ್ಷೇತ್ರವನ್ನು ಮುನ್ನೆಡೆಸುತ್ತಿದ್ದೇನೆ. ನನಗೆ ಜಾತಿ ಅನ್ನುವುದಿಲ್ಲ, ಮನುಷ್ಯತ್ವವೇ ನನ್ನ ಜಾತಿ, ಹಾಗಾಗಿ ಬಸವಣ್ಣನವರನ್ನು ಸಾಂಸ್ಕೃತಿಕ ನಾಯಕನನ್ನಾಗಿ ಘೋಷಿಸಲಾಗಿದೆ. ಸಂಗೊಳ್ಳಿ ರಾಯಣ್ಣ, ಕಿತ್ತೂರು ಚನ್ನಮ್ಮ, ಅಂಬೇಡ್ಕರ್, ಮಹಾವೀರ



ಎಲ್ಲರಿಗೂ ಜೈ ಎನ್ನುತ್ತೇನೆ. ನಾನು ಎಂದೂ ಅಭಿವೃದ್ಧಿಯಲ್ಲಿ ರಾಜಕಾರಣ ಮಾಡುವುದಿಲ್ಲ, ನೀವೂ ರಾಜಕಾರಣ ಮಾಡಬೇಡಿ. ನನ್ನ ಕೈಯಲ್ಲಿ ಎಷ್ಟು ದಿನ ಅಧಿಕಾರವಿರತ್ತೋ ಅಲ್ಲಿಯವರೆಗೆ ಅಭಿವೃದ್ಧಿ ಕೆಲಸಗಳು ಮುಂದುವರೆಯಲಿವೆ ಎಂದು ಸಚಿವರು ತಿಳಿಸಿದರು. ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಗ್ರಾಮ ಪಂಚಾಯತ್ ಅಧ್ಯಕ್ಷೆ ನಮ್ರತಾ ಪ್ರ ಜಾಧವ್, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ನಾಗೇಶ ದೇಸಾಯಿ, ತಾಲೂಕ ಪಂಚಾಯತ್ ಮಾಜಿ ಅಧ್ಯಕ್ಷ ಶಂಕರಗೌಡ ಪಾಟೀಲ, ನಿಲೇಶ್ ಚಂದಗಡ್ಕರ್, ಕಲ್ಲಪ್ಪ ರಾಮಚನ್ನವರ, ಅಂಜನಾ ಬೆಳಗಾಂವ್ಕರ್, ರೇಣುಕಾ ಕರವಿನಕೊಪ್ಪ, ಪ್ರವೀಣ ಮುರಾರಿ, ಮಹಾದೇವಿ ರಾಮಚನ್ನವರ, ಸಂಜಯ ಬಿ. ಪಾಟೀಲ, ಡಾ. ಎನ್. ಎಚ್. ಅಸ್ಕಿ, ದಶರಥ ಚೌಬಾರಿ, ವಸಂತರಾವ ಜಾಧವ್, ಕಮಲವ್ವ ನಾಯಕ್ ಹಾಗೂ ಮಹಾಲಕ್ಷ್ಮೀ ದೇವಸ್ಥಾನ ಜೀರ್ಣೋದ್ಧಾರ ಕಮೀಟಿಯ ಸದಸ್ಯರು ಉಪಸ್ಥಿತರಿದ್ದರು.

ಇದಕ್ಕೂ ಮೊದಲು ಬಾಳೇಕುಂದ್ರಿ ಬಿ.ಕೆ ಗ್ರಾಮದ ವೈರಲೆಸ್ ಮೈದಾನದಲ್ಲಿ ನಡೆಯುತ್ತಿರುವ 'ಹರ್ಷ ಟ್ರೋಫಿ ಲಾಂಗ್ ಪಿಚ್ ಕ್ರಿಕೆಟ್ ' ಪಂದ್ಯಾವಳಿಯ ರೆಗ್ಯುಲರ್ ಪಂದ್ಯಕ್ಕೆ ಟಾಸ್ ಮಾಡುವ ಮೂಲಕ ಕ್ರಿಕೆಟ್ ಆಟಗಾರರಿಗೆ ಸಚಿವರು ಪ್ರೋತ್ಸಾಹಿಸಿ, ಶುಭ ಕೋರಿದರು.5

ನಂತರ ಸುಳೇಭಾವಿ ಗ್ರಾಮದ ಶ್ರೀ ಶಾಕಾಂಭರಿ ಹಾಗೂ ಶ್ರೀ ಬನಶಂಕರಿ ದೇವಿಯ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು, ದರ್ಶನ ಆಶೀರ್ವಾದ ಪಡೆದರು.

ಈ ಸಮಯದಲ್ಲಿ ಗ್ರಾಮದ ಹಿರಿಯರು, ಪಕ್ಷದ ಮುಖಂಡರು, ಆಯಾ ದೇವಸ್ಥಾನದ ಟ್ರಸ್ಟ್ ಕಮೀಟಿಯ ಸದಸ್ಯರು ಹಾಗೂ ಗ್ರಾಮದ ಜನ ಉಪಸ್ಥಿತರಿದ್ದರು. ಮಹಿಳೆಯರು ಸಚಿವರಿಗೆ ಉಡಿ ತುಂಬಿ ಹಾರೈಸಿದರು.

# ಬೆಳಗಾವಿ-ಚೋರ್ಲಾ-ಗೋವಾ ರಸ್ತೆ ಕಾಮಗಾರಿಗೆ ಚಾಲನೆ



ಬೆಳಗಾವಿ : ಬೆಳಗಾವಿ-ಚೋರ್ಲಾ-ಗೋವಾ ರಸ್ತೆ ನಿರ್ಮಾಣ ಮಾಡಬೇಕು ಎಂಬುದು ಅನೇಕ ದಿನಗಳ ಬೇಡಿಕೆಯಾಗಿತ್ತು. ಈ ನಿಟ್ಟಿನಲ್ಲಿ 43.35 ಕಿ.ಮೀ ರಸ್ತೆ, ಚರಂಡಿ, ಸೇತುವೆ ನಿರ್ಮಾಣ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗಿದ್ದು, 11 ತಿಂಗಳ ಅವಧಿಯಲ್ಲಿ ಪೂರ್ಣಗೊಳ್ಳಲಿವೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಖಾನಾಪುರ ತಾಲ್ಲೂಕಿನ ಕಣಕುಂಬಿಯಲ್ಲಿ ಶನಿವಾರ (ಫೆ.24) ಬೆಳಗಾವಿ-ಚೋರ್ಲಾ-ಗೋವಾ ಗಡಿಯವರೆಗಿನ ರಾಜ್ಯ ಹೆದ್ದಾರಿ-748ಎ ದುರಸ್ತಿ ಕಾಮಗಾರಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕರ್ನಾಟಕ ಗೋವಾ ಎರಡು ರಾಜ್ಯಗಳ ಮುಖ್ಯ ಹೆದ್ದಾರಿ ಇದಾಗಿದ್ದು, ರಸ್ತೆ ಸುಧಾರಣೆಯಿಂದ ಪ್ರಯಾಣಿಕರಿಗೆ ಸಾಕಷ್ಟು ಅನುಕೂಲವಾಗಲಿದೆ. ಹೊಸ ರಸ್ತೆ ನಿರ್ಮಾಣದ ಜೊತೆಗೆ 10 ರಿಂದ 12 ಕಿಮೀ ರಸ್ತೆ ದುರಸ್ತಿ ಕಾಮಗಾರಿ ಕೂಡ ಕೈಗೆತ್ತಿಕೊಳ್ಳಲಾಗುವುದು. ರಸ್ತೆ ಹಾಳಾಗದಂತೆ ರಸ್ತೆ ಬದಿಯಲ್ಲಿ ಚರಂಡಿ ನಿರ್ಮಾಣ ಮಾಡಲಾಗುವುದು. ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರೊಂದಿಗೆ ಈಗಾಗಲೇ ಚರ್ಚಿಸಲಾಗಿದೆ. ರಾಜ್ಯದಲ್ಲಿ ಅತೀ ವೇಗವಾಗಿ ರಾಷ್ಟ್ರೀಯ ಹೆದ್ದಾರಿ ರಸ್ತೆಗಳ ನಿರ್ಮಾಣ ಕಾಮಗಾರಿಗಳು ಪ್ರಗತಿಯಲ್ಲಿವೆ. ಅರಣ್ಯ ಇಲಾಖೆಯ ಸ್ಥಳ ಇರುವುದರಿಂದ ರಸ್ತೆ ಅಗಲೀಕರಣ ಸಾಧ್ಯವಿಲ್ಲ ಎಂದು ಹೇಳಿದರು.ಗೋಕಾಕ್ ಫಾಲ್ಸ್ ಪ್ರವಾಸಿ ತಾಣವಾಗಿ ಮಾರ್ಪಾಡು ಮಾಡಲು ಹಾಗೂ ಬೆಳಗಾವಿ ನಗರದಲ್ಲಿ ಫ್ಲೈಓವರ್ ನಿರ್ಮಾಣಕ್ಕೆ ಯೋಜನೆ ರೂಪಿಸಲಾಗಿದೆ. ಇದರಿಂದ ನಗರದಲ್ಲಿ ಸಂಚಾರ ದಟ್ಟಣೆ ಕಡಿಮೆಯಾಗಲಿದೆ ಎಂದರು.

ರಾಜ್ಯದಲ್ಲಿ ಈಗಾಗಲೇ ಸಾಕಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಅದರಂತೆ ಹೊಸ ಬಜೆಟ್ ನಲ್ಲಿ ಘೋಷಿಸಿರುವ ಅನೇಕ ಉತ್ತಮ ಯೋಜನೆಗಳನ್ನು ಜನರಿಗೆ ತಲುಪಿಸಲಾಗುವುದು ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

ಈ ವೇಳೆ ಖಾನಾಪೂರ ಶಾಸಕ ವಿಠ್ಠಲ ಹಲಗೇಕರ ಅವರು ಮಾತನಾಡಿ, "ಈಗಿರುವ ರಸ್ತೆ ಮಳೆಗಾಲದಲ್ಲಿ ಬಹಳಷ್ಟು ಹಾಳಾಗುತ್ತಿದೆ. ಬೆಳಗಾವಿಯಿಂದ ಗೋವಾ ವರೆಗೆ ಸಂಚರಿಸುವ ರಸ್ತೆಗಳಲ್ಲಿ ಚೋರ್ಲಾ ಮಾರ್ಗ ರಸ್ತೆ ಸಹ ಮುಖ್ಯ ರಸ್ತೆಯಾಗಿದೆ. ಆದ್ದರಿಂದ ಪ್ರಯಾಣಿಕರು ಹಾಗೂ ಸ್ಥಳೀಯರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಸ್ತೆ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದೆ" ಎಂದು ತಿಳಿಸಿದರು.

ರಸ್ತೆ ನಿರ್ಮಾಣ ಕಾಮಗಾರಿ ಭೂಮಿ ಪೂಜೆ:

ಇದಕ್ಕೂ ಮುಂಚೆ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ, ಖಾನಾಪೂರ ಶಾಸಕ ವಿಠ್ಠಲ ಹಲಗೇಕರ, ವಿಧಾನ ಪರಿಷತ್ ಸದಸ್ಯ ನಾಗರಾಜ ಯಾದವ ಅವರು ಬೆಳಗಾವಿ-ಚೋರ್ಲಾ-ಗೋವಾ ರಸ್ತೆ ಕಾಮಗಾರಿಯ ಭೂಮಿ ಪೂಜೆ ನೆರವೇರಿಸುವ ಮೂಲಕ ಕಾಮಗಾರಿಗೆ ಚಾಲನೆ ನೀಡಿದರು.

ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಸವದತ್ತಿ ಶಾಸಕ ವಿಶ್ವಾಸ ವೈದ್ಯ, ಕಿತ್ತೂರು ಶಾಸಕ ಬಾಬಾಸಾಹೇಬ ಪಾಟೀಲ, ವಿಧಾನ ಪರಿಷತ್ ಸದಸ್ಯ ನಾಗರಾಜ ಯಾದವ, ಕಣ-ಕುಂಬಿ ಗ್ರಾಮ ಪಂಚಾಯತಿ ಅಧ್ಯಕ್ಷ, ಉಪಾಧ್ಯಕ್ಷರು, ರಾಷ್ಟ್ರೀಯ ಹೆದ್ದಾರಿ ಮುಖ್ಯ ಇಂಜಿನಿಯರ್ ಸೇರಿದಂತೆ ಕಣಕುಂಬಿ ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.



## ನುಡಿದಂತೆ ನಡೆದ ಕಾಂಗ್ರೆಸ್ ಸರ್ಕಾರ: ಶಿವಣ್ಣನವರ

ರಾಣೆಬೆನ್ನೂರು: 'ರಾಜ್ಯ ಸರ್ಕಾರ ಜಾರಿಗೆ ತಂದಿರುವ ಐದು ಗ್ಯಾರಂಟಿ ಯೋಜನೆಗಳಿಂದ ರೈತರು, ಬಡವರು, ಮಹಿಳೆಯರು, ಕಾರ್ಮಿಕರು, ಹಿಂದುಳಿದ ವರ್ಗಗಳಿಗೆ ಸೇರಿದ ಪ್ರತಿಯೊಂದು ಕುಟುಂಬದಲ್ಲಿ ಆರ್ಥಿಕ ಚಟುವಟಿಕೆಗಳು ಗರಿಗೆದರಿವೆ. ಚುನಾವಣಾ ಸಂದರ್ಭದಲ್ಲಿ ನೀಡಲಾದ ಭರವಸೆಗಳನ್ನು ಸರ್ಕಾರ ಈಡೇರಿಸಿ, ನುಡಿದಂತೆ ನಡೆದಿದೆ' ಎಂದು ಬ್ಯಾಡಗಿ ಮತ ಕ್ಷೇತ್ರದ ಶಾಸಕ ಹಾಗೂ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಹೇಳಿದರು.

ಇಲ್ಲಿನ ವಿನಾಯಕನಗರದ ಬಳ್ಳಾರಿ ಕಲ್ಯಾಣಮಂಟಪದಲ್ಲಿ ಶನಿವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾವೇರಿ, ತಾಲ್ಲೂಕು ಆಡಳಿತ, ತಾಲ್ಲೂಕು ಪಂಚಾಯಿತಿ ಆಶ್ರಯದಲ್ಲಿ ಐದು ಗ್ಯಾರಂಟಿ ಯೋಜನೆಗಳ ಹೋಬಳಿ ಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

'ಗ್ಯಾರಂಟಿ ಯೋಜನೆಯಿಂದ ಅಭಿವೃದ್ಧಿಗೆ ಹಣ ಇಲ್ಲ ಎಂದು ಟೀಕೆ ಮಾಡುವವರಿಗೆ ಮುಖ್ಯಮಂತ್ರಿ ಅವರು ಪ್ರತಿಯೊಂದು ವಿಧಾನ ಸಭಾ ಕ್ಷೇತ್ರಕ್ಕೆ □ 25 ಕೋಟಿ ಅನುದಾನ ನೀಡಿದ್ದಾರೆ. ಸುಳ್ಳು ಹೇಳುವ ಬಿಜೆಪಿಗರ ಮಾತಿಗೆ ಜನತೆ ಕಿವಿಗೊಡಬಾರದು. ಮುಂದೆ ನಮಗೆ ಸಹಾಯ ಮಾಡಬೇಕು' ಎಂದರು.

ಶಾಸಕ ಪ್ರಕಾಶ ಕೋಳಿವಾಡ ಮಾತನಾಡಿ, 'ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರದ ಐದು ಗ್ಯಾರಂಟಿ ಯೋಜನೆಗಳಿಂದ ತಾಲ್ಲೂಕಿನಲ್ಲಿ 80 ಸಾವಿರ ಮಹಿಳೆಯರಲ್ಲಿ 72 ಸಾವಿರ ಮಹಿಳೆಯರು ನೆಮ್ಮದಿಯ ಬದುಕು ಸಾಗಿಸುತ್ತಿದ್ದಾರೆ. ಉಳಿದ 8 ಸಾವಿರ ಮಹಿಳೆಯರ ಬ್ಯಾಂಕ್ ಖಾತೆ ಸಮಸ್ಯೆಗಳನ್ನು ಕೂಡಲೇ ಬಗೆಹರಿಸಿ ಅವರಿಗೂ ಯೋಜನೆ ತಲುಪಿಸಲಾಗುವುದು' ಎಂದು ಹೇಳಿದರು.

ಕ್ಷೇತ್ರದ ಜನರು ಈ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕ ಪ್ರಗತಿ ಹೊಂದಬೇಕು. ಮುಂಬರುವ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಬೇಕು ಎಂದು ಮನವಿ ಮಾಡಿದ ಅವರು ಅಧಿಕಾರಿಗಳು ಉಳಿದ ಫಲಾನುಭವಿಗಳ ಸಮಸ್ಯೆಗಳನ್ನು ಕೂಡಲೇ ಬಗೆ ಹರಿಸಬೇಕು ಎಂದು ಸೂಚಿಸಿದರು.

ತಹಶೀಲ್ದಾರ್ ಕೆ. ಗುರುಬಸರಾಜ, ರುಕ್ಮಿಣಿ ಸಾವುಕಾರ, ನಗರಸಭೆ ಸದಸ್ಯ ಪುಟ್ಟಪ್ಪ ಮರಿಯಮ್ಮನವರ ಮಾತನಾಡಿದರು.ಸಿಡಿಪಿಒ ಪಾರ್ವತಿ ಹುಂಡೇಕಾರ, ಹೆಸ್ಕಾಂ ಇಲಾಖೆ ಮೋಹನ ಐರಣಿ, ಕೆಎಸ್ಆರ್‌ಟಿಸಿ ವ್ಯವಸ್ಥಾಪಕ ಪ್ರಶಾಂತ ಸಂಗೇರ್ಸಿ ಹಾಗೂ ಆಹಾರ ಮತ್ತು ನಾಗರಿಕ ಸರಬುರಾಜು ಇಲಾಖೆಯ ಶಿವಪ್ಪ ವನಳ್ಳಿ ಅವರು ಇಲಾಖೆಗಳ ಸಾಧನೆಯನ್ನು ಸಾರ್ವಜನಿಕರಿಗೆ ತಿಳಿಸಿದರು.

# ಮಲಪ್ರಭೆ ಮಡಿಲಲ್ಲಿ ಹರಿದ ಭಕ್ತಿಯ ಹೊಳೆ

ಯಲ್ಲಮ್ಮನಗುಡ್ಡ(ಬೆಳಗಾವಿ ಜಿಲ್ಲೆ): ಮಲಪ್ರಭೆ ಮಡಿಲಲ್ಲಿರುವ ಸವದತ್ತಿ ತಾಲ್ಲೂಕಿನ ಯಲ್ಲಮ್ಮನಗುಡ್ಡದಲ್ಲಿ ಭಾರತ ಹುಣ್ಣಿಮೆ ಜಾತ್ರೆ ಪ್ರಯುಕ್ತ ಶನಿವಾರ ಭಕ್ತಿಯ ಹೊಳೆಯೇ ಹರಿಯಿತು. ಒಂದೆಡೆ ಅಲಂಕೃತ ಬಂಡಿಗಳ ಸಾಲು, ಮತ್ತೊಂದೆಡೆ ಪಾದಯಾತ್ರೆ ಮೂಲಕ ಅಮ್ಮನ ಸನ್ನಿಧಿಯತ್ತ ಹೆಜ್ಜೆಹಾಕಿದ ಯಾತ್ರಾರ್ಥಿಗಳು, ಇನ್ನೊಂದೆಡೆ ಪ್ರವಾಹದಂತೆ ಹರಿದುಬಂದ ಜನ, ಕಣ್ಮನ ಸೆಳೆದ ಜಾನಪದ ಕಲಾತಂಡಗಳ ಪ್ರದರ್ಶನ ಹೀಗೆ...ಸಾಲು ಸಾಲು ದೃಶ್ಯಗಳಿಗೆ ಏಳುಕೊಳ್ಳದ ನಾಡು ಸಾಕ್ಷಿಯಾಯಿತು.

ಹುಣ್ಣಿಮೆ ಅಂಗವಾಗಿ ಪೌರಾಣಿಕ, ಐತಿಹಾಸಿಕ ಮತ್ತು ಧಾರ್ಮಿಕವಾಗಿ ತ್ರಿವೇಣಿ ಸಂಗಮದಂತಿರುವ ಯಲ್ಲಮ್ಮನಗುಡ್ಡ ಕಳೆಗಟ್ಟಿತ್ತು. ಕರ್ನಾಟಕ, ಮಹಾರಾಷ್ಟ್ರ, ಆಂಧ್ರ ಪ್ರದೇಶ, ತೆಲಂಗಾಣ ಮತ್ತಿತರ ರಾಜ್ಯಗಳಿಂದ ಅಪಾರ ಸಂಖ್ಯೆಯಲ್ಲಿ ಬಂದಿದ್ದ ಭಕ್ತರು, ನಸುಕಿನ ಜಾವ 4ರಿಂದಲೇ ಸರದಿ ಸಾಲಿನಲ್ಲಿ ನಿಂತು ಯಲ್ಲಮ್ಮ ದೇವಿ ದರ್ಶನ ಪಡೆದರು. ಸಂಪ್ರದಾಯದಂತೆ ವಿವಿಧ ಧಾರ್ಮಿಕ ಕಾರ್ಯ ನೆರವೇರಿಸಿದರು. ಕೆಲವರು ಉರುಳುಸೇವೆ, ದೀನಮಸ್ಕಾರ ಹಾಕಿ ಹರಕೆ ತೀರಿಸಿದರು. ಜೋಗತಿಯರ ಚೌಡಕಿ ನಿನಾದ ಜನರನ್ನು ಭಕ್ತಿಯ ಅಲೆಯಲ್ಲಿ ತೇಲಿಸಿತು. ಗುಡ್ಡದ ತುಂಬೆಲ್ಲ ಭಂಡಾರದ ಮಳೆ ಸುರಿಯಿತು.

ವಿಜಯಪುರ, ಬಾಗಲ ಕೋಟೆ, ಗದಗ, ಕೊಪ್ಪಳ ಜಿಲ್ಲೆಗಳಿಂದ ಪಾದಯಾತ್ರೆ ಮೂಲಕ ಆಗಮಿಸಿದ ಭಕ್ತರಲ್ಲಿ ಸಂತೃಪ್ತಭಾವ ಕಾಣುತ್ತಿತ್ತು. 'ಯಲ್ಲವ್ವನ ನಮಗ ಬದುಕು. ಅಮ್ಮ ನಮ್ಮ ಬದುಕಿಗೆ ಏನು ಬೇಕೋ, ಅದನ್ನೆಲ್ಲ ಕರುಣಿಸ್ಯಾಳ. ಬನದ ಹುಣಿವ್ಯಾಗ ನನ್ನ



ಮಗ ನಡ್ಕೊಂತ ಗುಡ್ಡಕ್ಕ ಬಂದಿದ್ದ. ಈ ಸಲ ನಾನು ಬಂದಿದ್ದಕ್ಕ ಖುಷಿಯಾಗೇತಿ' ಎಂದು ಗದಗ ಜಿಲ್ಲೆಯ ರೋಣದ 62ರ ಹರೆಯದ ದಾನಪ್ಪ ಕಿರೇಸೂರ ಹೇಳಿದರು.

'ನಾವ 10 ವರ್ಷದಿಂದ ಪಾದಯಾತ್ರೆ ಮೂಲಕ ಗುಡ್ಡಕ್ಕೆ ಬರುತ್ತಿದ್ದೇವೆ. ಇದರಿಂದಾಗಿ ಕೃಷಿಯಲ್ಲಿ ಏಳ್ಗೆಯಾಗಿದೆ. ಕೌಟುಂಬಿಕವಾಗಿಯೂ ಪ್ರಗತಿಯಾಗಿದೆ. ಹಾಗಾಗಿ ಈ ಸಲವೂ ಐದು ಮಂದಿ ಸೇರಿಕೊಂಡು, ದಿನಕ್ಕೆ 40 ಕಿ.ಮೀ ನಡೆಯುತ್ತ ಈಗ ಗುಡ್ಡ-ಕ್ಕೆ ಬಂದಿದ್ದೇವೆ' ಎನ್ನುತ್ತಾರೆ ಕೊಪ್ಪಳದ ಅಲ್ಲಾನಗರದ ಯಮನೂರಪ್ಪ ಕುಕನೂರ.

'ಕೊರೊನಾ ಹಿನ್ನೆಲೆಯಲ್ಲಿ ಇತ್ತೀಚಿನ ವರ್ಷಗಳಲ್ಲಿ ಉತ್ತಮ ವ್ಯಾಪಾರವಾಗಿರಲಿಲ್ಲ. ಆದರೆ, ಈ ಬಾರಿ ಬನದ ಹುಣ್ಣಿಮೆ ಮತ್ತು ಭಾರತ ಹುಣ್ಣಿಮೆಯಲ್ಲಿ ಭಕ್ತರು ಉತ್ಸಾಹದಿಂದ ಕುಂಕುಮ-ಭಂಡಾರ ಖರೀದಿಸಿದ್ದರಿಂದ ಉತ್ತಮ ವಹಿವಾಟು ನಡೆದಿದೆ' ಎಂದು ವ್ಯಾಪಾರಿ ಮಾರುತಿ ರಾವಳ ಸಂತಸಪಟ್ಟರು. ಬಳೆ, ತೆಂಗಿನಕಾಯಿ, ಕರ್ಪೂರ, ಕುಂಕುಮ-ಭಂಡಾರ, ಜಗ, ಪೂಜಾ ಸಾಮಗ್ರಿಗಳನ್ನು ಮಾರುವವರು ಖುಷಿಪಟ್ಟರು.

ಹಿರೇಕುಂಬಿಯಿಂದ ಯಲ್ಲಮ್ಮನಗುಡ್ಡಕ್ಕೆ ಸಾಗುವ ಮಾರ್ಗದಲ್ಲಿ ದಿನವಿಡೀ ವಾಹನದಟ್ಟಣೆ ಇತ್ತು. ಗುಡ್ಡದ ತುಂಬೆಲ್ಲ ಅಳವಡಿಸಿದ್ದ ಸಿ.ಸಿ.ಟಿ.ವಿ ಕ್ಯಾಮೆರಾಗಳ ಮೂಲಕ ಜಾತ್ರೆಯ ಪ್ರತಿ ಚಟುವಟಿಕೆ ಮೇಲೂ ನಿಗಾ ಇರಿಸಲಾಗಿತ್ತು.'ಭಾರತ ಹುಣ್ಣಿಮೆ ಜಾತ್ರೆ ಮಾರ್ಚ್ 10ರವರೆಗೆ ನಡೆಯಲಿದೆ. ಅಲ್ಲಿಯವರೆಗೂ ಭಕ್ತರು ಗುಡ್ಡ-ಕ್ಕೆ ಆಗಮಿಸಿ, ದೇವಿಗೆ ಪೂಜೆ ಸಲ್ಲಿಸಲಿದ್ದಾರೆ. ದೇವಸ್ಥಾನದಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮ ನೆರವೇರಲಿವೆ' ಎಂದು ಯಲ್ಲಮ್ಮ ದೇವಸ್ಥಾನ ಕಾರ್ಯನಿರ್ವಾಹಕ ಅಧಿಕಾರಿ ಎಪಿಬಿ ಮಹೇಶ' ತಿಳಿಸಿದರು.

ಬಹುತೇಕ ಜಾತ್ರೆ ಮುಗಿಸಿ ಇಳಿಹೊತ್ತಿನಲ್ಲಿ ಕೆಲವರು ತಮ್ಮೂರಿನತ್ತ ಸಂಭ್ರಮದಿಂದ ಮರಳುತ್ತಿದ್ದರೆ, ಮತ್ತೊಂದೆಡೆ ವಾರಾಂತ್ಯವಾದ ಭಾನುವಾರ ಧಾರ್ಮಿಕ ವಿಧಿವಿಧಾನ ಕೈಗೊಳ್ಳಲು ಭಕ್ತರು ಗುಡ್ಡದತ್ತ ಆಗಮಿಸುತ್ತಿರುವುದು ಕಂಡುಬಂತು. ಗುಡ್ಡದೊಂದಿಗೆ ಸುತ್ತಲಿನ ಗ್ರಾಮಗಳಲ್ಲೂ ಪೊಲೀಸರು ಭದ್ರತೆ ಕೈಗೊಂಡಿದ್ದರು.



## ಕರ್ನಾಟಕ ದರ್ಶನ ಪ್ರವಾಸಕ್ಕೆ ಚಾಲನೆ

ಸಿಂಧನೂರು: 2023-24ನೇ ಸಾಲಿನ ಕರ್ನಾಟಕ ದರ್ಶನ ವಿದ್ಯಾರ್ಥಿಗಳ ಪ್ರವಾಸಕ್ಕೆ ಶಾಸಕ ಹಂಪನಗೌಡ ಬಾದರ್ಲಿ ಅವರು ನಗರದ ಪಿಡಬ್ಲ್ಯುಡಿ ಕ್ಯಾಂಪಿನ ಜೂನಿಯರ್ ಕಾಲೇಜು ಮೈದಾನದಲ್ಲಿ ಶನಿವಾರ ಚಾಲನೆ ನೀಡಿ-ದರು.

ನಂತರ ಮಾತನಾಡಿದ ಅವರು, 'ಇತಿಹಾಸ ಎಂದಿಗೂ ಯಾರು ಮರೆಯಬಾರದು.

ಇತಿಹಾಸ ಪ್ರಸಿದ್ಧ ವಿವಿಧ ಪ್ರೇಕ್ಷಣೀಯ ಸ್ಥಳಗಳನ್ನು ಈಗಿನ ವಿದ್ಯಾರ್ಥಿಗಳಿಗೆ ದರ್ಶನ ಮಾಡಿಸುವ ಮೂಲಕ ಇತಿಹಾಸದ ಬಗ್ಗೆ ಅರಿವು ಮೂಡಿಸುವ ಕೆಲಸವನ್ನು ಶಿಕ್ಷಕರು ಮಾಡಬೇಕು. ವಿದ್ಯಾರ್ಥಿಗಳು ಪ್ರವಾಸಕ್ಕೆ ಹೋಗುವ ಸ್ಥಳಗಳ ಕುರಿತು ಸಮಗ್ರ ಮಾಹಿತಿ ಪಡೆದು ಇತರರಿಗೆ ತಿಳಿಸುವಂತಾಗಬೇಕು' ಎಂದರು.

ಪ್ರಭಾರ ಕ್ಷೇತ್ರ ಶಿಕ್ಷಣಾಧಿಕಾರಿ ಬಸವಲಿಂಗಪ್ಪ ಮಾತನಾಡಿ, 'ತಾಲ್ಲೂಕಿನ ವಿವಿಧ ಶಾಲೆಗಳ ಸಿ, ಎಟಿ, ಒಬಿಸಿ ಸೇರಿದಂತೆ ಒಟ್ಟು 146 ವಿದ್ಯಾರ್ಥಿಗಳು ಮೂರು ದಿನಗಳ ಕಾಲ ಹಂಪಿ, ಬಾದರ್ಲಿ, ಐಹೊಳೆ, ಪಟ್ಟದಕಲ್ಲು, ಕೂಡಲಸಂಗಮ, ವಿಜಯಪುರ ಮತ್ತಿತರ ಪ್ರೇಕ್ಷಣೀಯ ಸ್ಥಳಗಳಿಗೆ ಭೇಟಿ ನೀಡಲಿದ್ದಾರೆ' ಎಂದರು.ಪ್ರೌಢಶಾಲಾ ಸಹಶಿಕ್ಷಕರ ಸಂಘದ ಅಧ್ಯಕ್ಷ ಮಲ್ಲಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಹಿರೇಮಠ, ಬ್ಲಾಕ್ ಕಾಂಗ್ರೆಸ್ ನಗರ ಘಟಕದ ಅಧ್ಯಕ್ಷ ಖಾಜಿಮಲಿಕ್ ವಕೀಲ ಸೇರಿದಂತೆ ವಿವಿಧ ಪ್ರೌಢ ಶಾಲೆಗಳ ಮುಖ್ಯಶಿಕ್ಷಕರು ಇದ್ದರು.

## ಕಾನೂನುಬಾಹಿರ ನಿವೇಶನ ಖಾತೆ; ಎಚ್ಚರಿಕೆಗೆ ಸೂಚನೆ



ಬೀದರ್: 'ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ನಿವೇಶನಗಳ ಡಿಜಿಟಲ್ ಖಾತೆಗಳನ್ನು ಮಾಡಿಸಿಕೊಳ್ಳುವ ಮೊದಲು ಎಲ್ಲಾ ಸೂಕ್ತ ದಾಖಲೆಗಳನ್ನು ಪರಿಶೀಲಿಸಿ, ನಿಯಮಾನುಸಾರ ಪಂಚಾಯಿತಿಯಿಂದಲೇ ಖಾತೆಗಳನ್ನು ಮಾಡಿಸಿಕೊಳ್ಳಬೇಕು. ಕಾನೂನು ಬಾಹಿರ, ಅನಧಿಕೃತ ಖಾತೆಗಳ ವಿಷಯದಲ್ಲಿ ಎಚ್ಚರಿಕೆ ವಹಿಸಬೇಕು' ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ ತಿಳಿಸಿದ್ದಾರೆ. ತಾಲ್ಲೂಕಿನ ಗ್ರಾಮ ಪಂಚಾಯಿತಿಗಳಲ್ಲಿ ವಸತಿ ನಿರ್ಮಾಣಕ್ಕಾಗಿ, ಕೃಷಿ ಭೂಮಿಯನ್ನು ಸಕ್ಷಮ ಪ್ರಾಧಿಕಾರದಿಂದ ಭೂ ಪರಿವರ್ತನೆ ಆಗದೇ ಇರುವ ಹಾಗೂ ಸಕ್ಷಮ ಪ್ರಾಧಿಕಾರದಿಂದ (ವಿನ್ಯಾಸ ಬಡಾವಣೆ) ಲೇಔಟ್ ಅನುಮೋದನೆ ಪಡೆಯದೆ, ಕೃಷಿ ಭೂಮಿಯಲ್ಲಿ, ಇನಾಮ, ಸರ್ಕಾರಿ, ಅರಣ್ಯ ಇಲಾಖೆ ಜಮೀನಿನಲ್ಲಿ ನಿವೇಶನಗಳಿಗೆ ಅನಧಿಕೃತವಾಗಿ 11-ಬಿ, 9, 11-ಎ ಡಿಜಿಟಲ್ ಖಾತೆಗಳನ್ನು ನೀಡಲಾಗುತ್ತಿದೆ ಎಂದು ಸಾರ್ವಜನಿಕರು ಕೆಲವು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ (ಪಿಡಿಒ) ವಿರುದ್ಧ ಜಿಲ್ಲಾ ಪಂಚಾಯಿತಿಗೆ ದೂರುಗಳನ್ನು ಸಲ್ಲಿಸಿದ್ದರು. ಸದರಿ ದೂರುಗಳನ್ನು ನಿಯಮಾನುಸಾರ ಪರಿಶೀಲಿಸಿ, ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮಕ್ಕೆ ಆದೇಶಿಸಲಾಗಿದೆ. ಈ ಕ್ರಮ ಯಾವುದೇ ಒಬ್ಬ ಅಧಿಕಾರಿ ವಿರುದ್ಧವಲ್ಲ. ಸಾರ್ವಜನಿಕರ ಹಿತಕ್ಕಾಗಿ ಕೈಗೊಳ್ಳಲಾಗಿದೆ ಎಂದು ಶುಕ್ರವಾರ ಪ್ರಕಟಣೆಯಲ್ಲಿ ಸ್ಪಷ್ಟಪಡಿಸಿದ್ದಾರೆ.ಫೆ. 21ರಂದು ಪಿಡಿಒಗಳ ಸಭೆ ಕರೆದು ಅನಧಿಕೃತವಾಗಿ ಡಿಜಿಟಲ್ ಖಾತೆಗಳನ್ನು ಮಾಡದಂತೆ ಹಾಗೂ ಸರ್ಕಾರಕ್ಕೆ ಆರ್ಥಿಕ ನಷ್ಟವಾಗುವ ಯಾವುದೇ ಕೆಲಸಗಳನ್ನು ಮಾಡದಂತೆ ಸೂಚನೆ ಕೊಡಲಾಗಿದೆ ಎಂದು ತಿಳಿಸಿದ್ದಾರೆ.

# ಕಾನ್‌ಸ್ಟೆಬಲ್ ಹುದ್ದೆಗೆ ಪರೀಕ್ಷೆ ವಸ್ತ್ರ ಸಂಹಿತೆ ಪಾಲಿಸಲು ಸೂಚನೆ

ಬೀದರ್: ರಾಜ್ಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಕಾನ್‌ಸ್ಟೆಬಲ್ (ಸಿವಿಲ್), ಸೇವಾ ನಿರತ ಮತ್ತು 1,137 ಬ್ಯಾಕ್‌ಲಾಗ್ ಹುದ್ದೆಗಳಿಗೆ ಲಿಖಿತ ಪರೀಕ್ಷೆ ಭಾನುವಾರ (ಫೆ.25) ಬೆಳಿಗ್ಗೆ 11 ರಿಂದ ಮಧ್ಯಾಹ್ನ 12.30ರ ವರೆಗೆ ನಡೆಯಲಿದ್ದು, ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳು ವಸ್ತ್ರ ಸಂಹಿತೆ ಪಾಲಿಸಬೇಕೆಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಚನ್ನಬಸವಣ್ಣ ಎಸ್.ಎಲ್. ಸೂಚಿಸಿದ್ದಾರೆ.

ಪುರುಷ ಮತ್ತು ತೃತೀಯ ಲಿಂಗದ ಪುರುಷ ಅಭ್ಯರ್ಥಿಗಳು ಅರ್ಧ ತೋಳಿನ ಕಾಲರ್ ರಹಿತ ಶರ್ಟ್ ಧರಿಸಬೇಕು. ಜಿಪ್ ಪ್ಯಾಕೆಟ್‌ಗಳು, ದೊಡ್ಡ ಬಟನ್‌ಗಳು ಇರುವ ಶರ್ಟ್‌ಗಳನ್ನು ಧರಿಸತಕ್ಕದ್ದಲ್ಲ. ಜೀನ್ಸ್ ಪ್ಯಾಂಟ್ ಮತ್ತು ಹೆಚ್ಚಿನ ಜೇಬುಗಳಿರುವ ಪ್ಯಾಂಟ್‌ಗಳನ್ನು ಧರಿಸತಕ್ಕದ್ದಲ್ಲ. ಪರೀಕ್ಷಾ ಕೇಂದ್ರದೊಳಗೆ ಶೂಗಳನ್ನು ನಿಷೇಧಿಸಲಾಗಿದೆ.



ಅಭ್ಯರ್ಥಿಗಳು ತೆಳುವಾದ ಅಡಿ ಭಾಗವಿರುವ ಪಾದರಕ್ಷೆಗಳನ್ನು (ಚಪ್ಪಲಿ) ಧರಿಸುವುದು. ಕುತ್ತಿಗೆ ಸುತ್ತ ಯಾವುದೇ ಲೋಹದ ಆಭರಣಗಳು, ಉಂಗುರ, ಕಡಗಗಳನ್ನು ಧರಿಸುವುದು ನಿಷೇಧಿಸಲಾಗಿದೆ ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಹಿಳಾ ಮತ್ತು ತೃತೀಯಲಿಂಗ ಮಹಿಳಾ ಅಭ್ಯರ್ಥಿಗಳು ಉದ್ದನೆಯ ಕಸೂತಿ ಹೂಗಳು, ಬ್ರೂಚ್‌ಗಳು ಅಥವಾ ಬಟನ್‌ಗಳನ್ನು ಹೊಂದಿರುವ ಬಟ್ಟೆಗಳನ್ನು ಧರಿಸುವುದು ನಿಷೇಧಿಸಲಾಗಿದೆ. ಪರೀಕ್ಷೆಯ ದಿನದಂದು ಪೂರ್ಣ ತೋಳಿನ ಬಟ್ಟೆಗಳನ್ನು/ ಜೀನ್ಸ್ ಪ್ಯಾಂಟ್ ಧರಿಸಬಾರದು. ಅದರ ಬದಲಾಗಿ ಅರ್ಧ ತೋಳಿನ ಬಟ್ಟೆಗಳನ್ನು ಮುಜುಗರವಾಗದಂತೆ ಧರಿಸಬೇಕು. ಎತ್ತರವಾದ ಹಿಮ್ಮಡಿ ಶೂ/ಚಪ್ಪಲಿ, ದಪ್ಪ ಅಡಿ ಭಾಗ ಹೊಂದಿರುವ ಶೂ/ ಚಪ್ಪಲಿ ಧರಿಸಬಾರದು. ತೆಳುವಾದ ಅಡಿಭಾಗ ಹೊಂದಿರುವ ಚಪ್ಪಲಿ ಧರಿಸಬೇಕು. ಮಂಗಳ ಸೂತ್ರ ಮತ್ತು ಕಾಲುಂಗುರ ಹೊರತುಪಡಿಸಿ ಬೇರೆ ಆಭರಣ ಧರಿಸಿಕೊಂಡು ಬರುವಂತಿಲ್ಲ ಎಂದು ಸೂಚಿಸಿದ್ದಾರೆ.ಲಿಖಿತ ಪರೀಕ್ಷೆಗೆ ಅರ್ಹರಿರುವ ಅಭ್ಯರ್ಥಿಗಳಿಗೆ ಎಸ್.ಎಂ.ಎಸ್ ಮೂಲಕ ಮಾಹಿತಿ ನೀಡಲಾಗುವುದು. ಲಿಂಕ್ ಸಹ ಕಳುಹಿಸಲಾಗುವುದು.

# ಸೊಳ್ಳೆ ನಿಯಂತ್ರಣಕ್ಕೆ ಗಪ್ಪಿ-ಗಂಬೂಸಿಯಾ

ಹುಬ್ಬಳ್ಳಿ: ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯ ವಿವಿಧ ಬಡಾವಣೆಗಳಲ್ಲಿ ಸೊಳ್ಳೆಗಳ ಕಾಟ ಹೆಚ್ಚಿರುವ ಹಿನ್ನೆಲೆಯಲ್ಲಿ, ಅವುಗಳ ನಿಯಂತ್ರಣಕ್ಕೆ ಪಾಲಿಕೆ ಮುಂದಾಗಿದೆ. ಕೆರೆ, ಕಟ್ಟೆ, ರಾಜಕಾಲುವೆಗೆ ಹಾಗೂ ನೀರು ನಿಲ್ಲುವ ಪ್ರದೇಶಗಳಲ್ಲಿ ಗಪ್ಪಿ-ಗಂಬೂಸಿಯಾ ಮೀನಿನ ಮರಿಗಳನ್ನು ಬಿಡುತ್ತಿದೆ.

ಪಾಲಿಕೆ ಆರೋಗ್ಯ ವಿಭಾಗದ ಸಿಬ್ಬಂದಿ ಶುಕ್ರವಾರ ನಗರದ ತೋಳನಕೆರೆ ಹಾಗೂ ಶಿರೂರು ಪಾರ್ಕ್ ಬಳಿ ಹರಿಯುವ ರಾಜಕಾಲುವೆಯ ನೀರು ನಿಂತ ಸ್ಥಳದಲ್ಲಿ ಗಪ್ಪಿ-ಗಂಬೂಸಿಯಾ ಮೀನಿನ ಮರಿಗಳನ್ನು ಬಿಟ್ಟಿದ್ದಾರೆ. ಆ ಮೂಲಕ ಸೊಳ್ಳೆಗಳ ಉತ್ಪತ್ತಿಗೆ ಕಡಿವಾಣ ಹಾಕಲು ಮುಂದಾಗಿದ್ದಾರೆ. 20 ಸಾವಿರ ಮೀನಿನ ಮರಿಗಳನ್ನು ಬಿಟ್ಟಿದ್ದಾರೆ.

'ಸೊಳ್ಳೆಗಳ ನಿಯಂತ್ರಣ-ಕ್ಕೆ ಈಗಾಗಲೇ ನಾವು 2 ಲಕ್ಷ ಗಪ್ಪಿ-ಗಂಬೂಸಿಯಾ ಮೀನಿನ ಮರಿಗಳನ್ನು ಅಣ್ಣಿಗೇರಿಯಿಂದ ತಂದು ಸಂಗ್ರಹಿಸಿ ಇಟ್ಟುಕೊಂಡಿದ್ದೇವೆ. ಮೊದಲ ಹಂತದ ರೂಪದಲ್ಲಿ ರಾಜಕಾಲುವೆ ಹರಿಯುವ ಶಿರೂರು ಪಾರ್ಕ್ ಮತ್ತು ಬನಶಂಕರಿ ಬಡಾವಣೆ ಸುತ್ತಲಿನ ನೀರು ಸಂಗ್ರಹ



ಪ್ರದೇಶಗಳಲ್ಲಿ ಮೀನಿನ ಮರಿಗಳನ್ನು ಬಿಟ್ಟಿದ್ದೇವೆ' ಎಂದು ಪಾಲಿಕೆಯ ಆರೋಗ್ಯಾಧಿಕಾರಿ ಡಾ. ಶ್ರೀಧರ ದಂಡಪ್ಪನವರ 'ಪ್ರಜಾವಾಣಿ'ಗೆ ತಿಳಿಸಿದರು.

'ಸೊಳ್ಳೆಯಿಂದ ಮಲೇರಿಯಾ, ಡೆಂಗೆ, ಚಿಕೂನ್‌ಗುನ್ಯಾ, ಮೆದುಳುಜ್ವರ ಹರಡುತ್ತವೆ. ಸೊಳ್ಳೆ ಕಡಿತ ಸಣ್ಣದಾದರೂ, ಪರಿಣಾಮ ಕೆಟ್ಟದಾಗಿರುತ್ತದೆ. ಈ ರೋಗಗಳಿಗೆ ನಿರ್ದಿಷ್ಟ ಚಿಕಿತ್ಸೆ ಇಲ್ಲದಿರುವುದರಿಂದ ಮುಂಜಾಗ್ರತಾ ಕ್ರಮವಾಗಿ ಮೀನುಗಳನ್ನು ಕೆರೆ, ನೀರು ನಿಲ್ಲುವ ಪ್ರದೇಶಗಳಲ್ಲಿ ಬಿಡುವುದು ಪರಿಹಾರವಾಗಿದೆ. ಸೊಳ್ಳೆ ಲಾರ್ವಾ ಹಂತದಲ್ಲಿರುವಾಗಲೇ ಮೀನಿನ ಮರಿಗಳು ತಿನ್ನುವುದರಿಂದ ಸೊಳ್ಳೆ ನಿಯಂತ್ರಣ ಸಾಧ್ಯ' ಎಂದರು.'ನೀರು ನಿಲ್ಲುವ ಹಾಗೂ ಸೊಳ್ಳೆಗಳ ಕಾಟ ಹೆಚ್ಚಿರುವ ಪ್ರದೇಶಗಳನ್ನು ಗುರುತಿಸಲಾಗುತ್ತಿದ್ದು, ಲಾರ್ವಾ ಸಮೀಕ್ಷೆ ನಡೆದಿದೆ. ಆರೋಗ್ಯ ಸಿಬ್ಬಂದಿ ಜೊತೆ 200ಕ್ಕೂ ಹೆಚ್ಚು ನರ್ಸಿಂಗ್ ವಿದ್ಯಾರ್ಥಿಗಳು ಸಮೀಕ್ಷೆಯಲ್ಲಿ ಪಾಲ್ಗೊಂಡಿದ್ದಾರೆ. ಮನೆಮನೆಗಳಿಗೆ ತೆರಳಿ, ಮಾಹಿತಿ ಸಂಗ್ರಹಿಸಲಾಗುತ್ತಿದ್ದು, ನೀರಿನ ಟ್ಯಾಂಕ್, ಫ್ಲವರ್ ಪ್ಲಾಟ್, ಬಾಟಲಿ, ಟಾಯರ್ ಹಾಗೂ ಸುತ್ತಲಿನ ವಾತಾವರಣದಲ್ಲಿ ನೀರು ನಿಲ್ಲದಂತೆ ಜಾಗೃತಿ ವಹಿಸಲು ಸೂಚನೆ ನಿಡಲಾಗುತ್ತಿದೆ. ಜೊತೆಗೆ, ನಗರದ ಎಲ್ಲ ಬಡಾವಣೆಗಳಲ್ಲೂ ಫಾಗಿಂಗ್ ಮಾಡಲಾಗುತ್ತಿದೆ' ಎಂದು ಪಾಲಿಕೆ ಆಯುಕ್ತ ಈಶ್ವರ ಉಳ್ಳಾಗಡ್ಡಿ ತಿಳಿಸಿದರು.

**'ಮೊದಲು ರಾಜಕಾಲುವೆ ಶುಚಿಗೊಳಿಸಿ'**

'ಶಿರೂರು ಪಾರ್ಕ್ ಅಯ್ಯಪ್ಪಸ್ವಾಮಿ ಗುಡಿ ಬನಶಂಕರ ಬಡಾವಣೆ ದೇವಿನಗರ ಲಿಂಗರಾಜದ ಬಳಿ ರಾಜಕಾಲುವೆ ಹರಿಯುತ್ತಿದ್ದು 3 ಕಿ.ಮೀ. ವ್ಯಾಪ್ತಿಯಲ್ಲಿ ಸೊಳ್ಳೆಗಳು ಹೆಚ್ಚಳವಾಗಿದೆ. ಸ್ಮಾರ್ಟ್‌ಸಿಟಿ ಯೋಜನೆಯಡಿ ಗ್ರೀನ್ ಮೊಬಿಲಿಟಿ ಕಾರಿಡಾರ್ ಕಾಮಗಾರಿ ನಡೆಯುತ್ತಿದ್ದು ಒಳಚರಂಡಿ ಮತ್ತು ಚರಂಡಿ ಪೈಪ್‌ಲೈನ್ ಅಳವಡಿಸಲು ಅಲ್ಲಲ್ಲಿ ಕಾಲುವೆಯ ನೀರನ್ನು ತಡೆದು ನಿಲ್ಲಿಸಲಾಗಿದೆ. ನಿಂತ ನೀರಿನಲ್ಲಿ ಕೊಳಚೆ ಗಿಡಗಳು ಬೆಳೆದು ಸೊಳ್ಳೆಗಳು ಹೆಚ್ಚಾಗಿವೆ' ಎನ್ನುವುದು ಸ್ಥಳೀಯರ ವಾದ. 'ಮೂರು ವರ್ಷಗಳಿಂದ ರಾಜಕಾಲುವೆ ಅಭಿವೃದ್ಧಿ ಕಾಮಗಾರಿ ನಡೆಯುತ್ತಿದ್ದು ಇನ್ನೂ ಪೂರ್ಣವಾಗಿಲ್ಲ. ಸೊಳ್ಳೆಗಳ ಕಾಟ ಹೆಚ್ಚಾಗಿದ್ದು ಸಂಜೆ ವೇಳೆ ಮನೆಯಿಂದ ಹೊರಗೆ ಬಂದರೆ ಮುತ್ತಿಕ್ಕುತ್ತವೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka. Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089